ಸಂಪುಟ: 04 ಸಂಚಿಕೆ: 334 ಪುಟಗಳು: 08 ಶನಿವಾರ 15 ಫೆಬ್ರವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

**ಮುಂಜಾನೆ ಮಾತು**
ನಿಮ್ಮ ಕೆಲಸವನ್ನು ನೀವು ನಿಷ್ಠೆ, ಪ್ರಾಮಾಣಿಕವಾಗಿ ಮಾಡಿ ಅದರಿಂದ ಯಾವುದೇ ಪ್ರತಿಫಲವನ್ನು ನಿರೀಕ್ಷಿಸಬೇಡಿ.

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಕೆಪಿಸಿಸಿ ಮಾನವ ಹಕ್ಕು ವಿಭಾಗದ ಅಧ್ಯಕ್ಷರಾಗಿ ಸಿ.ಎಂ. ಧನಂಜಯ ಆಯ್ಕೆ



• ಉದಯವಾಹಿನಿ ಬೆಂಗಳೂರು

ಈ ಹಿಂದೆ ಕರ್ನಾಟಕ ರಾಜ್ಯ ಸರ್ಕಾರದ ರಾಜ್ಯ ಕೈಗಾರಿಕಾ ಮೂಲಸೌಕರ್ಯ ಅಭಿವೃದ್ಧಿ ನಿಗಮ (ಕೆಎಸ್ಐಡಿಸಿ) ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದ ಮತ್ತು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ರಾಜ್ಯ ವಕ್ತಾರರಾಗಿ ಶಿಸ್ತು ಸಮಿತಿ ಸದಸ್ಯರಾಗಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಕಾನೂನು ಮತ್ತು ಮಾನವ ಹಕ್ಕುಗಳ ವಿಭಾಗದ ಅಧ್ಯಕ್ಷರಾಗಿ 2008ರಿಂದ 20ನೇ ಸಾಲಿನವರೆಗೆ ಸೇವೆ ಸಲ್ಲಿಸಿದ್ದ ಸಿ.ಎಂ. ಧನಂಜಯರವರು ಮತ್ತೊಮ್ಮೆ ಕೆಪಿಸಿಸಿ ಕಾನೂನು ಮಾನವ ಹಕ್ಕುಗಳು ಮತ್ತು ಮಾಹಿತಿ ಹಕ್ಕು ವಿಭಾಗದ ಅಧ್ಯಕ್ಷರಾಗಿ ಮತ್ತೊಮ್ಮೆ ಮರು ಆಯ್ಕೆಗೊಂಡಿದ್ದಾರೆ.

ಇವರ ಆಯ್ಕೆಗೆ ಸಹಕರಿಸಿದ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ. ಲೋಕಸಭೆ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿ.ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳಾದ. ಕೆ ಸಿ ವೇಣುಗೋಪಾಲ್. ಮತ್ತು ರಣದೀಪ್ ಸಿಂಗ್ ಸುರ್ಜೇವಾಲಾ ಹಾಗೂ ಕಾಂಗ್ರೆಸ್ ರಾಷ್ಟ್ರೀಯ ಕಾನೂನು ಮನವ ಹಕ್ಕುಗಳ ಮಾಹಿತಿ ವಿಭಾಗದ ರಾಷ್ಟ್ರೀಯ ಅಧ್ಯಕ್ಷರಾದ ಅಭಿಷೇಕ್ ಮನುಸಿಂಗ್ ವಿ. ಕರ್ನಾಟಕದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ. ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಸಿಎಂ ಧನಂಜಯರವರ ಅಪಾರ ಅಭಿಮಾನಿ ವರ್ಗ ಅಭಿನಂದನೆ ಸಲ್ಲಿಸಿದ್ದಾರೆ.

**ಅಭಿನಂದನೆಗಳ ಮಹಾಪೂರ**
ಕರ್ನಾಟಕ ರಾಜ್ಯ ಅರಣ್ಯ ಪರಿಸರ ವೇದಿಕೆಯ ಅಧ್ಯಕ್ಷರಾದ ಕೆ ಎನ್ ಮಂಜುನಾಥ್. ಗೌರವಾಧ್ಯಕ್ಷರು ಹಾಗೂ ಉದಯವಾಹಿನಿ ಪತ್ರಿಕೆ ಸಂಪಾದಕರಾದ ಟಿ. ಹೊಂಬೇಗೌಡ. ಪ್ರಧಾನ ಕಾರ್ಯದರ್ಶಿ ಮತ್ತು ಉದಯವಾಹಿನಿ ಪತ್ರಿಕೆಯ ರಾಜ್ಯ ವಿಶೇಷ ವರದಿಗಾರ. ಬಾಣಾವರ ಉಮೇಶ್ ರಾಜ್ಯ ಕಾರ್ಯದರ್ಶಿಗಳಾದ ವಿ ಬಿ ಶ್ರೀಧರ್ ಅಭಿನಂದಿಸಿದ್ದಾರೆ.

## ತಾರಕಕಕ್ಕೇರಿದ ಸಿಎಂ, ಡಿಸಿಎಂ ಜಟಾಪಟಿ

• ಉದಯವಾಹಿನಿ, ಬೆಂಗಳೂರು


ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವಿನ ಸಮರ ದಿನದಿಂದ ದಿನಕ್ಕೆ ತಾರಕಕ್ಕೇರುತ್ತಿದೆ. ಒಂದು ಕಡೆ ಮುಖ್ಯಮಂತ್ರಿಗಳ ಆಪ್ತ ಸಚಿವರು, ಪ್ರದೇಶ ಕಾಂಗ್ರೆಸ್ ಅಧ್ಯಕ್ಷರ ಬದಲಾಣೆ ಮತ್ತು ಉಳಿದ ಅವಧಿಗೂ ಸಿದ್ದರಾಮಯ್ಯ ಅವರನ್ನೇ ಸಿಎಂ ಹುದ್ದೆಯಲ್ಲಿ ಮುಂದುವರಸಬೇಕು ಎಂದು ಲಾಬಿ ನಡೆಸುತ್ತಿದ್ದರೆ ಇತ್ತ ಡಿಕೆಶಿವಕುಮಾರ್ ಸಿಎಂ ಆಪ್ತ ಸಚಿವರಿಗೆ ಠಕ್ಕರ್ ಕೊಡಲು ಮುಂದಾಗಿದ್ದಾರೆ. ರಾಜ್ಯ ಸಚಿವ ಸಂಪುಟವನ್ನು ಪುನಾರಚಿಸಬೇಕು ಎಂಬ ಹೊಸ ಬೇಡಿಕೆಯನ್ನು ಶಿವಕುಮಾರ್ ಹೈಕಮಾಂಡ್ ಮುಂದಿಟ್ಟಿದ್ದು, ಈ ಮೂಲಕ ಸಿಎಂ ಪಾಳಯದ ಸಚಿವರನ್ನು ಮಾಜಿ ಮಾಡಲು ಮುಂದಾಗಿದ್ದಾರೆ.





ಸಿದ್ದರಾಮಯ್ಯ ಅವರ ಹತ್ತು ಸಚಿವರನ್ನು ಕೆಳಗಿಳಿಸಲು ಪಟ್ಟು ಹಿಡಿದಿದ್ದಾರೆ. ಬಲ್ಲ ಮೂಲಗಳ ಪ್ರಕಾರ ಇತ್ತೀಚೆಗೆ ದೆಹಲಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಶಿವಕುಮಾರ್ ಈ ಬೇಡಿಕೆಯನ್ನು ಹೈಕಮಾಂಡ್ ಮುಂದಿಟ್ಟಿದ್ದಾರೆ ಎಂದು ಅವರ ಆಪ್ತರು ಖಚಿತಪಡಿಸಿದ್ದಾರೆ. ಅಸಮರ್ಥ ಸಚಿವರ ಪಟ್ಟಿಯನ್ನು ಹೈಕಮಾಂಡ್ ಗೆ ಸಲ್ಲಿಸಿರುವ ಡಿಕೆಶಿ ಶತಾಯಗತಾಯ ಅವರನ್ನು ಸಂಪುಟದಿಂದ ಕೈ ಬಿಡಬೇಕು ಎಂದು ಒತ್ತಾಯಿಸಿದ್ದಾರೆ. ಇವರಲ್ಲಿ ಬಹುತೇಕ ಸಿದ್ದರಾಮಯ್ಯ ಅವರ ಬೆಂಬಲಿಗ ಸಚಿವರೇ ಇದ್ದಾರೆ ಎನ್ನುವುದು ಗಮನಾರ್ಹ. ಕೊಟ್ಟ ಖಾತೆಯನ್ನು ನಿರ್ವಹಿಸದೆ ಸದಾ ಹೇಳಿಕೆಗಳನ್ನು ನೀಡುತ್ತಾ ಕಾಲಹರಣ ಮಾಡುತ್ತಿದ್ದಾರೆ ಎಂದೂ ಇವರು ದಾಖಲೆಗಳ ಸಹಿತ ವರಿಷ್ಠರಿಗೆ ಮನವರಿಕೆ ಮಾಡಿಕೊಡುವ ಪ್ರಯತ್ನ ಮಾಡಿದ್ದಾರೆ. ಡಿಕೆ ಶಿವಕಮಾರ್ ನೀಡಿರುವ ಪಟ್ಟಿಯಲ್ಲಿ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಸಹಕಾರ ಸಚಿವ ಕೆ.ಎನ್. ರಾಜಣ್ಣ, ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ವಕ್ಸ್ ಮತ್ತು ವಸತಿ ಸಚಿವ ಜಮೀರ್ ಅಹಮದ್ ಖಾನ್, ಅಬಕಾರಿ ಸಚಿವ ಆರ್. ಬಿ.ತಿಮ್ಮಾಪುರ ಮತ್ತು ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಅವರ ಹೆಸರಿದೆ. ಇವರೆಲ್ಲರೂ ಸಿದ್ದರಾಮಯ್ಯ ಅವರ ಕಟ್ಟಾ ಬೆಂಬಲಿಗ ಸಚಿವರು ಎಂದು ಪ್ರತ್ಯೇಕವಾಗಿ ಹೇಳಬೇಕಿಲ್ಲ.

# ಮೋದಿ ಟ್ರಂಪ್ ಸ್ನೇಹ ಸೇತು



**ಹಲವು ಪ್ರಮುಖರೊಂದಿಗೆ ಮೋದಿ ಮಾತು**

• ಉದಯವಾಹಿನಿ, ಬೆಂಗಳೂರು

ಅಮೆರಿಕಾ ಪ್ರವಾಸದಲ್ಲಿರುವ ಪ್ರಧಾನಿ ಮೋದಿ ಅವರೊಂದಿಗಿನ ಮಾತುಕತೆಯ ನಂತರ, ವ್ಯಾಪಾರ ಕೊರತೆಯನ್ನು ತಗ್ಗಿಸಲು ಭಾರತವು ಅಮೆರಿಕದಿಂದ ಹೆಚ್ಚಿನ ತೈಲ, ಅನಿಲ ಮತ್ತು ಮಿಲಿಟರಿ ಯಂತ್ರಾಂಶಗಳನ್ನು ಖರೀದಿಸುವುದಾಗಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದರು, ಆದರೆ ಅಮೆರಿಕಾ ಭಾರತದ ಮೇಲೆ ವ್ಯಾಪಾರದಲ್ಲಿ ಸುಂಕ ಹೇರುವ ನಿರ್ಧಾರದಿಂದ ಹಿಂದೆ ಸರಿಯುವುದಿಲ್ಲ ಎಂದರು.

ಶುಕ್ರವಾರ ಶ್ವೇತಭವನದಲ್ಲಿರುವ ತಮ್ಮ ಓವಲ್ ಕಚೇರಿಯಲ್ಲಿ, ಟ್ರಂಪ್ ಮೋದಿ ಅವರನ್ನು ಹಸ್ತಾಲಾಘವ ನೀಡಿ ಅಪ್ಪುಗೆಯೊಂದಿಗೆ ಸ್ವಾಗತಿಸಿ ಪ್ರಧಾನಿ ಮೋದಿ ತಮ್ಮ ದೀರ್ಘಕಾಲದ ಸ್ನೇಹಿತ ಮತ್ತು ಅದ್ಭುತ ವ್ಯಕ್ತಿ ಎಂದು ಬಣ್ಣಿಸಿದರು. ಉಭಯ ನಾಯಕರು ಮಾತುಕತೆಯ ನಂತರ ಜಂಟಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅಮೆರಿಕ ಅಧ್ಯಕ್ಷರು, ಎರಡೂ ಕಡೆಯಿಂದಲೂ ಶೀಘ್ರದಲ್ಲೇ ಪ್ರಮುಖ ವ್ಯಾಪಾರ ಒಪ್ಪಂದವನ್ನು ಮಾಡಿಕೊಳ್ಳಲು ನೋಡುತ್ತಿದ್ದಾರೆ. ಕೆಲವು ಅಮೆರಿಕನ್ ಉತ್ಪನ್ನಗಳ ಮೇಲೆ ಭಾರತ ವಿಧಿಸಿರುವ ಆಮದು ಸುಂಕಗಳನ್ನು ತೀರಾ ಅನ್ಯಾಯದ ಕಠಿಣ ಕ್ರಮ ಎಂದು ಕರೆದರು. ಭಾರತ ಏನೇ ವಿಧಿಸಿದರೂ, ನಾವು ಅವುಗಳಿಗೆ ಶುಲ್ಕ ವಿಧಿಸುತ್ತೇವೆ. ಆದರೂ ಭಾರತದೊಂದಿಗೆ ಸಂಬಂಧ ಮುಂದುವರಿಸಲು ನೋಡುತ್ತಿದ್ದೇವೆ ಎಂದರು. ಅಮೆರಿಕ ಅಧ್ಯಕ್ಷರು ತಮ್ಮ ಆಡಳಿತವು ಆರಂಭಿಸಿದ ಇಂತಹ ಕ್ರಮಗಳ ಸರಣಿಯಲ್ಲಿ ಇತ್ತೀಚಿನದಾಗಿ ಅಮೆರಿಕದ ಎಲ್ಲಾ ವ್ಯಾಪಾರ ಪಾಲುದಾರರಿಗೆ ಹೊಸ ಪರಸ್ಪರ ಸುಂಕ ನೀತಿಯನ್ನು ಘೋಷಿಸಿದ ಕೆಲವೇ ದಿನಗಳಲ್ಲಿ ಮೋದಿ ಅಮೆರಿಕ ಭೇಟಿ ಕೈಗೊಂಡಿದ್ದಾರೆ. ತಮ್ಮ ಹೇಳಿಕೆಗಳಲ್ಲಿ, ಟ್ರಂಪ್ ಮತ್ತು ಪ್ರಧಾನಿ ಮೋದಿ ಅವರು ಅಮೆರಿಕವನ್ನು ಭಾರತಕ್ಕೆ ತೈಲ ಮತ್ತು ಅನಿಲದ ನಂಬರ್ ಒನ್ ಪೂರೈಕೆದಾರವನ್ನಾಗಿ ಮಾಡುವ ಒಪ್ಪಂದಕ್ಕೆ ಬಂದಿದ್ದಾರೆ ಎಂದು ಹೇಳಿದರು, ಇದು ಸುಮಾರು 45 ಬಿಲಿಯನ್ ಯುಎಸ್ ಡಾಲರ್‌ಗಳಷ್ಟಿರುವ ಭಾರತದೊಂದಿಗಿನ ಅಮೆರಿಕದ ವ್ಯಾಪಾರ ಕೊರತೆಯನ್ನು ಕಡಿಮೆ ಮಾಡುವ ಕ್ರಮಗಳ ಭಾಗವಾಗಿರಬೇಕೆಂದು ಸೂಚಿಸಿದರು.ಒಟ್ಟಾರೆ ರಕ್ಷಣಾ ಪಾಲುದಾರಿಕೆಯನ್ನು ವಿಸ್ತರಿಸಲು ಎರಡೂ ಕಡೆಯವರು ನಿರ್ಧರಿಸಿದ್ದಾರೆ ಎಂದು ಹೇಳಿದರು. ಈ ವರ್ಷದಿಂದ, ನಾವು ಭಾರತಕ್ಕೆ ಮಿಲಿಟರಿ ಮಾರಾಟವನ್ನು ಹಲವು ಶತಕೋಟಿ ಡಾಲರ್‌ಗಳಷ್ಟು ಹೆಚ್ಚಿಸುತ್ತೇವೆ ಎಂದು ಟ್ರಂಪ್ ಹೇಳಿದರು.

**ಯುದ್ಧ ವಿಚಾರದಲ್ಲಿ ಭಾರತ ತಟಸ್ಥ ನಿಲುವನ್ನು ಹೊಂದಿದೆ ಎಂದು ಜಗತ್ತು ಭಾವಿಸುತ್ತದೆ. ಆದರೆ, ಭಾರತ ತಟಸ್ಥವಾಗಿಲ್ಲ. ನಾವು ಶಾಂತಿಯ ಪರವಾಗಿದ್ದೇವೆ ಎಂದು ಮೋದಿ ಪುನಾರುಚ್ಚರಿಸಿದರು.**

### ಸಂಪರ್ಕವನ್ನ ಕಾಯ್ದುಕೊಂಡ ನಾಯಕರು

ನವೆಂಬರ್ 2024 ರಿಂದ ಪ್ರಧಾನಿ ಮೋದಿ ಮತ್ತು ಟ್ರಂಪ್ ಎರಡು ಬಾರಿ ದೂರವಾಣಿಯಲ್ಲಿ ಮಾತನಾಡಿದ್ದಾರೆ. ಪ್ರಧಾನಿ ಮೋದಿಯವರ ವಿಶೇಷ ರಾಯಭಾರಿಯಾಗಿ ಟ್ರಂಪ್ ಪದಗ್ರಹಣ ಸಮಾರಂಭದಲ್ಲಿ ವಿದೇಶಾಂಗ ಸಚಿವ ಎಸ್ ಜೈಶಂಕರ್ ಭಾಗವಹಿಸಿದ್ದರು. ಭೇಟಿಯ ಸಮಯದಲ್ಲಿ, ವಿದೇಶಾಂಗ ಸಚಿವ ಜೈಶಂಕರ್ ಯುಎಸ್ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರನ್ನು ಭೇಟಿಯಾಗಿದ್ದರು ಮತ್ತು ಜನವರಿ 2025 ರಲ್ಲಿ ಕ್ವಾಡ್ ವಿದೇಶಾಂಗ ಸಚಿವರ ಸಭೆಯಲ್ಲಿ ಭಾಗವಹಿಸಿದ್ದರು.

### ಟ್ರಂಪ್ ದೀರ್ಘಕಾಲದ ಸ್ನೇಹಿತ

ಅಮೆರಿಕಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ ತಮ್ಮನ್ನು ತಬ್ಬಿಕೊಂಡು ಆತ್ಮೀಯವಾಗಿ ಬರಮಾಡಿಕೊಂಡಿರುವ ಟ್ರಂಪ್ ಅವರು, ದೀರ್ಘಕಾಲದ ಸ್ನೇಹಿತ ಎಂದು ಮೋದಿ ಬಣ್ಣಿಸಿದ್ದಾರೆ.ನಿಮ್ಮನ್ನು ಮಿಸ್ ಮಾಡಿಕೊಳ್ಳುತ್ತಿದ್ದೆ. ಈಗ ಮತ್ತೆ ನಿಮ್ಮನ್ನು ಭೇಟಿಯಾಗಿರುವುದು ಖುಷಿಯ ವಿಚಾರ ಎಂದು ಮೋದಿ ಬಣ್ಣಿಸಿದರು.

**ಮೋದಿ ನನ್ನ ಆತ್ಮೀಯ ಸ್ನೇಹಿತ**

**ಭೇಟಿಗೂ ಮುನ್ನವೇ ಟ್ರಂಪ್ ಗುಣಗಾನ**

**ರಾಣಾ ಹಸ್ತಾಂತರಕ್ಕೆ ಟ್ರಂಪ್ ಸಮ್ಮತಿ**

**■ ಮೋದಿ ಆಲಂಗಿಸಿಕೊಂಡು ಸ್ವಾಗತ ಕೋರಿದ ಅಧ್ಯಕ್ಷ ಟ್ರಂಪ್ ■ ಬಾಂಧವ್ಯ ವೃದ್ಧಿಗೆ ಮುದ್ರೆ ಟ್ರಂಪ್-ಮೋದಿ ಒಪ್ಪಿಗೆ ■ ಮೋದಿ-ಟ್ರಂಪ್ ಮಾತುಕತೆ ■ ಭಾರತಕ್ಕೆ F-35 ಯುದ್ಧ ವಿಮಾನ ಪೂರೈಕೆಗೆ ಅಮೆರಿಕಾ ಒಪ್ಪಿಗೆ ■ ಮಹತ್ವದ ವ್ಯಾಪಾರ ಒಪ್ಪಂದಕ್ಕೆ ಮುಂದು**

### ಎಫ್ -35 ಜೆಟ್



ಭಾರತಕ್ಕೆ ಎಫ್ -35 ಸ್ಟೆಲ್ತ್ ಯುದ್ಧ ವಿಮಾನಗಳನ್ನು ಒದಗಿಸಲು ನಾವು ದಾರಿ ಮಾಡಿಕೊಡುತ್ತಿದ್ದೇವೆ. ಎಫ್ 35 ಜೆಟ್‌ಗಳನ್ನು ವಿಶ್ವದ ಅತ್ಯಂತ ಮಾರಕ, ಬದುಕುಳಿಯಬಹುದಾದ ಮತ್ತು ಸಂಪರ್ಕಿತ ಯುದ್ಧ ವಿಮಾನಗಳು ಎಂದು ಕರೆಯಲಾಗುತ್ತದೆ. ಪ್ರಪಂಚದಾದ್ಯಂತದ ಮೂಲಭೂತ ಇಸ್ಲಾಮಿಕ್ ಭಯೋತ್ಪಾದನೆಯ ಬೆದರಿಕೆಯನ್ನು ಎದುರಿಸಲು ಭಾರತ ಮತ್ತು ಅಮೆರಿಕ ಮುಂದಿನ ದಿನಗಳಲ್ಲಿ ಇನ್ನಷ್ಟು ಬಲಿಷ್ಠವಾಗಿ ಕೆಲಸ ಮಾಡುತ್ತದೆ ಎಂದರು.

### ಭಾರತ ಶಾಂತಿಯ ಪರವಾಗಿದೆ

ರಷ್ಯಾ-ಉಕ್ರೇನ್ ಸಂಘರ್ಷದ ಕುರಿತ ಪ್ರಶ್ನೆಗಳಿಗೆ ಪ್ರಧಾನಿ ಮೋದಿ ಮತ್ತು ಅಧ್ಯಕ್ಷ ಟ್ರಂಪ್ ಕೂಡ ಉತ್ತರಿಸಿದರು. ಯುದ್ಧವನ್ನು ಕೊನೆಗೊಳಿಸಲು ಸಂಭವನೀಯ ಪರಿಹಾರವನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ ಡೊನಾಲ್ಡ್ ಟ್ರಂಪ್ ಅವರ ಪ್ರಯತ್ನಗಳನ್ನು ನಾನು ಬೆಂಬಲಿಸುತ್ತೇನೆ. ಯುದ್ಧದ ಸಮಯದಲ್ಲಿ ಭಾರತ ತಟಸ್ಥವಾಗಿದೆ ಎಂದು ಜಗತ್ತು ಹೇಗೋ ಭಾವಿಸುತ್ತದೆ. ಆದರೆ ಭಾರತ ತಟಸ್ಥವಾಗಿಲ್ಲ ಎಂದು ನಾನು ಪುನರುಚ್ಚರಿಸಲು ಬಯಸುತ್ತೇನೆ. ವಾಸ್ತವವಾಗಿ, ಭಾರತ ಶಾಂತಿಯ ಪರವಾಗಿದೆ ಎಂದು ಮೋದಿ ಹೇಳಿದರು.

### ಮೈಕ್ರೋಫೈನಾನ್ಸ್ ಸಂಸ್ಥೆಗಳ ಕಿರುಕುಳ

## ನಿಯಂತ್ರಣಕ್ಕೆ ಸರ್ಕಾರಿ ಆದೇಶ ಜಾರಿ

• ಉದಯವಾಹಿನಿ, ಬೆಂಗಳೂರು

ಮಧ್ಯಮ ಹಾಗೂ ಕೆಳ ಮಧ್ಯಮ ವರ್ಗದವರು ಸಣ್ಣ ಫೈನಾನ್ಸ್ ಸಂಸ್ಥೆಗಳಲ್ಲಿ ಸಾಲ ಪಡೆದು ಮರುಪಾವತಿಸುವಲ್ಲಿ ವಿಳಂಬ ಮಾಡುವ ಸಾಲಗಾರರ ಮೇಲೆ ಮೈಕ್ರೋಫೈನಾನ್ಸ್ ಸಂಸ್ಥೆಗಳು, ಸಾಲ ನೀಡಿಕೆ ಏಜೆನ್ಸಿಗಳು ಹಾಗೂ ಲೇವಾದೇವಿಗಾರರು ನೀಡುವ ಕಿರುಕುಳ ಹಾಗೂ ಬಲವಂತದ ವಸೂಲಾತಿ ಕ್ರಮಗಳನ್ನು ನಿಯಂತ್ರಿಸಲು ಸರ್ಕಾರವು ಕರ್ನಾಟಕ ಕಿರು (ಮೈಕ್ರೋ) ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಅಧ್ಯಾದೇಶ 2025ನ್ನು ಫೆಬ್ರವರಿ 12 ರಿಂದ ಜಾರಿಗೊಳಿಸಿದ್ದು ಆದೇಶದ ಮುಖ್ಯಾಂಶಗಳು ಹೀಗಿವೆ.

ಮೈಕ್ರೋಫೈನಾನ್ಸ್ ಸಂಸ್ಥೆಗಳು ಸಾಲಗಾರರಿಂದ ಯಾವುದೇ ಭದ್ರತೆ ಪಡೆಯಬಾರದು, ಗ್ರಾಹಕರಿಗೆ ವಿಧಿಸುವ ಬಡ್ಡಿದರಗಳ ಬಗ್ಗೆ ಪಾರದರ್ಶಕವಾಗಿ ಲಿಖಿತ ರೂಪದಲ್ಲಿ ತಿಳಿಸಬೇಕು. ಈ ಆದೇಶವು ಭಾರತೀಯ ರಿಸರ್ವ್ ಬ್ಯಾಂಕ್, ಕೇಂದ್ರ ಮತ್ತು ರಾಜ್ಯ ಸರ್ಕಾರಗಳಲ್ಲಿ ನೊಂದಣಿಯಾಗದ ಮೈಕ್ರೋಫೈನಾನ್ಸ್ ಸಂಸ್ಥೆಗಳಿಗೆ ಮಾತ್ರ ಅನ್ವಯಿಸುತ್ತದೆ. ನೊಂದಾಯಿತ ಸಂಸ್ಥೆಗಳಿಂದ ಅಂದಾಜು 60 ಸಾವಿರ ಕೋಟಿ ರೂ ಸಾಲವನ್ನು ಸುಮಾರು 1.09 ಕೋಟಿ ಸಾಲಗಾರರು ಪಡೆದಿದ್ದಾರೆ. ನೊಂದಣಿಯಾಗದ ಸಂಸ್ಥೆಗಳಿಂದ ಸಾಲ ಪಡೆದವರ ಮಾಹಿತಿ ನಿಖರವಾಗಿ ಲಭ್ಯವಿಲ್ಲವಾದರೂ, ಅಂದಾಜು 40 ಸಾವಿರ ಕೋಟಿ ರೂ ಸಾಲ ಪಡೆದಿದ್ದಾರೆ ಎಂಬ ಮಾಹಿತಿ ಇದೆ.

ಮೈಕ್ರೋಫೈನಾನ್ಸ್ ಸಂಸ್ಥೆಗಳು ತಾವು ವ್ಯವಹರಿಸುತ್ತಿರುವ ಜಿಲ್ಲೆಗಳ ಜಿಲ್ಲಾಧಿಕಾರಿಗಳಲ್ಲಿ ನೋಂದಣಿ ಯಾಗುವುದು ಕಡ್ಡಾಯವಾಗಿದೆ. ಈ ಸಂಸ್ಥೆಗಳು ವಿಧಿಸುವ ಬಡ್ಡಿದರ, ಸಾಲಗಾರರ ಮಾಹಿತಿ ಹಾಗೂ ಸುಸ್ತಿ ಸಾಲಗಳ ವಿವರಗಳನ್ನು ಜಿಲ್ಲಾಧಿಕಾರಿಗಳಿಗೆ ನೀಡಬೇಕು. ತ್ರೈ ಮಾಸಿಕ ಮತ್ತು ವಾರ್ಷಿಕ ವ್ಯವಹಾರದ ವಿವರಗಳನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಬೇಕು. ನಿಗದಿತ ಅವಧಿಯಲ್ಲಿ ಮಾಹಿತಿಯನ್ನು ಸಲ್ಲಿಸದಿದ್ದರೆ 6 ತಿಂಗಳ ಕಾರಗೃಹವಾಸ ಅಥವಾ 10 ಸಾವಿರೂ ವರೆಗೆ ದಂಡ ಅಥವಾ ಎರಡೂ ಶಿಕ್ಷೆಗೆ ಗುರಿಯಾಗುತ್ತಾರೆ.

ವಿವಾದಗಳನ್ನು ಇತ್ಯರ್ಥಗಳನ್ನು ಒಂಬುಡ್ಸ್ ಮನ್‌ಗಳನ್ನು ಸರ್ಕಾರ ಅಧಿಸೂಚನೆ ಮೂಲಕ ನೇಮಕ ಮಾಡುವ ಅಧಿಕಾರ ಹೊಂದಿರುತ್ತದೆ. ಬಲವಂತದ ವಸೂಲಾತಿಗಳನ್ನು ಕೈಗೊಳ್ಳುವ ವ್ಯಕ್ತಿಯು ವಿಚಾರಣೆಗೆ ಒಳಪಡುತ್ತಾನೆ, ಹತ್ತು ವರ್ಷಗಳ ವರೆಗೆ ವಿಸ್ತರಿಸಬಹುದಾದ ಕಾರಗೃಹವಾಸ ಶಿಕ್ಷೆ ಹಾಗೂ 5 ಲಕ್ಷ ರೂ ವರೆಗೆ ವಿಧಿಸಬಹುದಾದ ಜುಲ್ಮಾನೆಗೆ ಒಳಪಡುತ್ತಾನೆ. ಈ ಅಪರಾಧಗಳು ಸಂಜೆಯ (ಕಾಗ್ನಿಜಿಬಲ್) ಹಾಗೂ ಜಾಮೀನು ರಹಿತ (ನಾನ್ ಬೇಲೆಬಲ್) ಪ್ರಕರಣಗಳಾಗಿರುತ್ತವೆ.

ಯಾವುದೇ ಪೊಲೀಸ್ ಅಧಿಕಾರಿಗಳು ಇಂತಹ ಪ್ರಕರಣಗಳನ್ನು ನೊಂದಣಿ ಮಾಡಿಕೊಳ್ಳಲು ನಿರಾಕರಿಸಬಾರದು.ಪೊಲೀಸ್ ಉಪ ಅಧೀಕ್ಷಕ (ಡಿವೈಎಸ್‌ಪಿ) ದರ್ಜೆಗಿಂತ ಕಡಿಮೆ ಇಲ್ಲದ ಅಧಿಕಾರಿಯು ಸ್ವತಃ (ಸುಮೊಟೊ) ಪ್ರಕರಣ ದಾಖಲಿಸಬಹುದು. ಸರ್ಕಾರವು ಈ ಅಧ್ಯಾದೇಶದ ಅನುದಾನಕ್ಕೆ ಕಾಲಕಾಲಕ್ಕೆ ನಿರ್ದೇಶನಗಳನ್ನು ನೀಡುವ ಅಧಿಕಾರ ಹೊಂದಿರುತ್ತದೆ. ಈ ಆದೇಶದಿಂದ ಆರ್.ಬಿ.ಐ ಮತ್ತು ಕೇಂದ್ರ / ರಾಜ್ಯ ಸರ್ಕಾರಗಳಿಂದ ನೊಂದಣಿಯಾಗದ ಮೈಕ್ರೋಫೈನಾನ್ಸ್ ಸಂಸ್ಥೆಗಳಲ್ಲಿ ಆರ್ಥಿಕ ಶಿಸ್ತು ಹೆಚ್ಚಿಸಲು ಹಾಗೂ ಸಾಲಗಾರರಿಗೆ ಕಿರುಕುಳ, ಬಲವಂತದ ವಸೂಲಿ ಕ್ರಮಗಳಿಂದ ಮುಕ್ತಿ ನೀಡುತ್ತದೆ.

**ಸಾಲಗಾರರಿಂದ ಯಾವುದೇ ಭದ್ರತೆ ಪಡೆಯಬಾರದು**



### ದೇಶದಲ್ಲಿ 200 ರೂಪಾಯಿ ನೋಟು ನಿಷೇಧ..!?

## ಕೊನೆಗೂ ಸ್ಪಷ್ಟ ಮಾಹಿತಿ ನೀಡಿದ ಆರ್‌ಬಿಐ

• ಉದಯವಾಹಿನಿ, ಬೆಂಗಳೂರು

ಮಾರುಕಟ್ಟೆಯಲ್ಲಿ 200 ಮತ್ತು 500 ರೂಪಾಯಿಗಳ ನಕಲಿ ನೋಟುಗಳ ಹಾವಳಿ ಗಣನೀಯವಾಗಿ ಹೆಚ್ಚಾಗಿದೆ ಎಂಬ ವರದಿಗಳಿವೆ. ಇತ್ತೀಚೆಗೆ, ಹೆಚ್ಚಿನ ಸಂಖ್ಯೆಯ ನಕಲಿ ನೋಟುಗಳನ್ನು ವಶಪಡಿಸಿಕೊಳ್ಳಲಾಗಿದೆ. ಈ ಹಿನ್ನಲೆಯಲ್ಲಿ 200 ರೂ. ನೋಟುಗಳನ್ನು ಹಿಂಪಡೆಯಲಾಗಿದೆ ಎಂಬ ವದಂತಿ ಹಬ್ಬಿದೆ. 200 ರೂಪಾಯಿ ನೋಟುಗಳ ಚಲಾವಣೆ ರದ್ದತಿಯ ವದಂತಿಗಳ ಕುರಿತು ಆರ್‌ಬಿಐ ಪ್ರಮುಖ ಮಾರ್ಗಸೂಚಿಗಳನ್ನು ಹೊರಡಿಸಿದೆ. ನೋಟು ಅಮಾನ್ಯಕರಣವು ಊಹಾಪೋಹ ಎಂದು ಆರ್‌ಬಿಐ ಸ್ಪಷ್ಟಪಡಿಸಿದೆ. ಯಾವುದೇ ನೋಟುಗಳನ್ನು ಹಿಂಪಡೆಯಲಾಗುವುದಿಲ್ಲ ಎಂದು ತಿಳಿಸಿದೆ. ಆರ್‌ಬಿಐ ಪ್ರಕಟಣೆಯ ಪ್ರಕಾರ, ಪ್ರಸ್ತುತ 200 ರೂ. ನೋಟುಗಳ ಅಮಾನೀಕರಣವಿಲ್ಲ.



ಆದರೆ, ಮಾರುಕಟ್ಟೆಯಲ್ಲಿ ನಕಲಿ ನೋಟುಗಳು ಚಲಾವಣೆಯಲ್ಲಿ ಭಾರಿ ಏರಿಕೆಯಾಗುತ್ತಿರುವುದರಿಂದ ಜನರು ನಕಲಿ ನೋಟುಗಳ ಬಗ್ಗೆ ಜಾಗರೂಕರಾಗಿರಬೇಕು ಎಂದು ಸಲಹೆ ನೀಡಿದೆ. 200 ರೂಪಾಯಿ ನೋಟಿನ ಎಡಭಾಗದಲ್ಲಿ ದೇವನಾಗರಿ ಲಿಪಿಯಲ್ಲಿ 200 ಎಂದು ಬರೆಯಲಾಗಿದೆ. ಮಧ್ಯದಲ್ಲಿ ಗಾಂಧೀಜಿಯವರ ಪ್ರತಿಮೆ ಇದೆ.

ಆರ್‌ಬಿಐ, 'ಭಾರತ್' ಮತ್ತು '200' ಗಳನ್ನು ಸಣ್ಣ ಅಕ್ಷರಗಳಲ್ಲಿ ಬರೆಯಲಾಗಿದೆ. ಬಲಭಾಗದಲ್ಲಿ ಅಶೋಕ ಸ್ತೂಪ ಸ್ಮಾರಕವಿದೆ. ನಕಲಿ ನೋಟುಗಳನ್ನು ತಡೆಯಲು ಸಹಕರಿಸುವಂತೆ ಆರ್‌ಬಿಐ ಸಾರ್ವಜನಿಕರಲ್ಲಿ ಮನವಿ ಮಾಡಿದೆ.









# ಶ್ರೀ ಶಿವಸತ್ಯ ಶನೇಶ್ಚರಸ್ವಾಮಿ ಅದ್ದೂರಿ ಜಾತ್ರಾ ಮಹೋತ್ಸವ

### ಕ್ಷೇತ್ರದಲ್ಲಿ ಶ್ರೀ ಆಂಜನೇಯ ಸ್ವಾಮಿ ಶ್ರೀ ಆದಿ ಶಕ್ತಿ ದುರ್ಗಾಪರಮೇಶ್ವರಿ ದೇವಿ ಹಾಗೂ ಶ್ರೀ ಆದಿಪರಾಶಕ್ತಿ ಕಾಳಿಕಾದೇವಿ ಇವರು ನೆಲೆ

• ವರದಿ ಉಮೇಶ್ ಬಾಣಾವರ
ಉದಯವಾಹಿನಿ ಬೆಂಗಳೂರು

ಮಹಾರಾಷ್ಟ್ರ ರಾಜ್ಯದಲ್ಲಿ ದೇಶದಲ್ಲಿ ಖ್ಯಾತಿ ಪಡೆದಿರುವ ಶ್ರೀ ಶನೇಶ್ವರ ಸ್ವಾಮಿಯು ವಿಶಿಷ್ಟ ರೀತಿಯಲ್ಲಿ ತಮ್ಮದೇ ಆದ ಭಕ್ತಿ ಪರಂಪರೆ ಮತ್ತು ಶಕ್ತಿಯನ್ನು ಪಡೆದು ದೇಶಾದ್ಯಂತ ಭಕ್ತರನ್ನು ತನ್ನತ್ತ ಸೆಳೆಯುತ್ತಿದ್ದು ಹೆಸರುವಾಸಿಯಾಗಿರುವುದು ನಮಗೆಲ್ಲ ತಿಳಿದಿರುವ ಸಂಗತಿ. ಇದೇ ರೀತಿ ಕರ್ನಾಟಕ ರಾಜ್ಯದಲ್ಲಿ ತುಮಕೂರು ಜಿಲ್ಲೆ, ತಿಪಟೂರು ತಾಲ್ಲೂಕಿನ ನೊಣವಿನಕೆರೆ ಹೋಬಳಿಯ ರಂಗನಹಳ್ಳಿ ಎಂಬ ಪುಟ್ಟ ಗ್ರಾಮದ ಬಳಿ ಸ್ವಯಂಭೋ ಉದ್ಭವ ರೀತಿಯಲ್ಲಿ ಸುಮಾರು ವರ್ಷಗಳ ಹಿಂದೆ ಕಾಣಿಸಿಕೊಂಡ ಶ್ರೀ ಶನೇಶ್ವರ ಸ್ವಾಮಿ ಕಳೆದ 21 ವರ್ಷಗಳಿಂದ ತನ್ನ ಕ್ಷೇತ್ರವನ್ನು ರಾಜ್ಯಾದ್ಯಂತ ಹೆಸರು ಗಳಿಸಿ ಕೊಳ್ಳುತ್ತಿದ್ದು ಶ್ರೀ ಅವರ ಕ್ಷೇತ್ರದಲ್ಲೇ ಶ್ರೀ ಆಂಜನೇಯ ಸ್ವಾಮಿ ಶ್ರೀ ಆದಿಶಕ್ತಿ ದುರ್ಗಾಪರಮೇಶ್ವರಿ ದೇವಿ ಹಾಗೂ ಶ್ರೀ ಆದಿಪರಾಶಕ್ತಿ ಕಾಳಿಕಾದೇವಿಯು ನೆಲೆಗೊಂಡಿದ್ದು ಪ್ರತಿವರ್ಷದಂತೆ ಈ ವರ್ಷವೂಸಹ ಲೋಕಕಲ್ಯಾಣಾರ್ಥವಾಗಿ ಶ್ರೀ ಕ್ಷೇತ್ರದಲ್ಲಿ ಹಮ್ಮಿಕೊಳ್ಳುವ ಧಾರ್ಮಿಕ ಆಚರಣೆಗಳು ಈ ವರ್ಷವೂ ಸಹ ಅದ್ದೂರಿಯಾಗಿ ನಡೆಯಲಿದ್ದು, ನಾಡಿನ ಒಳಿತಿಗಾಗಿ ಜನರ ಕಲ್ಯಾಣಕ್ಕಾಗಿ, ಉತ್ತಮ ಮಳೆ ಬೆಳೆಗಾಗಿ, ರೋಗ ರುಜಿನಗಳ ನಿರ್ಮೂಲನೆಗಾಗಿ, ಈ ಬಾರಿ ಅಷ್ಟದಶ ನವಶಕ್ತಿ ಸಿದ್ಧಿದಾತ್ರಿ, ಬೀಜಮಂತ್ರ ಲೋಕಕಲ್ಯಾಣ ಯಾಗ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಶ್ರೀ ಶನೇಶ್ವರ ಸೇವಾ ಸಮಿತಿ ಟ್ರಸ್ಟ್ ಅಧ್ಯಕ್ಷರಾದ ಎಸಿ ಶಂಕ್ರಪ್ಪ, ಉಪಾಧ್ಯಕ್ಷರಾದ ಚೌಧ್ರಿ ಮಹಾಲಿಂಗಪ್ಪ, ಕಾರ್ಯ ದರ್ಶಿ ನಂಜಪ್ಪ, ಸಹಕಾರ್ಯದರ್ಶಿ ಉಮೇಶ್, ಖಜಾಂಚಿ ಶ್ರೀ ಮೋಹನ್ ಮತ್ತು ಕೆ.ಎನ್. ಮಂಜುನಾಥ್ ಸೇರಿದಂತೆ ಸಮಿತಿಯ ಕಾರ್ಯಕಾರಿ ಸಮಿತಿ ಸದಸ್ಯರುಗಳು ತಿಳಿಸಿದ್ದಾರೆ.



**ನಾಡಿನ ಒಳಿತಿಗಾಗಿ ಜನರ ಕಲ್ಯಾಣಕ್ಕಾಗಿ**

**ಗಣ್ಯಾತಿಗಣ್ಯರ ಆಗಮನ**

ಶ್ರೀ ರಂಗನಹಳ್ಳಿಯಲ್ಲಿ ನಡೆಯಲಿರುವ ಅದ್ದೂರಿ ಜಾತ್ರಾ ಮಹೋತ್ಸವಕ್ಕೆ ಕಳೆದ 12ನೇ ತಾರೀಖಿನಿಂದ ಪ್ರಾರಂಭವಾಗಿದೆ. ದಿನಾಂಕ 15ರಂದು ಮಧ್ಯಾಹ್ನ ಸರ್ವಧರ್ಮ ಸಮ್ಮೇಳನವನ್ನು ಹಾಗೂ ಧಾರ್ಮಿಕ ಸಮಾರಂಭವನ್ನು ಏರ್ಪಡಿಸಲಾಗಿದೆ. ಈ ಸಮಾರಂಭದಲ್ಲಿ ನಾಡಿನ ಮಠಮಾನ್ಯಗಳ ಕ್ಯಾತಪೀಠಾಧಿಪತಿಗಳು ಭಾಗವಹಿಸಿ ಧಾರ್ಮಿಕ ಸಂದೇಶವನ್ನು ನೀಡಲಿದ್ದಾರೆ. ಇದೇ ಸಮಾರಂಭದಲ್ಲಿ ಅಧ್ಯಕ್ಷತೆಯನ್ನು ಟಿಪಟೂರು ಕ್ಷೇತ್ರದ ಶಾಸಕರಾದ ಷಡಕ್ಷರಿಯವರು ವಹಿಸಲಿದ್ದು ಸರ್ವಧರ್ಮ ಸಮ್ಮೇಳನದ ಉದ್ಘಾಟನೆಯನ್ನು ತುರುವೇಕೆರೆ ಕ್ಷೇತ್ರದ ಶಾಸಕರಾದ ಎಂಟಿ ಕೃಷ್ಣಪ್ಪ ಉದ್ಘಾಟಿಸಲಿದ್ದಾರೆ . ಕೇಂದ್ರ ಜಲ ಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವರಾದ ವಿ.ಸೋಮಣ್ಣ ಉಪಸ್ಥಿತರಿರಲಿದ್ದು ಮುಖ್ಯ ಅತಿಥಿಗಳಾಗಿ ರಾಜ್ಯದ ಗೃಹ ಸಚಿವರು ತುಮಕೂರು ಜಿಲ್ಲೆ ಉಸ್ತುವಾರಿ ಸಚಿವರಾದ ಜಿ ಪರಮೇಶ್ವರ್ ಹಾಗೂ ಸಹಕಾರ ಸಚಿವರು ಹಾಸನ್ ಜಿಲ್ಲೆ ಉಸ್ತುವಾರಿ ಸಚಿವರಾದ ಕೆ.ಎನ್.ರಾಜಣ್ಣ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಇದಲ್ಲದೆ ಇದೇ ಸಮಾರಂಭದಲ್ಲಿ ಮಾಜಿ ಸಂಸದರು, ಸಚಿವರು, ಹಾಲಿ ಶಾಸಕರು, ಸಚಿವರುಗಳು ಹಾಗೂ ರಾಜಕೀಯ ಪಕ್ಷದ ಮುಖಂಡರುಗಳು ಈ ಸರ್ವಧರ್ಮ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಕಾಮಿಡಿ ಕಿಲಾಡಿಗಳ ಖ್ಯಾತ ಹಾಸ್ಯ ಕಲಾವಿದರಿಂದ ಹಾಸ್ಯೋತ್ಸವ ಸಮಾರಂಭ ಜರುಗಲಿದ್ದು ಈ ಸಮಾರಂಭದಲ್ಲಿ ಸಂತೋಷ್, ಮಾನಸ , ಸೂರಜ್ ಸಹ ಸಮಾರಂಭದಲ್ಲಿ ಪಾಲ್ಗೊಂಡು ಸಾರ್ವಜನಿಕರು ಹಾಗೂ ಭಕ್ತಾದಿಗಳ ಗಮನ ಸೆಳೆಯಲಿದ್ದಾರೆ.

ಸಿದ್ದಗಂಗಾ ಆಸ್ಪತ್ರೆ ಮತ್ತು ಅಮೂಲ್ಯ ಫೌಂಡೇಶನ್ ವತಿಯಿಂದ ಆರೋಗ್ಯ ತಪಾಸಣಾ ಮತ್ತು ರಕ್ತದಾನ ಶಿಬಿರ ಪ್ರತಿವರ್ಷದಂತೆ ಈ ವರ್ಷವೂ ಸಹ ಜಾತ್ರಾ ಮಹೋತ್ಸವದಲ್ಲಿ ಹಮ್ಮಿಕೊಳ್ಳಲಾಗಿದೆ. ಸಿದ್ದಗಂಗಾ ಆಸ್ಪತ್ರೆ ಮತ್ತು ಅಮೂಲ್ಯ ಫೌಂಡೇಶನ್ ಜಂಟಿಯಾಗಿ ನಡೆಸುವ ಉಚಿತ ಆರೋಗ್ಯ ತಪಾಸಣಾ ಮತ್ತು ರಕ್ತದಾನ ಶಿಬಿರದಲ್ಲಿ ಸಹಸ್ರಾರು ಮಂದಿ ಪಾಲ್ಗೊಂಡು ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಲಿದ್ದಾರೆ. ಈ ಬಾರಿ ಇನ್ನೂ ಹೆಚ್ಚಿನ ರೀತಿಯಲ್ಲಿ ಸಾರ್ವಜನಿಕರು ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತಾದಿಗಳು ಇದರ ಪ್ರಯೋಜನವನ್ನು ಪಡೆದುಕೊಳ್ಳಬೇಕೆಂದು ಅಮೂಲ್ಯ ಫೌಂಡೇಶನ್ ಸಂಸ್ಥೆಯ ಅಧ್ಯಕ್ಷರಾದ ಕೆ ಎನ್ ಮಂಜುನಾಥ್ ತಿಳಿಸಿದ್ದಾರೆ





### ಗಮನಸೆಳೆಯುವ ದೇವತೆಗಳು

ತಿಪಟೂರು ಮತ್ತು ತುರುವೇಕೆರೆ ತಾಲ್ಲೂಕಿನ ಸುತ್ತಮುತ್ತಲ ಗ್ರಾಮದ ಗ್ರಾಮ ದೇವತೆಗಳು ಈ ಜಾತ್ರೆಗೆ ಆಗಮಿಸುವುದೇ ವಿಶೇಷ. ಎಲ್ಲಾ ಶಕ್ತಿ ದೇವತೆಗಳು ಶನೇಶ್ವರ ಸ್ವಾಮಿಯ ಶ್ರೀ ಕ್ಷೇತ್ರಕ್ಕೆ ಒಂದು ದಿನ ಮುಂಚೆಯೇ ಆಗಮಿಸಿ ಶ್ರೀ ಕ್ಷೇತ್ರದಲ್ಲಿಯೇ ವಾಸ್ತವ್ಯ ಹೂಡಿ ತೆರಳುವುದನ್ನು ನೋಡುವುದೇ ಜಾತ್ರೆಗೆ ಆಗಮಿಸುವ ಭಕ್ತಾದಿಗಳ ಪುಣ್ಯ. ಈ ಶನೇಶ್ವರ ಸ್ವಾಮಿಯ ಜಾತ್ರಾ ವಿಶೇಷವೆಂದರೆ ಹೆಚ್ಚಾಗಿ ಆಗಮಿಸುವ ಕಾವಿಧಾರಿಗಳಾದ ಕ್ಯಾತಪೀಠಾಧಿಪತಿಗಳು, ದೇವಾನುದೇವತೆಗಳು ಭಾಗವಹಿಸುವುದು ಇಲ್ಲಿನ ವಿಶೇಷವಾಗಿದ್ದು, ಭಕ್ತಾದಿಗಳು ಭಕ್ತಿಪರವಶರಾಗಿ ತಲ್ಲೀನರಾಗುವುದನ್ನು ನೋಡುವುದೇ ಪುಣ್ಯದ ಕೆಲಸ!

### ಸಸಿ ವಿತರಣೆ

ಪ್ರತಿ ವರ್ಷದಂತೆ ಈ ವರ್ಷವೂ ಸಸಿ ನೆಡುವ ಪರಿಸರ ಪ್ರೇಮಿಗಳಿಗೆ ಹಾಗೂ ರೈತರಿಗೆ ಉಚಿತವಾಗಿ ಸಸಿಗಳ ವಿತರಣೆ ನಡೆಸಲಿದ್ದು , ಇದರ ಪ್ರಯೋಜನವನ್ನು ಪಡೆದುಕೊಳ್ಳಬೇಕೆಂದು ಸಂಸ್ಥೆಯ ಅಧ್ಯಕ್ಷರಾದ ಕೆ.ಎನ್.ಮಂಜುನಾಥ್ ತಿಳಿಸಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹8,716 /Gram24ct ₹7,990/Gram22ct | ಬೆಳ್ಳಿ: ₹100.50/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

# ಮಹಾ ಕುಂಭ, ದೃಷ್ಟಿಗೆ ಹೊಸ ಸೃಷ್ಟಿ

ನಿನ್ನೆ ರಾತ್ರಿ ಮೂರು ಘಂಟೆಗೆ ನೆಲೆ ಹುಡುಕುತ್ತ ಸಾಗಿದೆವು. ಕಣ್ಣಾಡಿಸಿದಲ್ಲೆಲ್ಲಾ ಭಿನ್ನ ಭಿನ್ನ ಮಠ ಸಂಪ್ರದಾಯ ಅಖಾಡಾ ಮಹಾಮಂಡಲ ಧಾರ್ಮಿಕ ಗುರುಗಳು ನಿರ್ಮಿಸಿದ ಬಹುದೊಡ್ಡ ಧರ್ಮಚ್ಛತ್ರಗಳು, ತಾತ್ಕಾಲಿಕ ಸಭಾಂಗಣ ದಾಸೋಹನಿಲಯ ವಸತಿಗಳು. ಧರ್ಮಚ್ಛತ್ರವೊಂದರೊಳಗೆ ಹೆಜ್ಜೆ ಇಡುತ್ತಲೇ ಪೋಲೀಸ್ ವಿನಯದಿಂದ ಹೇಳಿದ: ಮಹಾರಾಜ್ ಮೊನ್ನೆ ಇಲ್ಲಿ ಎರಡೂವರೆ ಲಕ್ಷ ಕಳುವಾಯಿತು. ಅಪರಿಚಿತರಿಗೆ ಪ್ರವೇಶವಿಲ್ಲ. ನಮ್ಮಾಶ್ರಮದ ಕಾರ್ಯಕ್ರಮದಲ್ಲಿ ಸ್ವಾಮೀಜಿಗಳ ಪಾದಕಾಣಿಕೆಗಾಗಿ ಇಟ್ಟ ಹಣವನ್ನು ಮಟನ್ ನಾಗರಾಜ್ ಬಾಲರಾಜು ಎಗರಿಸಿದ್ದು ನೆನಪಾಯಿತು. ದುಷ್ಟ ಗೋಮುಖ ವ್ಯಾಘ್ರಗಳು ಇದಕ್ಕಾಗಿ ಇಂಥ ಪುಣ್ಯಮಯ ಕಾರ್ಯಕ್ರಮಗಳಿಗಾಗಿ ಕಾಯುತ್ತಿರುತ್ತಾರೆ.

ವಿಶ್ವ ಹಿತಕಾರಿ ಪರಿಷತ್ನ ಡಾ. ರಾಮಾನಂದ ಮಹಾರಾಜರ ಟೆಂಟ್ ನಲ್ಲಿ ವಿಶ್ರಮಿಸಿದೆವು. ಬೆಳಿಗ್ಗೆ 6ಕ್ಕೆ ಮೋಹನ್ ಅವರಿಂದ ಹರ್ಷಾರೂಢರಿಂದ ಕರೆ ಬಂತು. ಮೋಹನ್ ನಮ್ಮನ್ನು ಕೈಲಾಸಧಾಮ್ ಬಳಿಯ ಬೆಂಗಳೂರಿನ ಓಂಕಾರಾಶ್ರಮದ ಮಹಾಮಂಡಲೇಶ್ವರ ಮಧುಸೂದನಾನಂದ ಸರಸ್ವತೀ ಮಹಾರಾಜ್ರವರ ಕುಟೀರಗಳಿಗೆ ಕರೆದೊಯ್ದರು. ಆತ್ಮಸ್ವರೂಪಾನಂದರು ಕೊಠಡಿ ನೀಡಿದರು. ಹುಲ್ಲಿನ ಬೆಚ್ಚನೆಯ ಕೊಠಡಿ, ಬೆಚ್ಚನೆಯ ಮೆತ್ತನೆಯ ಹಾಸಿಗೆ ಹೊದಿಕೆ, ಬಿಸಿನೀರಿನ ಸ್ನಾನ ಬಿಸಿ ಬಿಸಿ ರುಚಿಕರ ಉಪಾಹಾರ, ಬಳಿಕ ವಿಶ್ರಾಂತಿ ಪ್ರಯಾಣದ ದಣಿವನ್ನು ನಿವಾರಿಸಿದವು.

# ಕರ್ನಾಟಕ ಶಾಸ್ತ್ರೀಯ ಸಂಗೀತ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಾದಜ್ಯೋತಿ ಸಂಗೀತ ಸಭಾ ಟ್ರಸ್ಟ್ ವತಿಯಿಂದ ಸಂಸ್ಥೆಯ ವಜ್ರ ಮಹೋತ್ಸವದ ಅಂಗವಾಗಿ ಫೆಬ್ರವರಿ 15, ಶನಿವಾರ ಸಂಜೆ 6–00ಕ್ಕೆ ಕರ್ನಾಟಕ ಶಾಸ್ತ್ರೀಯ ಸಂಗೀತ. ಗಾಯನ: ವಿದ್ವಾನ್ ಶ್ರೀ ಎಂ.ಬಿ. ಹರಿಹರನ್ ಮತ್ತು ವಿದ್ವಾನ್ ಶ್ರೀಎಸ್. ಅಶೋಕ್ (ಬೆಂಗಳೂರು ಸಹೋದರರು), ಪಿಟೀಲು : ವಿದ್ವಾನ್ ಶ್ರೀ ಮಲ್ಲಜೋಶ್ಯುಲ ಶಿವತೇಜ, ಮೃದಂಗ : ವಿದ್ವಾನ್ ಶ್ರೀ ಎನ್. ವಾಸುದೇವ್, ಘಟ : ವಿದ್ವಾನ್ ಶ್ರೀ ಎಸ್. ಶ್ರೀಶೈಲನ್. ಸ್ಥಳ : ಶ್ರೀ ರಾಮ ಮಂದಿರ, ಈಸ್ಟ್ ಪಾರ್ಕ್ ರಸ್ತೆ,(ಅಂಚೆ ಕಚೇರಿ ಹತ್ತಿರ), ಮಲ್ಲೇಶ್ವರಂ, ಬೆಂಗಳೂರು–560003

# ಕಾರು ಬೈಕ್‌ಗೆ ಡಿಕ್ಕಿ ಮಗ ಸಾವು ತಂದೆ ಗಂಭೀರ

• ಉದಯವಾಹಿನಿ, ಬೆಂಗಳೂರು


ವೇಗವಾಗಿ ಬಂದ ಕಾರು ಡಿಕ್ಕಿ ಹೊಡೆದು ಬೈಕ್ ನಲ್ಲಿ ಹೋಗುತ್ತಿದ್ದ ಮಗ ಸಾವನ್ನಪ್ಪಿ ತಂದೆ ಗಂಭೀರ ಗಾಯಗೊಂಡಿರುವ ದಾರುಣ ಘಟನೆ ನಿನ್ನೆ ರಾತ್ರಿ ಹಾರೋಹಳ್ಳಿ ತಾಲ್ಲೂಕಿನ ಎಸ್ ಪಾಳ್ಯದ ಮಯ್ಯಾಸ್ ಫ್ಯಾಕ್ಟರಿ ಬಳಿ ನಡೆದಿದೆ.

ಬಿಡದಿ ಹೋಬಳಿಯ ಸಿದ್ದಯ್ಯನದೊಡ್ಡಿ ಗ್ರಾಮದ ಸುರೇಶ್ ಅವರ ಪುತ್ರ ಚಿರಂತ್ ಗೌಡ (12) ಮೃತಪಟ್ಟವರು,ಗಾಯಗೊಂಡ ಅವರ ತಂದೆ ಸುರೇಶ್ ಅವರನ್ನು ಸ್ಥಳೀಯ ದಯಾನಂದ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಸ್ಥಿತಿ ಗಂಭೀರವಾಗಿದೆ. ಸುರೇಶ್ ರಾತ್ರಿ ಮಗನನ್ನು ಅಜ್ಜಿ ಮನೆಗೆ ಬಿಡಲು ಬೈಕ್‌ನಲ್ಲಿ ಹೋಗುತ್ತಿದ್ದಾಗ ಕಾರು ಡಿಕ್ಕಿ ಹೊಡೆದಿದೆ. ಡಿಕ್ಕಿ ರಭಸಕ್ಕೆ ಬಾಲಕ ಸ್ಥಳದಲ್ಲೇ ಸಾವನ್ನಪ್ಪಿದ್ದು, ಸುರೇಶ್‌ಗೆ ಗಂಭೀರ ಗಾಯಗಳಾಗಿವೆ. ಸುರೇಶ್ ದಯಾನಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.ಹಾರೋಹಳ್ಳಿ ಪೊಲೀಸರು ಪ್ರಕರಣ ದಾಖಲಿಸಿ ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

# ಎಚ್ಚರಿಕೆಯಿಂದ ಕೆಲಸ ನಿರ್ವಹಿಸಲು ಪೊಲೀಸ್ ಅಧಿಕಾರಿಗಳಿಗೆ ಸಿಎಂ ಸೂಚನೆ

• ಉದಯವಾಹಿನಿ, ಬೆಂಗಳೂರು

ಮೈಸೂರಿನ ಉದಯಗಿರಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಎಂ ಅಕೃತ ಸರ್ಕಾರಿ ನಿವಾಸ ಕಾವೇರಿಯಲ್ಲಿ ಶುಕ್ರವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರು ಅಧಿಕಾರಿಗಳ ಜೊತೆ ಸಭೆ ನಡೆಸಿ ಚರ್ಚಿಸಿದರು. ರಾಜ್ಯ ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್ ಹಾಗೂ ಮೈಸೂರಿನ ಜಿಲ್ಲಾಕಾರಿ, ಪೊಲೀಸ್ ಆಯುಕ್ತರು ಸೇರಿದಂತೆ ಇನ್ನಿತರ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು. ಮೊದಲು ಮೈಸೂರಿನ ಉದಯಗಿರಿ ಪೊಲೀಸ್ ಠಾಣೆ ಮುಂದೆ ಸೋಮವಾರ ರಾತ್ರಿ ನಡೆದ ಘಟನೆಯ ಬಗ್ಗೆ ಸಿಎಂ ಮಾಹಿತಿ ಪಡೆದುಕೊಂಡರು. ವ್ಯಕ್ತಿಯೊಬ್ಬ ಪೋಸ್ಟರ್ ಹಾಕಿದ ಬಗ್ಗೆ ದೂರು ದಾಖಲಿಸಿಕೊಂಡ ನಂತರ ಠಾಣೆಯ ಪೊಲೀಸರು ಯಾವ ರೀತಿ ಕ್ರಮ ಕೈಗೊಂಡಿದ್ದೀರಿ, ಅಂದು ರಾತ್ರಿ ಠಾಣೆ ಮುಂದೆ ಜನ ಸೇರಲು ಹೇಗೆ ಸಾಧ್ಯವಾಯಿತು, ಅಷ್ಟೊಂದು ಜನ ಸೇರಿ ಕಲ್ಲು ಎಸೆಯುತ್ತಿದ್ದಾಗ ಏನು ಮಾಡುತ್ತಿದ್ದಿರಿ ಎಂದು ಸಿಎಂ ಗರಂ ಆದರು. ಇದೊಂದು ಸೂಕ್ಷ್ಮ ಘಟನೆ. ರಾಜ್ಯದಲ್ಲಿಈ ಹಿಂದೆ ಇಂತಹ ಘಟನೆಗಳು ನಡೆದಿವೆ. ಅವುಗಳಿಂದ ಇನ್ನೂ ನೀವು ಪಾಠ ಕಲಿತಿಲ್ಲ. ಈ ಬಗ್ಗೆ ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಬೇಕಿತ್ತು. ಠಾಣೆ ಬಳಿ ಜನರು ಜಮಾಯಿಸಲು ಅವಕಾಶ ಕೊಡಬಾರದಿತ್ತು. ಇನ್ನೂ ಮುಂದೆ ಸಣ್ಣ ಘಟನೆಯೂ ನಡೆಯದಂತೆ ಎಚ್ಚರಿಕೆ ವಹಿಸಬೇಕೆಂದು ಅಧಿಕಾರಿಗಳಿಗೆ ಸಿಎಂ ಸಲಹೆ ಮಾಡಿದರು.



# ಮನೆ ಬಾಗಿಲಿಗೆ ಬರಲಿದೆ ಇ-ಖಾತಾ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ವಾಸಿಸುತ್ತಿರುವ ನಿಮಗೆ ಇನ್ನು ಇ ಖಾತಾ ಸಿಗುತ್ತಿಲ್ಲವೇ ಬೇಜಾರು ಮಾಡಿಕೊಳ್ಳಬೇಡಿ ನಿಮ್ಮ ಮನೆ ಬಾಗಿಲಿದೆ ಬಂದು ಖಾತಾ ವಿತರಿಸುವ ವಿನೂತನ ಕಾರ್ಯಕ್ಕೆ ಬಿಬಿಎಂಪಿ ಮುಂದಾಗಿದೆ. ಆನ್‌ಲೈನ್‌ನಲ್ಲಿ ಇಖಾತಗೆ ಅಪ್ಲೈ ಮಾಡಿರುವ ಆಸ್ತಿ ಮಾಲೀಕರ ಮನೆ ಬಾಗಿಲಿಗೆ ಖಾತ ವಿತರಣೆ ಮಾಡಲಾಗುವುದು ಎಂದು ಬಿಬಿಎಂಪಿ ಅಧಿಕಾರಿಗಳು ತಿಳಿಸಿದ್ದಾರೆ.ಕಳೆದ 6 ತಿಂಗಳಿಂದ ಬಿಬಿಎಂಪಿ ವ್ಯಾಪ್ತಿಯಲ್ಲಿ ಇ ಖಾತೆಗೆ ಲಕ್ಷಾಂತರ ಮಂದಿ ಅರ್ಜಿ ಸಲ್ಲಿಸಿದ್ದಾರೆ. ಆದರೆ, ಕೆಲವರಿಗೆ ಮಾತ್ರ ಇ ಖಾತಾ ಸಿಕ್ಕಿದೆ. ಉಳಿದವರು ಖಾತಾಗೆ ಪರದಾಡುತ್ತಿದ್ದಾರೆ. ಮಾಡಿದ ಲಕ್ಷಾಂತರ ಆಸ್ತಿ ಮಾಲೀಕರು. ಇದುವರೆಗೂ ಸುಮಾರು 11 ಲಕ್ಷ ಕಟ್ಟಡ ಮಾಲೀಕರು ಇಖಾತಾಗೆ ಅರ್ಜಿ ಸಲ್ಲಿಸಿದ್ದಾರೆ. ಆದರೆ, ಕೇವಲ ಒಂದೂವರೆ ಲಕ್ಷ ಮಂದಿಗೆ ಮಾತ್ರ ಇಖಾತಾ ಸಿಕ್ಕಿದೆ. ಖಾತಾಗೆ ಅರ್ಜಿ ಸಲ್ಲಿಸಿರುವವರು ಮೂಲ ಮಾಲೀಕರೇ ಅಥವಾ ಅವರ ಹೆಸರಿನಲ್ಲಿ ಬೇರೆ ಯಾರಾದರೂ ಅರ್ಜಿ ಹಾಕಿರುವವರೇ ಎಂಬ ಅನು ಮಾನ ಬಿಬಿಎಂಪಿ ಅಧಿಕಾರಿಗಳಿಗೆ ಕಾಡತೊಡಗಿದೆ. ಪ್ರತಿನಿತ್ಯ ಸಾವಿರಾರು ಮಂದಿ ನಮಗೆ ಇನ್ನು ಖಾತಾ ಸಿಕ್ಕಿಲ್ಲ ಎಂದು ದೂರು ನೀಡುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿರುವ ಬಿಬಿಎಂಪಿ ಆಯುಕ್ತ ತುಷಾರ್‌ಗಿರಿನಾಥ್ ಅವರು ಖಾತಾಗೆ ಅರ್ಜಿ ಸಲ್ಲಿಸಿರುವವರ ಮನೆ ಬಾಗಿಲಿಗೆ ಖಾತಾ ವಿತರಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಹೀಗಾಗಿ ಕೆಲವೇ ದಿನಗಳಲ್ಲಿ ಕಂದಾಯ ವಿಭಾಗದ ಅಧಿಕಾರಿಗಳಿಗೆ ನಿಮ್ಮ ಬಾಗಿಲಿಗೆ ಬಂದು ಇ ಖಾತಾ ವಿತರಿಸಲಿದ್ದಾರೆ.




# ಎಫ್‌ಪಿಒಗಳಿಗೆ 20 ಕೋಟಿ ರೂ.ವಿಶೇಷ ಅನುದಾನ

## ಸರಿಯಾದ ಸಮಯದಲ್ಲಿ ರೈತರು ಉತ್ಪಾದಿಸುವ ಬೆಳೆಗೆ ಮಾರುಕಟ್ಟೆಯಲ್ಲಿ ಸೂಕ್ತ ಬೆಲೆಯನ್ನು ದೊರಕಿಸಿಕೊಡುವ ಉದ್ದೇಶ

• ಉದಯವಾಹಿನಿ, ಬೆಂಗಳೂರು

ಕೃಷಿ ಸಚಿವರಾದ ಎನ್.ಚಲುವರಾಯ ಸ್ವಾಮಿರವರ ವಿಶೇಷ ಕಾಳಜಿಯ ಪ್ರಯತ್ನದ ಫಲವಾಗಿ ರಾಜ್ಯದ 486 ಅಮೃತ ರೈತ ಉತ್ಪಾದಕ ಸಂಸ್ಥೆಗಳಿಗೆ ಒಟ್ಟು 20 ಕೋಟಿ ರೂ. ಹೆಚ್ಚುವರಿ ಅನುದಾನ ಒದಗಿಸಲಾಗಿದೆ. ರೈತ ಉತ್ಪಾದನಾ ಸಂಸ್ಥೆಗಳನ್ನು ಇನ್ನಷ್ಟು ಬಲಪಡಿಸುವ ನಿಟ್ಟಿನಲ್ಲಿ ನಿರಂತರವಾಗಿ ಶ್ರಮಿಸುತ್ತಿರುವ ಕೃಷಿ ಸಚಿವರು ಮೂರು ವರ್ಷಗಳಿಂದ ಬಿಡುಗಡೆಯಾಗದಿದ್ದ ಈ ಅನುದಾನ ಬಿಡುಗಡೆ ಮಾಡಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಕಳೆದ ಬಿಜೆಪಿ ಸರ್ಕಾರ ಅಮೃತ ರೈತ ಉತ್ಪಾದಕರ ಸಂಸ್ಥೆಗಳ ಸ್ಥಾಪನೆ ಮತ್ತು ಪ್ರೋತ್ಸಾಹಕ್ಕೆ ಅನುದಾನ ಬಿಡುಗಡೆ ಮಾಡುವುದಾಗಿ ಘೋಷಣೆ ಮಾಡಿ, ಯಾವುದೇ ಅನುದಾನ ನೀಡದೆ ಕೇವಲ ಭರವಸೆ ನೀಡಿತ್ತು. ಆದರೆ, ಕೃಷಿ ಸಚಿವರಾದ ಎನ್.ಚಲುವರಾಯಸ್ವಾಮಿರವರು ಎಫ್‌ಪಿಒ ಅನುದಾನ ಒದಗಿಸುವಲ್ಲಿ ಯಶಸ್ವಿಯಾಗಿದ್ದು ರೈತ ಉತ್ಪಾದನಾ ಸಂಸ್ಥೆಗಳು ಕೃಷಿ ಸಚಿವರಿಗೆ ಕೃತಜ್ಞತೆ ಸಲ್ಲಿಸಿವೆ.

**ಪ್ರೋತ್ಸಾಹ ಕಾರ್ಯಕ್ರಮ:** ರಾಜ್ಯದಲ್ಲಿ ರೈತ, ಮೀನುಗಾರರ, ನೇಕಾರರನ್ನು ಸಂಘಟಿಸಿ ಅವರ ಉತ್ಪಾದಕತೆಯನ್ನು ಹೆಚ್ಚಿಸುವುದಲ್ಲದೇ ಅವರು ಬೆಳೆದಂತಹ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಕಲ್ಪಿಸುವ ನಿಟ್ಟಿನಲ್ಲಿ ರೈತರನ್ನು ಸಂಘಟಿಸಿ ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸಿ ಸರಿ ಯಾದ ಸಮಯದಲ್ಲಿ ರೈತರು ಉತ್ಪಾದಿಸುವ ಬೆಳೆಗೆ ಮಾರುಕಟ್ಟೆಯಲ್ಲಿ ಸೂಕ್ತ ಬೆಲೆಯನ್ನು ದೊರಕಿಸಿಕೊಡುವ ಉದ್ದೇಶದಿಂದ ರೈತ ಎಫ್‌ಪಿಒಗಳನ್ನು ಸ್ಥಾಪಿಸಲಾಗಿದೆ. ವಿವಿಧ ಅನುಷ್ಠಾನ ಇಲಾಖೆಗಳಾದ ಜಲಾನಯನ ಅಭಿವೃದ್ಧಿ ಇಲಾಖೆ, ಕೃಷಿ, ತೋಟಗಾರಿಕೆ, ರೇಷ್ಮೆ, ಪಶುಸಂಗೋಪನೆ, ಕೈಮಗ್ಗ, ಜವಳಿ, ಮೀನುಗಾರಿಕೆ ಇಲಾಖೆಗಳ ವತಿಯಿಂದ ಈ ರೈತ ಉತ್ಪಾದನಾ ಸಂಸ್ಥೆಗಳನ್ನು ರಚಿಸಿ ಉತ್ತೇಜಿಸಲಾಗುತ್ತಿದೆ. ಈ ಯೋಜನೆಯಡಿ ಅನುದಾನದ ಕೊರತೆಯಿಂದ ಹಲವಾರು ಎಫ್‌ಪಿಒಗಳು ಪರಿಣಾಮಕಾರಿಯಾಗಿ ವ್ಯಾಪಾರ ವ್ಯವಹಾರ ಪ್ರಾರಂಭಿಸಲು ಸಾಧ್ಯವಾಗದೆ ತೊಂದರೆಗೆ ಈಡಾಗಿದ್ದವು.

**ಕೃಷಿ ಸಚಿವರ ಪ್ರಯತ್ನದ ಫಲ**

2024–25ನೇ ಸಾಲಿನಲ್ಲಿ ಅಮೃತ ರೈತ ಉತ್ಪಾದನಾ ಸಂಸ್ಥೆಗಳ ಉತ್ತೇಜನಕ್ಕೆ 20 ಕೋಟಿ ರೂ.ಅನುದಾನ ಒದಗಿಸಲಾಗುವುದರಿಂದ ರೈತ ಉತ್ಪಾದಕರ ಕಂಪನಿಗಳ ನಿರ್ದೇಶಕರು ಸಿಬ್ಬಂದಿ ವರ್ಗದವರಿಗೆ ಕಂಪನಿಯನ್ನು ಪರಿಣಾಮ ಕಾರಿಯಾಗಿ ಮುನ್ನಡೆಸಲು ಆತ್ಮ ವಿಶ್ವಾಸ ಹೆಚ್ಚಿದ್ದು, ರೈತ ಭಾಂದವರಿಗೆ ಹೆಚ್ಚಿನ ಸೇವೆಗಳನ್ನು ಒದಗಿಸಲು ವಿಶ್ವಾಸ ಮೂಡಿಸಿದೆ. ಆರಂಭಿಕ ಹಂತದಲ್ಲಿದ್ದ ರೈತ ಉತ್ಪಾದಕರ ಕಂಪನಿಗಳಿಗೆ ಅನುದಾನ ಬಿಡುಗಡೆಯು ಕಂಪನಿಗಳನ್ನು ಸುಸ್ಥಿರವಾಗಿ ಕಟ್ಟಲು ಆರಂಭಿಕವಾಗಿ ಸಹಾಯವಾಗುತ್ತಿದೆ. ಅನುದಾನ ಸದ್ಬಳಕೆ ಮಾಡಿಕೊಂಡು ಮುಂಬರುವ ವರ್ಷಗಳಲ್ಲಿ



**ವ್ಯಾಪಾರ ವೃದ್ಧಿ ಮಾಡಲು ಅವಕಾಶ**

### ಅನುದಾನ ಬಿಡುಗಡೆ ಮಾಡಿರುವುದು ಸಹಕಾರಿ

**ರೈತ ಉತ್ಪಾದಕರ ಕಂಪನಿಯ ಮುಖ್ಯ ಉದ್ದೇಶವಾದ ರೈತರ ಆದಾಯವನ್ನು ದ್ವಿಗುಣ ಮಾಡುವುದು, ರೈತರಿಗೆ ಉತ್ತಮ ಗುಣಮಟ್ಟದ ಬಿತ್ತನೆ ಬೀಜದಿಂದ ಮಾರುಕಟ್ಟೆವರೆಗೆ ಪರಿಪೂರ್ಣ ಸೇವೆಯನ್ನು ಒದಗಿಸಲು ಈ ಅನುದಾನ ಬಿಡುಗಡೆ ಮಾಡಿರುವುದು ಸಹಕಾರಿಯಾಗುತ್ತಿದೆ. ರೈತ ಉತ್ಪಾದಕರ ಕಂಪನಿಗಳು ಪರಿಣಾಮ ಕಾರಿ ಕೆಲಸ ಮಾಡಿ ರೈತರಿಗೆ ಅವಶ್ಯಕತೆ ಇರುವ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕಗಳು ಹಾಗೂ ಇತರೆ ಕೃಷಿ ಪರಿಕರಗಳು ಸಮಯಕ್ಕೆ ಸರಿಯಾಗಿ ಸೂಕ್ತ ಬೆಲೆಗೆ ದೊರಕುವಂತಾಗುತ್ತದೆ. ಇದರಿಂದ ರೈತರ ಪರಾವಲಂಬನೆಯನ್ನು ತಪ್ಪಿಸಿ ಸ್ವಾವಲಂಭಿಗಳನ್ನಾಗಿ ಮಾಡುತ್ತದೆ.**

ಸ್ವಾವ ಲಂಭಿಯಾಗಿಕಂಪನಿ ಯನ್ನು ಬೆಳೆಸಲು, ಷೇರು ದಾರರ ಅವಶ್ಯಕತೆಗಳನ್ನು ರೈತರಿಗೆ ಗ್ರಾಮ ಮಟ್ಟದಲ್ಲಿ ಒದಗಿಸಲು ಸಹಕಾರಿಯಾಗಿದೆ. ರೈತರು ಬೆಳೆದ ಬೆಳೆಗಳಿಗೆ ಸೂಕ್ತ ಮಾರುಕಟ್ಟೆ, ನ್ಯಾಯಯುತ ಬೆಲೆ ಸಿಗದ ಕಾರಣ ರೈತರು ನಷ್ಟವನ್ನು ಅನುಭವಿ ಸುವಂತಾಗಿದೆ.

ರೈತ ಉತ್ಪಾದಕರ ಕಂಪನಿಗಳು ಗಟ್ಟಿಯಾದಲ್ಲಿ ರೈತ, ಷೇರುದಾರರಿಗೆ ಸೂಕ್ತ ಮಾರುಕಟ್ಟೆಯನ್ನು ಒದ ಗಿಸಲು ಅನುಕೂಲವಾಗುತ್ತದೆ.

ಸರ್ಕಾರ ಬಿಡುಗಡೆ ಮಾಡಿರುವ ಸಹಾಯಧನದಿಂದ ವ್ಯಾಪಾರ ವೃದ್ಧಿ ಮಾಡಲು ಅವಕಾಶವಾಗಿದೆ.

ಈ ಹಣವನ್ನು ಸದ್ಬಳಕೆ ಮಾಡಿಕೊಂಡು ಅವಶ್ಯಕ ಮೂಲ ಸೌಕರ್ಯಗಳನ್ನು ಮಾಡಿಕೊಂಡು ರೈತರಿಗೆ ಉತ್ತಮ ಮಾರುಕಟ್ಟೆಯನ್ನು ಕಲ್ಪಿಸುತ್ತದೆ. ಇದರಿಂದ ಮಾರುಕಟ್ಟೆಗೆ ರೈತರು ಅನುಭವಿ ಸುವ ತೊಂದರೆಗಳನ್ನು ತಡೆಯಬಹುದಾಗಿದ್ದು ಹಾಗೂ ರೈತರು ಸ್ವತಂತ್ರವಾಗಿ ಬೆಳೆದ ಬೆಳೆಗಳಿಗೆ ಸೂಕ್ತ ಮಾರುಕಟ್ಟೆಯನ್ನು ಕಲ್ಪಿಸಿಕೊಂಡು ವ್ಯಾಪಾರ ವಹಿವಾಟು ನಡೆಸಬಹುದಾಗಿರುತ್ತದೆ.

ಅನುದಾನ ಬಿಡುಗಡೆಯಿಂದ ಅನುಭವ ಇರುವಂತಹ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡು ರೈತ ಉತ್ಪಾದಕರ ಸಂಸ್ಥೆಗಳನ್ನು ಪರಿಣಾಮಕಾರಿಯಾದಂತಹ ಸೇವೆಗಳನ್ನು ರೈತರಿಗೆ ಒದಗಿಸಲು ಅನುಕೂಲ ವಾಗುತ್ತದೆ.



# ಕೆಲ ಮಾರ್ಗಗಳಲ್ಲಿ ಟಿಕೆಟ್ ದರ ಇಳಿಕೆ ಮಾಡಿದ ನಮ್ಮ ಮೆಟ್ರೋ

• ಉದಯವಾಹಿನಿ, ಬೆಂಗಳೂರು

ಭಾರೀ ಜನ ವಿರೋಧದಿಂದಾಗಿ ಮೆಟ್ರೋ ದರ ಇಳಿಕೆಗೆ ನಿರ್ಧಾರ ಮಾಡಿರುವ ಬಿಎಂಆರ್ ಸಿಎಲ್ ಪರಿಷ್ಕೃತ ಟಿಕೆಟ್ ದರ ಜಾರಿ ಮಾಡಿದೆ. ನಮ್ಮ ಮೆಟ್ರೋ ಪ್ರಯಾಣ ದರ ಎಲ್ಲೆಲ್ಲಿ ದುಪ್ಪಟ್ಟು ಹೆಚ್ಚಾಗಿತ್ತೋ ಅಲ್ಲೆಲ್ಲ ತುಸು ಇಳಿಕೆ ಮಾಡಿದೆ. ಶುಕ್ರವಾರ ಬೆಳಗ್ಗೆ ಮೆಟ್ರೋದಲ್ಲಿ ಪ್ರಯಾಣಿಸಿದವರಿಗೆ ಹೊಸ ದರ ಅನ್ವಯ ಆಗಿದೆ. ಅಧಿಕೃತ ದರ ಪಟ್ಟಿ ಇನ್ನಷ್ಟೇ ಬಿಡುಗಡೆ ಮಾಡಬೇಕಿದೆ.

ನಮ್ಮ ಮೆಟ್ರೋ ಕನಿಷ್ಠ– ಗರಿಷ್ಠ ದರದಲ್ಲಿ ಯಾವುದೇ ಬದಲಾವಣೆ ಮಾಡಿಲ್ಲ. ಮೆಟ್ರೋ ದರ ಏರಿಕೆ ವಿಷಯದಲ್ಲಿ ಮರುಪರಿಶೀಲನೆ ನಡೆಸುವಂತೆ ಸಿಎಂ ಸಿದ್ದರಾಮಯ್ಯ ಸೂಚನೆಬಕೊಟ್ಟ ಬೆನ್ನಲ್ಲೆ ಗುರುವಾರ ಸುದ್ದಿಗೋಷ್ಠಿ ನಡೆ ಸಿದ ಬಿಎಂಆರ್ ಸಿಎಲ್ ವ್ಯವಸ್ಥಾಪಕ ನಿರ್ದೇಶಕರು ಮಹೇಶ್ವರ್ ರಾವ್ ದುಪ್ಪಟ್ಟು ದರ ಏರಿಕೆ ಆದ ಕಡೆ ಹಂತ ಹಂತವಾಗಿ ಮಾರ್ಜ್ ಮಾಡುವ ಮೂಲಕ ದರ ಕಡಿಮೆ ಮಾಡಲಾಗುವುದು ಎಂದು ಹೇಳಿದ್ದರು. ಆದರೆ ಗರಿಷ್ಠ ಹಾಗೂ ಕನಿಷ್ಠ ದರದಲ್ಲಿ ಬದಲಾವಣೆ ಮಾಡುವುದಿಲ್ಲ ಎಂದಿದ್ದರು.

ಕನಿಷ್ಠ ದರ 10 ರೂ. ಗರಿಷ್ಠ ದರ 90 ರೂ. ಯಥಾಸ್ಥಿತಿ ಮುಂದುವರಿಯಲಿದ್ದು, ಶೇ. 70ರಿಂದ ಶೇ. 100ರಷ್ಟು ದರ ಹೆಚ್ಚಳವಾದ ಕಡೆ ಮಾತ್ರ ಶೇ.30ರವರೆಗೆ ದರ ಕಡಿತ ಮಾಡ ಲಾಗುವುದು, ಎಂದು ಬಿಎಂಆರ್‌ಸಿಎಲ್ ವ್ಯವ ಸ್ಥಾಪಕ ನಿರ್ದೇಶಕ ಎಸ್. ಮಹೇಶ್ವರರಾವ್ ತಿಳಿಸಿದ್ದಾರೆ.

ಮೆಟ್ರೊ ಪ್ರಯಾಣ ಏರಿಕೆ ದರದಲ್ಲಿ ಯಾವುದೇ ಬದಲಾವಣೆ ಇಲ್ಲ. ಕೆಲವು ಸ್ಟೇಜ್‌ಗಳಲ್ಲಿ ಶೇ.70ಕ್ಕಿಂತ ದರ ಹೆಚ್ಚಾಗಿದೆ. ಈ ಸ್ಟೇಜ್‌ಗಳಲ್ಲಿ ಮಾತ್ರ ದರ ಇಳಿಕೆ ಮಾಡಲಾಗುವುದು. ನೂತನ ದರ ಫೆ.14ರಿಂದಲೇ ಜಾರಿಗೆ ಬರಲಿದೆ, ಎಂದು ಮಾಹಿತಿ ನೀಡಿದ್ದರು.

### ಯಾವ ಮಾರ್ಗದಲ್ಲಿ ಎಷ್ಟು ದರ ಇಳಿಕೆ?

- ಮೆಜೆಸ್ಟಿಕ್ ನಿಂದ ರೇಷ್ಮೆಸಂಸ್ಥೆಗಿದ್ದ 70 ರೂ ಈಗ 60 ರೂ ಆಗಿದೆ
- ಮೆಜೆಸ್ಟಿಕ್ ನಿಂದ ಬೈಯಪ್ಪನಹಳ್ಳಿಗೆ 60 ರೂ ಇದ್ದ ಬೆಲೆ 50 ರೂಗೆ ಇಳಿಕೆ
- ಜಾಲಹಳ್ಳಿಯಿಂದ ರೇಷ್ಮೆಸಂಸ್ಥೆಗೆ 90 ರೂ ದರ ,ಇದರಲ್ಲಿ ಬದಲಾವಣೆ ಮಾಡಿಲ್ಲ
- ಮೆಜೆಸ್ಟಿಕ್ ನಿಂದ- ವೈಟ್ ಫೀಲ್ಡ್ ಗೆ 90 ರೂ ಇದ್ದ ದರ ಈಗ 80 ರೂ
- ಮೆಜೆಸ್ಟಿಕ್ - ಚಲ್ಲಘಟ್ಟಕ್ಕೆ 70 ರೂ ಇದ್ದ ದರ ಈಗ 60 ರೂ
- ಮೆಜೆಸ್ಟಿಕ್-ವಿಧಾನಸೌಧಕ್ಕೆ 20 ರೂನಿಂದ 10 ರೂಪಾಯಿಗೆ ಇಳಿಕೆ
- ಮೆಜೆಸ್ಟಿಕ್ ನಿಂದ- ಕಬ್ಬನ್ ಪಾರ್ಕ್‌ಗೆ 20 ರೂ ಯಥಾಸ್ಥಿತಿ ಕಾಯ್ದುಕೊಳ್ಳಲಾಗಿದೆ.



# ಗೌರವಧನ ಹೆಚ್ಚಳಕ್ಕಾಗಿ ಅಂಗನವಾಡಿ ಕಾರ್ಯಕರ್ತೆಯರ, ಸಹಾಯಕಿಯರ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಗೌರವಧನ ಹೆಚ್ಚಳ ಮಾಡುವುದೂ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ, ರಾಜ್ಯ ಸಂಯುಕ್ತ ಅಂಗನವಾಡಿ ನೌಕರರ ಸಂಘ ದಿಂದ ನಗರದ ಸ್ವಾತಂತ್ರ್ಯ ಉದ್ಯಾನದಲ್ಲಿ ಪ್ರತಿಭಟನೆ ನಡೆಯಿತು.

ಕಾರ್ಯಕರ್ತೆಯರಿಗೆ ತಿಂಗಳಿಗೆ 15 ಸಾವಿರ, ಸಹಾಯಕಿಯರಿಗೆ 10 ಸಾವಿರ ನಿಗದಿ ಪಡಿಸಿ ಮುಂದಿನ ಬಜೆಟ್‌ನಲ್ಲಿ ಘೋಷಣೆ ಮಾಡಬೇಕು ಎಂದು ಪ್ರತಿಭಟನಕಾರರು ಆಗ್ರಹಿಸಿದರು. ನಿವೃತ್ತರಿಗೆ 2 ಲಕ್ಷ ಪರಿಹಾರ ನೀಡ ಬೇಕು. ಸುಪ್ರೀಂ ಕೋರ್ಟ್ ಆದೇಶದಂತೆ ಅಂಗ ನವಾಡಿ ನೌಕರರಿಗೆ ಗ್ರ್ಯಾಚ್ಯುಟಿ ಹಣ ನೀಡಬೇಕು. ಇದಕ್ಕೆ ಅನುದಾನ ಮೀಸಲು ಇಡಬೇಕು ಎಂದು ಒತ್ತಾಯಿಸಿದರು. ಅಂಗನವಾಡಿ ಕಾರ್ಯಕರ್ತೆಯರನ್ನು ಸರ್ಕಾರವು 'ಸಿ', 'ಡಿ' ದರ್ಜೆಯ ನೌಕರರೆಂದು ಪರಗಣಿಸಬೇಕು. ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರ ಕ್ಷೇಮಾಭಿವೃದ್ಧಿ ನಿಧಿಯಿಂದ ಸಕಾಲದಲ್ಲಿ ವೈದ್ಯಕೀಯ ವೆಚ್ಚವನ್ನು ಬಿಡುಗಡೆ ಮಾಡಬೇಕು. ಸಹಾಯಧನವನ್ನು 2 ಲಕ್ಷಕ್ಕೆ ಹೆಚ್ಚಿಸಬೇಕು ಎಂದು ಆಗ್ರಹಿಸಿದರು. ಈಗಾಗಲೇ ನಿವೃತ್ತಿಯಾದ ಅಂಗನವಾಡಿ ಕಾರ್ಯಕರ್ತೆಯರಿಗೆ 50 ಸಾವಿರ, ಸಹಾಯಕಿಯರಿಗೆ 30 ಸಾವಿರ ನಿವೃತ್ತಿ ಪರಿಹಾರ ಹಣ ದೊರೆಯುತ್ತಿಲ್ಲ. ಈ ಸಮಸ್ಯೆಯನ್ನು ತಕ್ಷಣವೇ ಪರಿಹರಿಸಬೇಕು. ಎಲ್ಲಾರಿಗೂ ಪಿಂಚಣಿ ದೊರೆಯುವಂತೆ ಮಾಡಬೇಕು ಎಂಬ ಬೇಡಿಕೆಯನ್ನು ಮಂಡಿಸಿದರು. ಸೇವಾ ಹಿರಿತನ ಆಧರಿಸಿ ಬಡ್ತಿ ನೀಡಬೇಕು.

ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಕೆಲಸಗಳನ್ನು ಹೊರತುಪಡಿಸಿ ಇತರೆ ಇಲಾ ಖೆಗಳ ಹೆಚ್ಚುವರಿ ಕೆಲಸಗಳನ್ನು ನೀಡಬಾರದು. ಹೆಚ್ಚುವರಿ ಕೆಲಸಗಳಿಂದ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು. ಪ್ರತಿ ತಿಂಗಳ 5ರ ಒಳಗೆ ತಿಂಗಳ ಗೌರ ವಧನವನ್ನು ಬಿಡುಗಡೆ ಮಾಡಬೇಕು. ಪ್ರತಿವರ್ಷ ಕಾರ್ಯಕರ್ತೆಯರು, ಸಹಾಯಕಿಯರಿಗೆ ಎರಡು ಜತೆ ಸಮವಸ್ತ್ರ ವಿತರಿಸಬೇಕು. ಅಂಗನವಾಡಿ ಕೇಂದ್ರಗಳಿಗೆ ಮೂಲಸೌಲಭ್ಯ ಕಲ್ಪಿಸಬೇಕು ಎಂದು ಪ್ರತಿಭಟನಕಾರರು ಆಗ್ರಹಿಸಿದರು.




# ಪಿಲ್ಲರ್‌ಗಳ ಮೇಲೆ ದೈನಂದಿನ ಸೆಲೆಬ್ರಿಟೀಸ್‌ಗಳ ಚಿತ್ರಣ

• ಉದಯವಾಹಿನಿ, ಬೆಂಗಳೂರು

ನಗರದ 50ಕ್ಕೂ ಹೆಚ್ಚು ಮೆಟ್ರೋ ಸ್ಥಂಭಗಳಿಗೆ ಚನ್ನಪಟ್ಟಣದ ಕಲೆಯನ್ನು ಬಿಂಬಿಸುವ ಕಲಾಕೃತಿಗ ಳನ್ನು ಬಯೋಕಾನ್ ಫೌಂಡೇಷನ್‌ನ ಸಿಎಸ್‌ಆರ್ ಅಡಿಯಲ್ಲಿ ಚಿತ್ರಿಸಲಾಗಿದೆ. ಹುಸ್ಕೂರು ಗೇಟ್‌ನಿಂದ ಹೆಬ್ಬಗೋಡಿ ಮೆಟ್ರೋ ನಿಲ್ದಾಣದವರೆಗೂ ಬರುವ 50 ಮೆಟ್ರೋ ಪಿಲ್ಲರ್‌ಗಳ ಮೇಲೆ ಚೆನ್ನಪಟ್ಟಣದ ಕಲೆಯನ್ನು ಬಿಂಬಿಸುವ ಕಲಾಕೃತಿಗಳನ್ನು ಸುಂದರವಾಗಿ ಚಿತ್ರಿಸಲಾಗಿದೆ. ಪಿಲ್ಲರ್ ಆಫ್ ಬೆಂಗಳೂರು–ಪ್ರತಿನಿತ್ಯದ ಚಾಂಪಿಯನ್‌ಗಳ ಸಂಭ್ರಮಾಚರಣೆ ಶೀರ್ಷಿಕೆಯಡಿ ಈ ಚಿತ್ತಾರ ಬಿಡಿಸಲಾಗಿದೆ.

ನಮ್ಮ ದೈನಂದಿನ ಜೀವನದ ಚಾಪಿಂಯನ್ಸ್‌ಗಳಾದ ಹೂ ಮಾರಾಟಗಾರರು, ಎಲೆಕ್ಟ್ರಿಷಿಯನ್, ಟೈಲರ್‌ಗಳು, ಪ್ಲಂಬರ್ಸ್, ವೈದ್ಯರು, ದಾದಿಯರು, ಸಂಗೀತಗಾರರು, ವಿಜ್ಞಾನಿಗಳು, ಐಟಿ ವೃತ್ತಿಪರರು, ಏರೋಸ್ಪೇಸ್ ಸೇರಿದಂತೆ ನಮ್ಮ ಪ್ರತಿನಿತ್ಯದ ಜೀವನದ ಭಾಗವಾಗಿರುವ ಎಲ್ಲಾ ಪಾತ್ರದಾರಿಗಳ ಚಿತ್ರವನ್ನು ಚೆನ್ನಪಟ್ಟಣದ ಗೊಂಬೆಗಳಂತೆ ಸುಂದರವಾದ ಕೆತ್ತನೆಯ ರೀತಿಯಲ್ಲಿ ಚಿತ್ರಿಸಲಾಗಿದೆ.

ಬಯೋಕಾನ್ ಫೌಂಡೇಶನ್‌ನ ಮಿಷನ್ ನಿರ್ದೇಶಕ ಡಾ. ಅನುಪಮಾ ಶೆಟ್ಟಿ ಮಾತನಾಡಿ, ಪಿಲ್ಲರ್ಸ್ ಆಫ್ ಬೆಂಗಳೂರು ನಮ್ಮ ದೈನಂದಿನ ಸೆಲೆಬ್ರೆಟೀಸ್‌ಗಳನ್ನು ನೆನೆಯಲು ಈ ವಿನೂತನ ಉಪಕ್ರಮವನ್ನು ಕೈಗೆತ್ತಿಕೊಳ್ಳಲಾಗಿದೆ. ಹುಸ್ಕೂರ್ ಗೇಟ್ ನಿಂದ ಪ್ರಾರಂಭವಾಗುವ ಮೆಟ್ರೋ ಪಿಲ್ಲರ್‌ಗಳ ಮೇಲೆ ಕ್ರಿಯಾತ್ಮಕವಾಗಿ ಹಾಗೂ ನಮ್ಮ ನಗರದ ಸಾಂಪ್ರದಾಯಿಕ ಕಲೆಯನ್ನು ಬಿಂಬಿಸುವ ಕಲಾಕೃತಿಗಳನ್ನು ಚಿತ್ರಿಸಲಾಗಿದ್ದು, ನೋಡುಗರನ್ನು ಮನಸೂರೆಗೊಳಿಸುತ್ತದೆ. ಈ ಎಲ್ಲಾ ಕಲಾಕೃತಿಗಳು ಬೀದಿ ಬದಿ ವ್ಯಾಪಾರಿಗಳು, ಆಟೋ ಡ್ರೈವರ್‌ಗಳಿಂದ ಹಿಡಿದು ಐಟಿ ವೃತ್ತಿಪರರವರೆಗೂ ಎಲ್ಲಾರನ್ನೂ ಒಳಗೊಂಡ ಚನ್ನಪಟ್ಟಣದ ಗೊಂಬೆಗಳ ಸ್ಪರ್ಷ ನೀಡಿ ಚಿತ್ರಿಸಿರುವುದು ಇನ್ನಷ್ಟು ವಿಭಿನ್ನವೆನಿಸುತ್ತದೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

# 10 ಲಕ್ಷ ಕೋಟಿ ರೂ. ಬಂಡವಾಳ ನಿರೀಕ್ಷೆ

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

ಬೆಂಗಳೂರಿನ ಅರಮನೆ ಆವರಣದಲ್ಲಿ ಕಳೆದ ನಾಲ್ಕು ದಿನಗಳಿಂದ ನಡೆದ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ(ಇನ್ವೆಸ್ಟ್ ಕರ್ನಾಟಕ–25)ಕ್ಕೆ ಇಂದು ಮಧ್ಯಾಹ್ನ ತೆರೆ ಬಿದ್ದಿತ್ತು. ಹತ್ತು ಲಕ್ಷ ಕೋಟಿ ರೂ. ಬಂಡವಾಳ ನಿರೀಕ್ಷೆಯೊಂದಿಗೆ ನಡೆದ ಈ ಸಮಾವೇಶದಲ್ಲಿ ಬಹುಕೋಟಿ ರೂ.ಗಳ ಹೂಡಿಕೆಯ ಒಪ್ಪಂದವಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಉಪ ಮುಖ್ಯಮಂತ್ರಿ ಡಿ.ಕೆ.ಶಿವ ಕುಮಾರ ಸೇರಿದಂತೆ ಕೇಂದ್ರ, ರಾಜ್ಯದ ಸಚಿವರು, ವಿವಿಧ ಉದ್ಯಮಗಳ ದಿಗ್ಗಜರು ಭಾಗವಹಿಸಿದ್ದರು.

ಫೆ.11 ರಂದು ಸಂಜೆ ವಿದ್ಯುಕ್ತವಾಗಿ ಜಾಗತಿಕ ಬಂಡಾವಳ ಹೂಡಿಕೆದಾರರ ಸಮಾವೇಶ ಆರಂಭಗೊಂಡಿತ್ತು. ಮೊದಲ ದಿನವೇ ವಿವಿಧ ಕಂಪನಿಗಳು ರಾಜ್ಯದಲ್ಲಿ ಬಂಡವಾಳ ಹೂಡಿಕೆಗೆ ಒಪ್ಪಂದ ಮಾಡಿಕೊಳ್ಳಲಾಗಿತ್ತು. ಸಮಾವೇಶದ ಸಂದರ್ಭದಲ್ಲಿ ಬಂಡವಾಳ ಹೂಡಿಕೆಗೆ ಅನುಕೂಲವಾಗುವಂತೆ ಹೊಸ ಕೈಗಾರಿಕಾ ನೀತಿ ಬಿಡುಗಡೆ ಮಾಡಲಾಗಿದೆ. 15 ಸಾಧಕ ಉದ್ಯಮಿಗಳಿಗೆ ಪುರಸ್ಕಾರ ನೀಡಲಾಗಿದೆ. ವಿಪ್ರೋ ಹೆಲ್ತ್ ಕೇರ್‌ನಿಂದ 8 ಸಾವಿರ ಕೋಟಿ ರೂ, ವೋಲ್ಪೋ ಕಂಪನಿಯಿಂದ 1400 ಕೋಟಿ ರೂ. ಸೇರಿಂದ ಹಲವು ಕಂಪನಿ ಹಾಗೂ ಉದ್ಯಮಿಗಳ ನಡುವೆ ಬೃಹತ್ ಬಂಡವಾಳ ಹೂಡಿಕೆಯ ಒಪ್ಪಂದವಾಗಿದೆ. ಕ್ವಿನ್ ಸಿಟಿ ಯೋಜನೆಯ ಬಗ್ಗೆ ವಿಸ್ತ್ರತ ಚರ್ಚೆಯಾಗಿದ್ದು, 9 ವಿಶ್ವವಿದ್ಯಾಲಯಗಳೊಂದಿಗೆ ಸಭೆ ನಡೆಸಲಾಗಿದೆ. 9 ವಿಶ್ವವಿದ್ಯಾಲಯಗಳೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಅಲ್ಲದೆ, 15 ವೈದ್ಯಕೀಯ ವಿಶ್ವವಿದ್ಯಾಲಯಗಳೊಂದಿಗೆ ಸಭೆ ನಡೆಸಲಾಗಿದೆ. ಕೃತಕ ಬುದ್ದಿಮತ್ತೆ, ಸೆಮಿಕಂಡಕ್ಟರ್, ಎಂಎಸ್‌ಎಂಇಗಳ ಬಗ್ಗೆ ವಿವಿಧ ವಿಚಾರಗೋಷ್ಠಿಗಳು ನಡೆದಿವೆ. ಸೆಮಿಕಂಡಕ್ಟರ್ ವಲಯದಲ್ಲಿ ವಿಫುಲವಾಗಿ ದೊರೆಯುವ ಉದ್ಯೋಗಾವಕಾಶಗಳ ಬಗ್ಗೆ ಪರಿಣಿತರೊಂದಿಗೆ ಚರ್ಚೆಗಳಾಗಿವೆ. ರಕ್ಷಣಾ ಕ್ಷೇತ್ರ, ಸಣ್ಣ ನಗರಗಳಲ್ಲಿ ಸ್ಟಾರ್ಟರ್ ವಿಸ್ತರಣೆ, ವಾಹನೋದ್ಯಮ ಸೇರಿದಂತೆ ವಿವಿಧ ಕೈಗಾರಿಕೆ ಕ್ಷೇತ್ರಗಳ ಬಗ್ಗೆ ಚರ್ಚೆ, ಪರಸ್ಪರ ಒಪ್ಪಂದಗಳಾಗಿವೆ. ಕೈಗಾರಿಕಾ ವಸ್ತು ಪ್ರದರ್ಶನದಲ್ಲಿ 40ಕ್ಕೂ ಹೆಚ್ಚು ಕಂಪನಿಗಳು ಭಾಗಿಯಾಗಿದ್ದವು. 16 ದೇಶಗಳ ರಾಯಭಾರಿಗಳು ಭಾಗಿಯಾಗಿದ್ದರು. ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅವರು ಜಾಗತಿಕ ಹೂಡಿಕೆದಾರರ ಸಮಾವೇಶ ಯಶಸ್ವಿಗೊಳಿಸಲು ಸಾಕಷ್ಟು ಪರಿಶ್ರಮ ಪಟ್ಟಿದ್ದರು.

**ಹೂಡಿಕೆದಾರರ ಸಮಾವೇಶಕ್ಕೆ ತೆರೆ**

# 1.84 ಲಕ್ಷ ಬೀದಿ ನಾಯಿಗಳಿಗೆ ಸಂಯುಕ್ತ ಲಸಿಕೆ

## ನಾಗರಿಕರ ಆರೋಗ್ಯ ಕಾಪಾಡುವುದು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳ ಆದ್ಯ ಕರ್ತವ್ಯ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯಲ್ಲಿ 1.84 ಲಕ್ಷ ಬೀದಿ ನಾಯಿಗಳಿಗೆ ಸಂಯುಕ್ತ ಲಸಿಕೆ ಹಾಕುವ ಕಾರ್ಯಕ್ಕೆ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್‌ರವರು ಶುಕ್ರವಾರ ಚಾಲನೆ ನೀಡಿದರು. ಅಧಿಕಾರಿಗಳು ಉಪಸ್ಥಿತರಿದ್ದರು. ಬೆಂಗಳೂರು, ಫೆ.14– ಬಿಬಿಎಂಪಿ ವ್ಯಾಪ್ತಿಯಲ್ಲಿ 1.84 ಲಕ್ಷ ಬೀದಿ ನಾಯಿಗಳಿಗೆ ''ಸಂಯುಕ್ತ ಲಸಿಕೆ'' ಹಾಕುವ ಗುರಿ ಹೊಂದಲಾಗಿದೆ ಎಂದು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದರು. ನಗರದಲ್ಲಿಂದು ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿ ಸಮು ದಾಯ ನಾಯಿಗಳಿಗೆ ''ಸಂಯುಕ್ತ ಲಸಿಕೆ'' ಅಳವಡಿಸುವ ಕಾರ್ಯಕ್ರಮಕ್ಕೆ ಆವರಣದಲ್ಲಿ ಚಾಲನೆ ನೀಡಿದ ಬಳಿಕ ಅವರು ಮಾತನಾಡಿದರು.

ಪಶುಪಾಲನಾ ವಿಭಾಗ ಬಿಬಿಎಂಪಿ ವತಿಯಿಂದ ಪ್ರಸ್ತುತ ಪಾಲಿಕೆ ವ್ಯಾಪ್ತಿಯಲ್ಲಿನ ಬೀದಿನಾಯಿಗಳಲ್ಲಿ ಸಂತಾನಹರಣ ಶಸ್ತ್ರ ಚಿಕಿತ್ಸೆ ಹಾಗೂ ರೇಬೀಸ್ ರೋಗ ನಿರೋಧಕ ಲಸಿಕೆಯನ್ನು ಯಶಸ್ವಿಯಾಗಿ ನಿಯಮಾನುಸಾರ ನಿರ್ವಹಿಸಲಾಗುತ್ತಿರುತ್ತದೆ. ರೇಬೀಸ್ ಲಸಿಕೆ ಹೊರತುಪಡಿಸಿ ಬೀದಿನಾಯಿಗಳಲ್ಲಿ ಹಲವು ಮಾರಾಣಾಂತಿಕ ಸಾಂಕ್ರಾಮಿಕ ರೋಗಗಳನ್ನು ಹಾಗೂ ಮನುಷ್ಯರಿಗೆ ನಾಯಿಗಳಿಂದ ಹರಡಬಹುದಾದ ರೋಗಗಳನ್ನು ತಡೆಗಟ್ಟಲು ಸಂಯುಕ್ತ ಲಸಿಕೆ ಕಾರ್ಯಕ್ರಮವನ್ನು ನಿರ್ವಹಿಸುವುದು ಸಾರ್ವಜನಿಕ ಆರೋಗ್ಯ ಹಿತದೃಷ್ಟಿಯಿಂದ ಅತ್ಯಗತ್ಯವಾಗಿರುತ್ತದೆ ಎಂದು ವಿವರಿಸಿದರು.

ಬೀದಿ ನಾಯಿಗಳಿಗೆ ಮಾರಕವಾಗಿರುವ ರೋಗಗಳಲ್ಲಿ ಐದು ರೋಗಗಳು ತುಂಬಾ ಮಾರಕವಾಗಿರುತ್ತದೆ. ಈ ರೋಗಗಳಿಂದ ಬೀದಿ ನಾಯಿಗಳನ್ನು ರಕ್ಷಿಸಲು, ನಾಯಿಗಳಿಂದ ಮಾನವನಿಗೆ ಹರಡಬಹುದಾದ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು 5 ರೋಗಗಳಿಗೆ ಈ ಸಂಯುಕ್ತ ಲಸಿಕೆಯು ಅತ್ಯವಶ್ಯಕವಾಗಿದೆ.ಪಾಲಿಕೆ ವ್ಯಾಪ್ತಿಯಲ್ಲಿ ವಾಸಿಸುವಂತಹ ನಾಗರಿಕರ ಆರೋಗ್ಯ ಕಾಪಾಡುವುದು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳ ಆದ್ಯ ಕರ್ತವ್ಯವಾಗಿರುತ್ತದೆ.

ಪಾಲಿಕೆಯ ವ್ಯಾಪ್ತಿಯಲ್ಲಿ 2023ನೇ ಸಾಲಿನ ಬೀದಿ ನಾಯಿ ಸಮೀಕ್ಷೆಯಲ್ಲಿ ಅಂದಾಜಿಸಲಾಗಿರುವ 2.79 ಲಕ್ಷ ಬೀದಿನಾಯಿಗಳಲ್ಲಿ ಶೇ. 50ಕ್ಕೂ ಹೆಚ್ಚು ಬೀದಿನಾಯಿಗಳಿಗೆ ಪ್ರಸಕ್ತ ಸಾಲಿನಲ್ಲಿ ಸಂಯುಕ್ತ ಲಸಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಮಾಹಿತಿ ನೀಡಿದರು.



ಉದಯವಾಹಿನಿ ಚಿತ್ರ

**ಇಡೀ ದೇಶದಲ್ಲಿಯೇ ಮೊದಲ ಬಾರಿಗೆ ಪಾಲಿಕೆ ವತಿಯಿಂದ ಸಂಯುಕ್ತ ಲಸಿಕೆ ನೀಡಲಾಗುತ್ತಿದೆ. ಪಾಲಿಕೆ ವ್ಯಾಪ್ತಿಯಲ್ಲಿ 1.84 ಲಕ್ಷ ಬೀದಿ ನಾಯಿಗಳಿಗೆ ಸಂಯುಕ್ತ ಲಸಿಕೆ ಹಾಕುವ ಗುರಿ ಹೊಂದಲಾಗಿದ್ದು, ವ್ಯಾಕ್ಸಿನ್ ಮತ್ತು ಕೋಲ್ಡ್ ಸ್ಟೋರೇಜ್‌ಗಾಗಿ 4.98 ಕೋಟಿ ರೂ. ವ್ಯಯಿಸಲಾಗುತ್ತಿದೆ ಎಂದರು.**

### ಕಾರ್ಯಕ್ರಮವು ಉಪಯುಕ್ತ

**ಇದೇ ರೀತಿ ಪಾಲಿಕೆ ವ್ಯಾಪ್ತಿಯ ಬೀದಿನಾಯಿಗಳ ಆರೋಗ್ಯ ಕಾಪಾಡವುದು ಸ್ಥಳೀಯ ಸಂಸ್ಥೆಗಳ ಜವಾಬ್ದಾರಿಯಾಗಿರುತ್ತದೆ. ಈ ನಿಟ್ಟಿನಲ್ಲಿ ಬಿಬಿಎಂಪಿ ವ್ಯಾಪ್ತಿಯ ಬೀದಿನಾಯಿಗಳಲ್ಲಿ ಕಾಣಿಸಿಕೊಳ್ಳುವಂತಹ ಮಾರಕ ರೋಗಗಳ ವಿರುದ್ಧ ಲಸಿಕೆ ಹಾಕುವುದರಿಂದ ಈ ಮಾರಕ ರೋಗಗಳ ಹರಡುವಿಕೆ, ತಡೆಗಟ್ಟುವಲ್ಲಿ ಸಂಯುಕ್ತ ಲಸಿಕೆ ಕಾರ್ಯಕ್ರಮವು ಉಪಯುಕ್ತವಾಗಲಿದೆ.**

# ಒಳಗಿನ ಹೃದಯ ಹೇಗಿದೆ ಎಂಬುದು ಮುಖ್ಯ

• ಉದಯವಾಹಿನಿ, ಬೆಂಗಳೂರು

ಉದ್ಯಮಿ ಮುಕೇಶ್ ಅಂಬಾನಿ ಹಾಗೂ ರಿಲಯನ್ಸ್ ಫೌಂಡೇಶನ್ ಸ್ಥಾಪಕಿ ನೀತಾ ಅಂಬಾನಿ ಅವರ ಪುತ್ರ ಅನಂತ್ ಅಂಬಾನಿಯ ವೈಭವೋಪೇತ ಮದುವೆ ಭಾರಿ ಗಮನ ಸೆಳೆದಿತ್ತು. ಹಾಗೆಯೇ ಟೀಕೆಗೂ ಗುರಿಯಾಗಿತ್ತು. ಈ ಬಗ್ಗೆ ಇದೇ ಮೊದಲ ಬಾರಿಗೆ ಪ್ರತಿಕ್ರಿಯಿಸಿರುವ ನೀತಾ ಅಂಬಾನಿ ಅವರು, ಯಾವ ತಂದೆ–ತಾಯಿಗೆ ಆಗಲಿ ತಮ್ಮ ಮಕ್ಕಳ ಮದುವೆಯನ್ನು ಅದ್ದೂರಿಯಾಗಿ ಮಾಡಬೇಕು ಎಂಬ ಕನಸಿರುತ್ತದೆ. ದೇವರ ದಯೆಯಿಂದ ಅದು ನೆರವೇರಿತು ಎಂದು ಹೇಳಿದ್ದಾರೆ.

ಬ್ಲೂಮ್‌ಬರ್ಗ್ ಖಾಸಗಿ ವಾಹಿನಿಯ ಸಂದರ್ಶನವೊಂದರಲ್ಲಿ ಅವರು ಮಾತನಾಡಿದ್ದಾರೆ. ಅನಂತ್ ಅವರ ಅದ್ದೂರಿ ಮದುವೆಯ ಬಗ್ಗೆ ಟೀಕೆಗಳನ್ನು ಕೇಳಿ ನಿಮಗೆ ಬೇಸರ ಎನಿಸಿತ್ತೆ ಎಂದು ಅವರಿಗೆ ಪ್ರಶ್ನೆ ಎದುರಾಗಿತ್ತು.

ನಮ್ಮ ಕನಸು ಈಡೇರಿದ್ದಲ್ಲದೇ ಈ ಮದುವೆ ಮೇಡ್ ಇನ್ ಇಂಡಿಯಾ ಬ್ರ್ಯಾಂಡ್‌ನ ಪರಿಕಲ್ಪನೆ. ಆ ಪರಿಕಲ್ಪನೆ ಯಶಸ್ವಿಯಾಯಿತು. ಮದುವೆಯಲ್ಲಿ ಭಾರತೀಯ ಶ್ರೀಮಂತ ಪರಂಪರೆ ರಾರಾಜಿಸಿತು. ಆ ಬಗ್ಗೆ ಹೆಚ್ಚೇನೂ ಹೇಳುವುದಿಲ್ಲ ಎಂದಿದ್ದಾರೆ. ಅಸ್ತಮಾ ಇದ್ದಿದ್ದರಿಂದ ಮಗ ಅನಂತ್‌ನಿಗೆ ಬಾಲ್ಯದಲ್ಲಿಯೇ ಸ್ಥೂಲಕಾಯ ಆವರಿಸಿಕೊಂಡಿತು. ಆದರೂ ಅವನು ಚಿಂತೆ ಮಾಡಲಿಲ್ಲ. ನಾನು ಹೊರಗೆ ಹೇಗೆ ಕಾಣುತ್ತೇನೆ ಎಂಬುದು ಮುಖ್ಯವಲ್ಲ ಅಮ್ಮಾ, ನನ್ನ ಒಳಗಿನ ಹೃದಯ ಹೇಗಿದೆ ಎಂಬುದು ಮುಖ್ಯವೆಂದು ಹೇಳಿ ಹಸೆಮಣೆ ಏರಿದಾಗ ನಮಗಾದ ಆನಂದ ಅಷ್ಟಿಷ್ಟಲ್ಲ ಎಂದು ಹೇಳಿದ್ದಾರೆ. ಕಳೆದ ವರ್ಷ ಜುಲೈ 12 ರಂದು ಅನಂತ್ ಅಂಬಾನಿ ಅವರು ರಾಧಿಕಾ ಮರ್ಚಂಟ್ ಅವರನ್ನು ವರಿಸಿದ್ದರು. ಈ ಮದುವೆಗೆ ಸುಮಾರು 5 ಸಾವಿರ ಕೋಟಿ ಖರ್ಚಾಗಿದೆ ಎಂದು ಹೇಳಲಾಗಿದೆ.



# ಮೈಸೂರಿನ ಸಾಂಸ್ಕೃತಿಕ ಹೆಗ್ಗುರುತು ಕಲಾಮಂದಿರ

## ಮೈಸೂರು ಕಲಾಮಂದಿರಕ್ಕೆ ಹೊಸ ರೂಪ; 14.65 ಕೋಟಿ ರೂ. ವೆಚ್ಚದಲ್ಲಿ ಸರಕಾರಕ್ಕೆ ಪ್ರಸ್ತಾವ

• **ಉದಯವಾಹಿನಿ, ಮೈಸೂರು**

ಮೈಸೂರಿನ ಸಾಂಸ್ಕೃತಿಕ ಹೆಗ್ಗುರುತಾದ ಕಲಾಮಂದಿರ ಸ್ಥಾಪನೆಯಾಗಿ 40 ವರ್ಷ ಕಳೆದಿವೆ. ಹೀಗಾಗಿ ಕಲಾಮಂದಿರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ 14.65 ಕೋಟಿ ರೂ. ವೆಚ್ಚದ ಪ್ರಸ್ತಾವವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸರಕಾರಕ್ಕೆ ಸಲ್ಲಿಸಿದ್ದು, ಈ ಬಾರಿಯ ಬಜೆಟ್‌ನಲ್ಲಿ ಘೋಷಣೆಯಾಗುವ ನಿರೀಕ್ಷೆ ಇದೆ.

### ನವೀಕರಣಗೊಳ್ಳಬೇಕಿರುವ ಕಾಮಗಾರಿಗಳು

- ಪೈಪ್‌ಲೈನ್ ದುರಸ್ತಿಯಾಗಬೇಕು
- ಸಮರ್ಪಕ ವಿದ್ಯುತ್ ವ್ಯವಸ್ಥೆ.
- ಹವಾ ನಿಯಂತ್ರಣ ನವೀಕರಣ.
- ಹೈಟೆಕ್ ಶೌಚ ಗೃಹ ನಿರ್ಮಾಣ.
- ಕಲಾಮಂದಿರ ಬಾಲ್ಕನಿ ಕುರ್ಚಿಗಳ ಬದಲಾವಣೆ.
- ಧ್ವನಿ-ಬೆಳಕಿಗೆ ಮತ್ತಷ್ಟು ಆಧುನಿಕ ಸ್ಪರ್ಶ.

ಇಡೀ ರಾಜ್ಯದಲ್ಲಿ ಒಟ್ಟು 16 ಜಿಲ್ಲಾ ರಂಗಮಂದಿರಗಳಿವೆ. ಅದರಲ್ಲಿ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದ ನಂತರ ಅತಿ ಹೆಚ್ಚು ಚಟುವಟಿಕೆಯಿಂದ, ಸಕ್ರಿಯವಾಗಿ ನಡೆಯುತ್ತಿರುವ ರಂಗಮಂದಿರದಲ್ಲಿ ಮೈಸೂರಿನ ಕಲಾಮಂದಿರವೂ ಒಂದು. ರಂಗಾಯಣ ಪಕ್ಕದಲ್ಲೇ ಇರುವುದರಿಂದ ಇಲ್ಲಿ ಸಾಂಸ್ಕೃತಿಕ ಚಟುವಟಿಕೆಗಳು

**ಕಲಾಮಂದಿರ ಮೈಸೂರಿನ ಸಾಂಸ್ಕೃತಿಕ ಚಟುವಟಿಕೆಗಳ ಶಕ್ತಿ ಕೇಂದ್ರ. ಇದನ್ನು ಸಮಗ್ರ ಅಭಿವೃದ್ಧಿಪಡಿಸುವ ಉದ್ದೇಶದಿಂದ ಸರಕಾರಕ್ಕೆ 14.65 ಕೋಟಿ ರೂ. ವೆಚ್ಚದ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ.**
**-ಜಿ.ಲಕ್ಷ್ಮೀಕಾಂತರೆಡ್ಡಿ, ಜಿಲ್ಲಾಧಿಕಾರಿ.**

**ಮುಖ್ಯಮಂತ್ರಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವರ ಆದೇಶದಂತೆ ಕಲಾಮಂದಿರ, ರಂಗಾಯಣಕ್ಕೆ ಆಗಬೇಕಾದ ನವೀಕರಣ ಕಾಮಗಾರಿಗಳ ಬಗ್ಗೆ ಪ್ರಸ್ತಾವ ಕಳುಹಿಸಿಕೊಡಲಾಗಿದೆ.**
**-ಡಾ.ಎಂ.ಡಿ.ಸುದರ್ಶನ, ಸಹಾಯಕ ನಿರ್ದೇಶಕರು, ಕನ್ನಡ, ಸಂಸ್ಕೃತಿ ಇಲಾಖೆ**

ನಿರಂತರವಾಗಿ ನಡೆಯುತ್ತಿವೆ. ಕಲಾಮಂದಿರ 40 ವರ್ಷದ ಹಳೆಯ ಕಟ್ಟಡ. ಬಿಸಿಲು, ಮಳೆಗೆ ಕಟ್ಟಡ ಹಾನಿಯಾಗಿ ದುರಸ್ತಿಗೆ ಕಾಯುತ್ತಿದೆ.
ಈ ಹಿನ್ನೆಲೆಯಲ್ಲಿ ಕಲಾಮಂದಿರವನ್ನು ಸಮಗ್ರ ಅಭಿವೃದ್ಧಿಪಡಿಸಿ ನವೀಕರಣ ಕಾಮಗಾರಿ ನಡೆಸಲು ಕನ್ನಡ, ಸಂಸ್ಕೃತಿ ಇಲಾಖೆ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ.

**ಅತಿಥಿಗೃಹ ನವೀಕರಣ:** 1985 ರಲ್ಲಿ ಕಲಾಮಂದಿರದ ಸಮೀಪ ವಿಶ್ವಕನ್ನಡ ಸಾಹಿತ್ಯ ಸಮ್ಮೇಳನ ಅಂಗವಾಗಿ 23 ಅತಿಥಿಗೃಹಗಳನ್ನು ನಿರ್ಮಾಣ ಮಾಡಲಾಗಿತ್ತು.



1989ರಲ್ಲಿ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಒಡೆತನದಲ್ಲಿ ಇದ್ದ ಕಲಾಮಂದಿರ ಹಾಗೂ ಅತಿಥಿಗೃಹಗಳನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಹಸ್ತಾಂತರಿಸಲಾಗಿತ್ತು. ಇದೀಗ ಶಿಥಿಲಾವಸ್ಥೆಯಲ್ಲಿರುವ ಅತಿಥಿಗೃಹಗಳು ನವೀಕರಣಕೊಂಡರೆ ದಸರಾ ಸೇರಿದಂತೆ ಇತರೆ ಸಂದರ್ಭಗಳಲ್ಲಿ ಅತಿಥಿ, ಗಣ್ಯರನ್ನು ಹೋಟೆಲ್‌ನಲ್ಲಿ ಇರಿಸುವುದು ತಪ್ಪುತ್ತದೆ.

ಇಲಾಖೆಗೆ ಆರ್ಥಿಕ ಹೊರೆಯೂ ತಗ್ಗಲಿದೆ. ಇದರೊಂದಿಗೆ ಬಿ.ವಿ.ಕಾರಂತ ರಂಗ ಚಾವಡಿ, ಶ್ರೀರಂಗ ವೇದಿಕೆ, ಲಂಕೇಶ್ ಗ್ಯಾಲರಿ ಹಾಲ್‌ಗಳ ನವೀಕರಣವನ್ನೂ ಪ್ರಸ್ತಾವನೆಯಲ್ಲಿ ಸೇರಿಸಲಾಗಿದೆ.

**ಸೋಲಾರ್ ಘಟಕ ಸ್ಥಾಪನೆ:** ಕಲಾಮಂದಿರಕ್ಕೆ ಪ್ರತಿ ತಿಂಗಳು 1.5 ಲಕ್ಷ ರೂ. ವಿದ್ಯುತ್ ಬಿಲ್ ಬರುತ್ತಿದೆ. ಇದಕ್ಕೆ ಕಡಿವಾಣ ಹಾಕುವ ಉದ್ದೇಶದಿಂದ 50 ಕಿ.ಲೋ. ವ್ಯಾಟ್‌ನ ಸೋಲಾರ್ ಘಟಕ ಸ್ಥಾಪಿಸಲು ಉದ್ದೇಶಿಸಲಾಗಿದೆ.

ಕಲಾಮಂದಿರದಲ್ಲಿ ದೊಡ್ಡ ಚಾವಣಿಯಷ್ಟು ಜಾಗವಿದ್ದು, ಅಲ್ಲಿ ಸೋಲಾರ್ ಘಟಕ ಸ್ಥಾಪಿಸಬಹುದು. ಇದು ಸಾಧ್ಯವಾದರೆ ಶೇ. 80 ರಷ್ಟು ಬಿಲ್ ಹಣ ಉಳಿತಾಯವಾಗುತ್ತದೆ. ಹೆಚ್ಚುವರಿ ವ್ಯಾಟನ್ನು ಸೆಸ್ಕ್‌ಗೆ ನೀಡಬಹುದು.

### ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ



**ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿನ ಕಲಾಮಂದಿರದಲ್ಲಿ ನಡೆದ ಕಾರ್ಯಕ್ರಮವೊಂದಕ್ಕೆ ಬಂದಿದ್ದರು. ಈ ವೇಳೆ ಕಲಾಮಂದಿರವನ್ನು ಸಮಗ್ರ ಅಭಿವೃದ್ಧಿಪಡಿಸುವ ವಿಚಾರವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಪ್ರಸ್ತಾಪಿಸಿದ್ದರು. ಇದಕ್ಕೆ ಸ್ಪಂದಿಸಿದ ಸಿಎಂ ಪ್ರಸ್ತಾವನೆ ನೀಡುವಂತೆ ತಿಳಿಸಿದ್ದರು. ಈ ಹಿನ್ನೆಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಪ್ರಸ್ತಾವನೆ ತಯಾರಿಸಿತ್ತು. ಇದಕ್ಕೆ ಜಿಲ್ಲಾಧಿಕಾರಿ ಜಿ.ಲಕ್ಷ್ಮೀ ಕಾಂತರೆಡ್ಡಿ ಕೂಡ ಸಕಾರಾತ್ಮಕವಾಗಿ ಸ್ಪಂದಿಸಿ ಪ್ರಸ್ತಾವವನ್ನು ಸರಕಾರಕ್ಕೆ ಸಲ್ಲಿಸಿದ್ದಾರೆ.**

# ಬೆಂ. ಉತ್ತರ ವಿವಿಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಸಭೆ

• **ಉದಯವಾಹಿನಿ, ಕೋಲಾರ**

ಕನ್ನಡ ಭಾಷೆಯನ್ನು ಉಳಿಸದೇ ಹೋದಲ್ಲಿ ದೇಶದ ಹಿಂದಿ ಆ ಜಾಗವನ್ನು ಆಕ್ರಮಿಸುತ್ತದೆ ಆದ್ದರಿಂದ ಪ್ರತಿ ಹಂತದಲ್ಲೂ ಭಾಷೆಯನ್ನು ಉಳಿಸುವ ಕೆಲಸ ಮಾಡಬೇಕಾಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಕರೆ ನೀಡಿದರು. ನಗರ ಹೊರವಲಯದ ಬೆಂಗಳೂರು ಉತ್ತರ ವಿವಿಯ ಟಮಕದ ಆಡಳಿತ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಅವರು ಮಾತನಾಡಿ, ಕನ್ನಡ ಉಳಿಸುವ ನಿಟ್ಟಿನಲ್ಲಿ ಬೆಂಗಳೂರು ಉತ್ತರ ವಿವಿ ಕೈಗೊಂಡಿರುವ ಕ್ರಮಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿ, ವಿವಿಯ ಕುಲಪತಿಗಲಾದ ಪ್ರೊ.ನಿರಂಜನ ಅವರ ಕನ್ನಡ ಪ್ರೇಮ ಪ್ರಶ್ನಾರ್ಹ, ಅವರಿರುವ ಕಡೆ ಕನ್ನಡದ ಏಳ್ಗೆ ಕುರಿತು ಚಿಂತೆ ಮಾಡುವ ಅಗತ್ಯವೇ ಇಲ್ಲ ಎಂದು ತಿಳಿಸಿದರು.

ಪ್ರಾಧಿಕಾರದ ಮುಖ್ಯ ಕೆಲಸ ಸರ್ಕಾರ ಕನ್ನಡಪರ ತೀರ್ಮಾನಗಳನ್ನು ತೆಗೆದುಕೊಂಡರೆ, ಅಂತಹ ತೀರ್ಮಾನಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವುದು. ಈ ನಿಟ್ಟಿನಲ್ಲಿ ಸರ್ಕಾರವು 3000 ಕ್ಕೂ ಹೆಚ್ಚಿನ ಆದೇಶಗಳನ್ನು ಹೊರಡಿಸಲಾಗಿದೆ ಎಂದು ತಿಳಿಸಿದರು.




ಉದಯವಾಹಿನಿ ಚಿತ್ರ

ಉತ್ತರ ವಿವಿ ಕುಲಪತಿ ಪ್ರೊ.ನಿರಂಜನವಾನಳ್ಳಿ ವಿವಿಯ ಕನ್ನಡ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿ, ವಿವಿಯಿಂದ ಸಾಹಿತಿ ಸಾ.ರಘುನಾಥ ಅವರ ಮೊರಸುನಾಡು ಕನ್ನಡ ನಿಘಂಟು ಹೊರತರುವ ಕೆಲಸವನ್ನು ವಿವಿಯಿಂದ ಮಾಡುತ್ತಿರುವುದಾಗಿ ತಿಳಿಸಿದರು.

ಕನ್ನಡ ಸಂಸ್ಕೃತಿ, ಭಾಷೆ ಉಳಿಸುವ ನಿಟ್ಟಿನಲ್ಲಿ ವಿವಿಯಿಂದ ಅನೇಕ ಕೆಲಸ ಮಾಡಲಾಗಿದೆ, ಗಡಿ ಜಿಲ್ಲೆಯಲ್ಲೂ ರಾಜ್ಯದ ಶ್ರೀಮಂತ ಕರಾವಳಿ ಕಲೆ ಯಕ್ಷಗಾನವನ್ನು ಇಲ್ಲಿ ಪ್ರದರ್ಶಿಸಿ ಜನತೆಗೆ ಪ್ರೇರಣೆ ನೀಡಲಾಗಿದೆ ಎಂದರು. ಉತ್ತರ ವಿವಿ ಮತ್ತು ತನ್ನ ವ್ಯಾಪ್ತಿಯ ಕಾಲೇಜುಗಳಲ್ಲಿ ಕನ್ನಡ ಭಾಷೆ ಉಳಿಸುವ ಕಾರ್ಯಕ್ರಮಗಳಿಗೆ ಒತ್ತು ನೀಡಲಾಗಿದೆ, ಕನ್ನಡ ನಾಡು, ನುಡಿ, ನೆಲ, ಜಲ ರಕ್ಷಣೆಗೆ ವಿವಿ ಬದ್ಧವಾಗಿದೆ, ಭಾಷೆಯನ್ನು ಬೆಳೆಸುವ ಕಾಯಕ ಮುಂದುವರೆಸಿದೆ ಎಂದು ತಿಳಿಸಿದರು.

**ಜಾಗತೀಕರಣದ ಸಂದರ್ಭದಲ್ಲಿ ದೇಶದಲ್ಲಿ ಸಣ್ಣಪುಟ್ಟ ಭಾಷೆಗಳು ನಶಿಸಿ ಹೋಗುವ ಆತಂಕವಿದೆ, ಅದನ್ನು ಉಳಿಸುವ ಕೆಲಸವನ್ನು ರಾಜ್ಯದ ಪ್ರತಿ ಕನ್ನಡಿಗರು, ಇಲಾಖೆಗಳು ವಿವಿಗಳು ಮಾಡಬೇಕಾಗಿದೆ ಎಂದ ಅವರು, ಭಾಷೆ ಉಳಿಸುವ ಹೊಣೆ ಪ್ರತಿಯೊಬ್ಬರದ್ದಾಗಿದೆ ಎಂದರು. ಇದೇ ಸಂದರ್ಭದಲ್ಲಿ ಕನ್ನಡ ಉಳಿಸುವ ನಿಟ್ಟಿನಲ್ಲಿ ವಿವಿ ವತಿಯಿಂದ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಕುರಿತು ತಿಳಿದುಕೊಂಡ ಅವರು, ಪ್ರತಿಹಂತದಲ್ಲೂ ಕನ್ನಡ ಉಳಿಸುವ ಕಾರ್ಯ ನಿರಂತರವಾಗಿರಲಿ, ಗಡಿಜಿಲ್ಲೆಯ ವಿವಿ ಇದಾಗಿದ್ದು, ಇಲ್ಲಿ ಕನ್ನಡವನ್ನು ಬೆಳೆಸುವ ಕಾಯಕದಲ್ಲಿ ನಿಮ್ಮ ಪಾತ್ರ ಹೆಚ್ಚಿನದಾಗಿದೆ ಎಂದರು.**

ಸಭೆಯಲ್ಲಿ ತಿಮ್ಮೇಶ್, ಸಂತೋಷ್ ಹಾನಗಲ್, ಟಿ.ಎಸ್.ಫಣಿಕುಮಾರ್, ಸಿ.ಎನ್.ಶ್ರೀಧರ್, ಪ್ರೊ.ತಿಪ್ಪೇಸ್ವಾಮಿ, ವಸಂತಕುಮಾರ್, ಜೆ.ನಾಗರಾಜ್, ಬಸವರಾಜ್ ಅಲಗೂರು ಮತ್ತಿತರರು ಹಾಜರಿದ್ದರು.


# ಸೇವಾ ಸೌಲಭ್ಯ ನ್ಯಾಯಾಲಯ ತೀರ್ಪು ಪಾಲಿಸಿ

• **ಉದಯವಾಹಿನಿ, ಬಂಗಾರಪೇಟೆ**

ಗ್ರಾಮ ಆಡಳಿತ ಅಧಿಕಾರಿಗಳಿಗೆ ಸುಸಜ್ಜಿತವಾದ ಕಚೇರಿ, ಸೇವಾ ವಿಷಯಗಳಿಗೆ ಸಂಬಂಧಿಸಿದಂತೆ ಸೌಲಭ್ಯಗಳನ್ನು ಕಲ್ಪಿಸುವುದು, ಕರ್ನಾಟಕ ಉಚ್ಚ ನ್ಯಾಯಾಲಯದ ತೀರ್ಪು ಸಂಬಂಧಿಸಿದಂತೆ ಸರ್ಕಾರವು ಮಾಡಿರುವ ವೃಂದ, ನೇಮಕಾತಿ ತಿದ್ದುಪಡಿಯನ್ನು ಯಥಾವತ್ತಾಗಿ ಮುನ್ನ ಡೆಸಿ ಸಮರ್ಥವಾಗಿ ಕಲ್ಪಿಸಿಕೊಡಲು ಸರ್ಕಾರ ಮುಂದೆ ಬರಬೇಕು ಎಂದು ಕರ್ನಾಟಕ ರಾಜ್ಯ ರೈತಸಂಘ, ಹಸಿರು ಸೇನೆ ಜಿಲ್ಲಾಧ್ಯಕ್ಷ ಟಿಎನ್ ರಾಮೇಗೌಡ ತಿಳಿಸಿದರು.

ಪಟ್ಟಣದ ತಾಲ್ಲೂಕು ಕಚೇರಿ ಆವರಣದಲ್ಲಿ ಗ್ರಾಮಾಡಳಿತ ಅಧಿಕಾರಿಗಳು ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಹಮ್ಮಿಕೊಂಡಿದ್ದ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಸಂಘಟನೆಯ ಮುಖಾಂತರ ಬೆಂಬಲ ಸೂಚಿಸಿ ಮಾತನಾಡಿದ ಅವರು, ರಾಜ್ಯಾದ್ಯಂತ ಮುಷ್ಕರ ನಡೆಸಿರುವ ಹಿನ್ನೆಲೆ ಕರ್ನಾಟಕ ಸರ್ಕಾರದ ಪ್ರಧಾನ ಕಾರ್ಯದರ್ಶಿ ಕಂದಾಯ ಇಲಾಖೆ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಗ್ರಾಮಾಡಳಿತ ಅಧಿಕಾರಿಗಳ ಎಲ್ಲಾ ಬೇಡಿಕೆಗಳನ್ನು ಈಡೇರಿಸುವಂತೆ ಭರವಸೆ ನೀಡಿದ್ದರು. ತಕ್ಷಣವೇ ರಾಜ್ಯವ್ಯಾಪಿ ಮುಷ್ಕರವನ್ನು ಹಿಂಪಡೆಯಲಾಯಿತು.

ಆದರೆ, ಇಂದಿಗೂ ಬೇಡಿಕೆಗಳು ಈಡೇರಿಸದ



ಉದಯವಾಹಿನಿ ಚಿತ್ರ

ಪ್ರಯುಕ್ತ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ. ಬೇಡಿಕೆಗಳನ್ನು ಈಡೇರಿ ಸುವವರೆಗೂ ಮುಷ್ಕರ ನಿಲ್ಲುವುದಿಲ್ಲ, ಈ ಮುಷ್ಕರಕ್ಕೆ ಎಂದು ಹೇಳಿದರು.

ಮೂಲ ಸೌಕರ್ಯಗಳಾದ ಉತ್ತಮ ಗುಣಮಟ್ಟದ ಟೇಬಲ್, ಕುರ್ಚಿ, ಅಲ್ಮೇರಾ, ಸಿಮ್ ಮತ್ತು ಡೇಟಾ ಗೂಗಲ್ ಕ್ರೋಮ್ ಬುಕ್, ಲ್ಯಾಪ್‌ಟಾಪ್, ಪ್ರಿಂಟರ್, ಸ್ಕ್ಯಾನರ್ ನೀಡುವುದು ಹಾಗೂ ಗ್ರಾಮ ಆಡಳಿತ ಅಧಿಕಾರಿಗಳಿಗೆ ಬಡ್ತಿ, ಸರ್ಕಾರದ ಎಲ್ಲಾ ಯೋಜನೆಗಳನ್ನು ಸಾರ್ವಜನಿಕರಿಗೆ ತಲುಪಿಸುವುದರಿಂದ ಸೂಕ್ತ ಕಾನೂನಾತ್ಮಕ ರಕ್ಷಣೆ ನೀಡುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವವರೆಗೂ ಮತ್ತೆ ರಾಜ್ಯ ವ್ಯಾಪ್ತಿ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಬೆಂಬಲಿಸುವುದಾಗಿ ಭರವಸೆ ನೀಡಿದರು.

ಮುರಳಿ, ಮೋಹನ್, ಉಪಾಧ್ಯಕ್ಷ ಬಸಪ್ಪ, ನಾಗರಾಜು, ಮುನಿ ರಾಜು, ರಮೇಶ್, ವೆಂಕಟೇಶ್, ಗ್ರಾಮಾಡಳಿತ ಅಧಿಕಾರಿಗಳು ಇನ್ನಿತರರಿದ್ದರು.

# ಚನ್ನಪಟ್ಟಣ ಬಿಇಒ ಕಚೇರಿಗೆ ಬೀಗ ಜಡಿದು ಪ್ರತಿಭಟನೆ

• **ಉದಯವಾಹಿನಿ, ಚನ್ನಪಟ್ಟಣ**

ಕ್ಷೇತ್ರ ಶಿಕ್ಷಣಾಧಿಕಾರಿ ರಾಮಲಿಂಗಯ್ಯ ಅವರು ತಾಲ್ಲೂಕಿನ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿ ತಾಲ್ಲೂಕಿನ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಗುರುವಾರ ಸಂಜೆ ನಗರದ ಬಿಇಒ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ನಡೆಸಿದರು. ಶಿಕ್ಷಕರಿಗೆ ಒಟ್ಟು 50 ಲಕ್ಷ ಆರೋಗ್ಯ ವಿಮಾ ಭತ್ಯೆ ನೀಡಬೇಕು. ಇದೀಗ ತಾಲ್ಲೂಕು ಪಂಚಾಯಿತಿಗೆ ಬಂದಿರುವ 10 ಲಕ್ಷ ಅನುದಾನದಲ್ಲಿ ಆದ್ಯತೆ ಮೇರೆಗೆ ಕಡತಗಳನ್ನು ಸಹಿ ಮಾಡಿ ಕಳಿಸಿಕೊಡುವಂತೆ ಹದಿನೈದು ದಿನಗಳಿಂದ ಶಿಕ್ಷಕರು ಬಿಇಒ ಕಚೇರಿಗೆ ಬರುತ್ತಿದ್ದಾರೆ.

ಈ ಕಡತವನ್ನು ಮೇಲಾಧಿಕಾರಿಗಳಿಗೆ ಕಳಿಸಲು ಬಿಇಒ ಸಹಿ ಅಗತ್ಯವಾಗಿದೆ. ಆದರೆ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದರು. ಈ ನಿಟ್ಟಿನಲ್ಲಿ ಶಾಲೆ ಕೆಲಸ ಮುಗಿಸಿ ಸಂಜೆ ಬಂದಿದ್ದೇವೆ. ಆದರೆ ಈಗ ಬಿಇಒ ಇಲ್ಲ. ದೂರವಾಣಿ ಕರೆ ಮಾಡಿದರೆ ಬರಲು ಆಗೋಲ್ಲ ಎನ್ನುತ್ತಿದ್ದಾರೆ. ಈ ನಿಟ್ಟಿನಲ್ಲಿ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಸಂಘದ ರಾಜ್ಯ ಘಟಕದ ಉಪಾಧ್ಯಕ್ಷ ಎಸ್.ಎಂ.ನಾಗೇಶ್ ಮಾತನಾಡಿ, ತಾಲ್ಲೂಕಿನ ಶಿಕ್ಷಕರ ಹಲವು ಕಡತಗಳಿಗೆ ಬಿಇಒ ಸಹಿ ಮಾಡಿಲ್ಲ. ಈ ಬಗ್ಗೆ ಶಿಕ್ಷಕರು ಸಾಕಷ್ಟು ಬಾರಿ ಅಲೆದಾಡುವಂತಾಗಿದೆ.



ಉದಯವಾಹಿನಿ ಚಿತ್ರ

ಹಲವು ಶಿಕ್ಷಕರಿಗೆ ವೈದ್ಯಕೀಯ ವಿಮೆಯ ಹಣ ಪಡೆಯಬೇಕಿದೆ. ಕಳೆದ 15 ದಿನದಿಂದ ನಾವೆಲ್ಲಾ ಸಂಜೆ ವೇಳೆ ಬಂದು ಬಿಇಒ ಸಿಗದೆ ವಾಪಸ್ ಹೋಗಿದ್ದೇವೆ. ಅಲ್ಲದೆ ಜಿಲ್ಲಾ ಉಪನಿರ್ದೇಶಕರಿಗೂ ಸಹ ಈ ಬಗ್ಗೆ ತಿಳಿಸಿದ್ದೇವೆ. ಆದರೂ ಶಿಕ್ಷಕರ ಕಡತಗಳಿಗೆ ಸಹಿ ಮಾಡಿಲ್ಲ ಎಂದು ಆರೋಪಿಸಿದರು.

ಬಿಇಒ ಅವರು ಜಿಲ್ಲಾಧಿಕಾರಿಗಳ ಸಭೆಯ ನಿಮಿತ್ತ ರಾಮನಗರಕ್ಕೆ ಹೋಗಿದ್ದಾರೆ. ಅವರು ನಾಳೆ ಸಿಗುತ್ತಾರೆ. ನಾಳೆ ಬಂದು ಮಾತುಕತೆ ನಡೆಸಿ ಎಂದು ಕಚೇರಿ ಸಿಬ್ಬಂದಿ ತಿಳಿಸಿದ ನಂತರ ಬೀಗ ತೆರೆದು ಪ್ರತಿಭಟನೆ ವಾಪಸ್ ಪಡೆಯಲಾಯಿತು.

ರಾಜ್ಯ ಎಸ್‌ಡಿಎಂಸಿ ಸಮನ್ವಯ ಸಮಿತಿಯ ಉಪಾಧ್ಯಕ್ಷ ನಾಗವಾರ ಶಂಭೂಗೌಡ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಖಜಾಂಚಿ ಬೋರೇಗೌಡ, ಇತರರು ಇದ್ದರು.

### ಶಾಲೆ ಮುಗಿಸಿ ಬನ್ನಿ

**ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜು ಮಾತನಾಡಿ, ಬಿಇಒ ಅವರು ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಬೇಕಿದೆ. ಆದರೆ, ಬಿಇಒ ಸ್ಪಂದಿಸುತ್ತಿಲ್ಲ. ಈ ಬಗ್ಗೆ ಸಂಘದ ಪದಾಧಿಕಾರಿಗಳು ಚರ್ಚಿಸಿ ಕಡತಕ್ಕೆ ಸಹಿ ಮಾಡಿಕೊಡುವಂತೆ ಮನವಿ ಮಾಡಿದ್ದೆವು. ಆದರೆ, ಅವರು ಶಾಲೆ ಕೆಲಸದ ವೇಳೆ ಕಚೇರಿಗೆ ಬರಬೇಡಿ, ಶಾಲೆ ಮುಗಿಸಿ ಬನ್ನಿ ಎಂದರು.**

# ಚರಂಡಿ ಸ್ಲ್ಯಾಬ್ ಕುಸಿತ: ದುರಸ್ತಿಗೆ ಸೂಚನೆ

• **ಉದಯವಾಹಿನಿ, ಗುಂಡ್ಲುಪೇಟೆ**

ಪಟ್ಟಣ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿ ಬದಿಯಲ್ಲಿ ಚರಂಡಿ ಸ್ಲಾಬ್ ಕುಸಿತ ಸ್ಥಳ ಹಾಗೂ ಅಪಘಾತ ವಲಯಗಳಿಗೆ ಪುರಸಭೆ ನೂತನ ಅಧ್ಯಕ್ಷ ಜಿ.ಎಸ್.ಮಧು ಸೂಧನ್ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ದುರಸ್ತಿ ಪಡಿಸುವಂತೆ ಸೂಚಿಸಿದರು. ಗುಂಡ್ಲುಪೇಟೆ ಪಟ್ಟಣದ ಊಟಿ-ಮೈಸೂರು ರಾಷ್ಟ್ರೀಯ ಹೆದ್ದಾರಿ-766, ಕೇರಳ ರಸ್ತೆ ಅಪಘಾತ ವಲಯದ ರಸ್ತೆಗಳಿಗೆ ಹಾಗೂ ಕೆಎಸ್ ಆರ್‌ಟಿಸಿ ಬಸ್ ನಿಲ್ದಾಣದ ಮುಂಭಾಗ ಸ್ಲ್ಯಾಬ್ ಕುಸಿತವಾಗಿರುವ ಸ್ಥಳಗಳಿಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಹಾಗೂ ಪುರಸಭೆ ಮುಖ್ಯಾಧಿಕಾರಿಗಳೊಂದಿಗೆ ಭೇಟಿ ನೀಡಿ ಮಾಹಿತಿ ಪಡೆದರು. ಪಟ್ಟಣದ ಸುರಭಿ ಹೋಟೆಲ್‌ನಿಂದ ಮಹ ದೇವಪ್ರಸಾದ್ ನಗರದವರೆಗೆ ರಾಷ್ಟ್ರೀಯ ಹೆದ್ದಾರಿ ಬದಿಯಲ್ಲಿರುವ ಪಾದಚಾರಿ ಮಾರ್ಗದ ಗುಂಡಿಗಳು ಮತ್ತು ಕುಡಿಯುವ ನೀರಿನ ಪೈಪ್ ಅಳವಡಿಕೆ ಸಮಯದಲ್ಲಿ ಹಾಳಾಗಿರುವ ರಸ್ತೆ ಸರಿಪಡಿಸಬೇಕು. ಕುಸಿದ ಸ್ಲಾಬ್ ಹಾಗೂ ಅಪಘಾತ ವಲಯಗಳಲ್ಲಿ ಅಳವಡಿಸಿರುವ ಸಿಗ್ನಲ್ ಲೈಟ್ ದುರಸ್ತಿ ಪಡಿಸುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚಿಸಿದರು. ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕೆಲಸ ನಿರ್ವಹಿಸುವಂತೆ ತಾಕೀತು ಮಾಡಿದರು.



ಉದಯವಾಹಿನಿ ಚಿತ್ರ

**ಶಾಸಕ ಸೂಚನೆ:** ಪಟ್ಟಣದ ವ್ಯಾಪ್ತಿಯ ರಾಷ್ಟ್ರೀಯ ಚರಂಡಿಗಳು ಕುಸಿದು ಪಾದಾಚಾರಿಗಳ ಓಡಾಟಕ್ಕೆ ತೀವ್ರ ತೊಂದರೆ ಉಂಟಾಗಿತ್ತು. ಜೊತೆಗೆ ಹೆದ್ದಾರಿ ಬೀದಿ ದೀಪಗಳು ಸಹ ಪದೇ ಪದೇ ಕೆಟ್ಟು ನಿಲ್ಲುತ್ತಿರುವ ಹಿನ್ನೆಲೆ ಶಾಸಕ ಎಚ್.ಎಂ.ಗಣೇಶಪ್ರಸಾದ್ ಪುರಸಭೆ ಮುಖ್ಯಾಧಿಕಾರಿ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳ ವಿರುದ್ಧ ಅಸಮಾಧಾನ ಹೊರಹಾಕಿ, ದುರಸ್ತಿಗೆ ಕ್ರಮ ವಹಿವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

# ಆರೋಗ್ಯ ಹಕ್ಕು ಕಾಯ್ದೆ ಜಾರಿಗೆ ಒತ್ತಾಯ

• **ಉದಯವಾಹಿನಿ, ಚಿಂತಾಮಣಿ**

ಕರ್ನಾಟಕ ಡ್ರಗ್ಸ್ ಆ್ಯಕ್ಷನ್ ಫೋರಂ-ಸಾಕ್, ಜನ ಪರ ಫೌಂಡೇಷನ್, ಬಳ್ಳಿಬಳಗದ ವತಿಯಿಂದ ನಗರದಲ್ಲಿರುವ ಪತ್ರಕರ್ತರ ಭವನದಲ್ಲಿ ಶುಕ್ರವಾರ ಆರೋಗ್ಯ ಹಕ್ಕು ಜಾಥಾವನ್ನು ಹಮ್ಮಿಕೊಳ್ಳಲಾಯಿತು.

ಸಾಕ್‌ನ ಡಾ. ಗೋಪಾಲ ದಾಬಡೆ ಮಾತನಾಡಿ, ಜನಸಾಮಾನ್ಯರಿಗೆ ಸರ್ವಕಾಲಕ್ಕೂ ದಕ್ಕುವಂತೆ ಉಚಿತ ಔಷಧ ಒದಗಿಸಲು ಕರ್ನಾಟಕ ಸರ್ಕಾರ ಸಮರ್ಥವಾದ ಆರೋಗ್ಯ ಹಕ್ಕು ಕಾಯ್ದೆ ಜಾರಿಗೆ ತರಬೇಕು. ರಾಜಸ್ಥಾನ, ತಮಿಳುನಾಡು, ಕೇರಳ ರಾಜ್ಯಗಳ ಮಾದರಿಯಲ್ಲಿ ಕರ್ನಾಟಕದಲ್ಲಿ ಆರೋಗ್ಯ ಸೇವೆಗಳು ಲಭ್ಯವಾಗಬೇಕು.

ಈ ನಿಟ್ಟಿನಲ್ಲಿ ಕಾನೂನು ರೂಪಿಸುವ ಅಗತ್ಯವಿದೆ. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಹಣಕಾಸು ಕಾರ್ಯದರ್ಶಿ, ಆರೋಗ್ಯ ಇಲಾಖೆ ಕಾರ್ಯದರ್ಶಿ, ಕೇರಳ, ರಾಜ ಸ್ಥಾನ, ತಮಿಳುನಾಡಿನಿಂದ ನುರಿತ ಹಾಗೂ ತಜ್ಞ ವೈದ್ಯರನ್ನು ಒಳಗೊಂಡ ಸಮಿತಿ ರಚಿಸಬೇಕು. ಆ ಸಮಿತಿ ನೀಡುವ ವರದಿ ಆಧಾರದ ಮೇರೆಗೆ ಸೂಕ್ತ ಕಾನೂನು ರೂಪಿಸಬೇಕು' ಎಂದು ಆಗ್ರಹಿಸಿದರು. ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳು ಲಭ್ಯ




ಉದಯವಾಹಿನಿ ಚಿತ್ರ

ವಾಗುವಂತೆ ನೋಡಿಕೊಳ್ಳುವಲ್ಲಿ ಸರ್ಕಾರ ವಿಫಲವಾಗಿದೆ. ಸರ್ಕಾರಿ ಆಸ್ಪತ್ರೆಗಳು ಹೊರಗಡೆಯಿಂದ ಔಷಧಿಗಳನ್ನು ತರುವಂತೆ ಕಳಿಸುತ್ತಿರುವುದು ನೋವಿನ ಸಂಗತಿ. ಹೀಗಾಗಿ, ಸರ್ಕಾರಿ ಆಸ್ಪತ್ರೆಗಳಿಗೆ ಯಥೇಚ್ಛವಾಗಿ ಅಗತ್ಯವಿರುವ ಔಷಧಿಗಳನ್ನು ಪೂರೈಸಬೇಕು ಎಂದರು.

ಜನಪರ ವೈದ್ಯ ಡಾ.ಅನಿಲ್ ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರಿಂದ ಆಯ್ಕೆಯಾದ ಸರ್ಕಾರಗಳು ಜನರ ಆರೋಗ್ಯದ ಹಕ್ಕನ್ನು ಕಲ್ಪಿಸುವುದು ಸರ್ಕಾರದ ಜವಾಬ್ದಾರಿ. ಸರ್ಕಾರಗಳು ಸಾಂವಿಧಾನಿಕವಾಗಿ ಜನರಿಗೆ ಇರುವ ಹಕ್ಕು ನೀಡದೆ ಕಾನೂನು ಉಲ್ಲಂಘಿಸುತ್ತಿದೆ ಎಂದರು.

### ಕಟ್ಟುನಿಟ್ಟಿನ ಸೂಚನೆ ನೀಡಿ

**ರಾಜ್ಯದಲ್ಲಿ ತಾಯಂದಿರ ಸರಣಿ ಸಾವಿಗೆ ಕಲುಷಿತ, ಕಳಪೆ ಗುಣಮಟ್ಟದ ಔಷಧಿಗಳೇ ಕಾರಣ. ಔಷಧಿಗಳ ಗುಣಮಟ್ಟ ಖಚಿತಪಡಿಸುವಲ್ಲಿ ಕೆಎಸ್ ಎಂಎಸ್‌ಸಿಎಲ್ ವಿಫಲವಾಗಿದ್ದು, ರಾಜ್ಯ ಸರ್ಕಾರವು ಮೊದಲು ಇದನ್ನು ಪುನರುಜ್ಜಿವನಗೊಳಿಸಬೇಕು. ಔಷಧಿಗಳ ಗುಣಮಟ್ಟ ಖಾತ್ರಿಪಡಿಸುವ ಬಗ್ಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು ಎಂದು ಒತ್ತಾಯಿಸಿದರು.**

ಪತ್ರಿಕಾಗೋಷ್ಠಿ ನಂತರ ತಹಶೀಲ್ದಾರ್ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು. ಸಾಮಾಜಿಕ ಕಾರ್ಯಕರ್ತ, ಕವಿ ಶಶಿರಾಜ್ ಹರತಲೆ, ದಲಿತ ಸಂಘರ್ಷ ಸಮಿತಿಯ ತಾಲ್ಲೂಕು ಸಂಚಾಲಕ ಶ್ರೀರಂಗಪ್ಪ, ಹೋರಾಟಗಾರ್ತಿ ಲಕ್ಷ್ಮಿನರಸಮ್ಮ ಇದ್ದರು.

# ಕೀಟ, ರೋಗಗಳ ಸಮಗ್ರ ನಿರ್ವಹಣೆಯಿಂದ ಉತ್ತಮ ಫಸಲು

## ರಾಸಾಯನಿಕ ಮುಕ್ತ ಕಡಲೆಕಾಯಿ ಎಣ್ಣೆ ತೆಗೆದು ಉತ್ತಮ ಬೆಲೆಯಲ್ಲಿ ರೈತರಿಗೆ ಮಾರಾಟ

• **ಉದಯವಾಹಿನಿ, ಕೋಲಾರ**

ಎಸ್.ಎಂ.ಸೆಹಗಲ್ ಫೌಂಡೇಶನ್, ಎಸ್‌ಯುಜೆಎಂಟಿ ರೈತ ಉತ್ಪಾದಕರ ಕಂಪನಿ ನಿಯಮಿತ, ಸುಗಟೂರು ರವರ ಸಹಯೋಗದೊಂದಿಗೆ ಮಾವು ಬೆಳೆಯಲ್ಲಿ ಸೂಕ್ಷ್ಮ ಪೋಷಕಾಂಶಗಳು ಮತ್ತು ರಸಗೊಬ್ಬರಗಳ ವಿತರಣೆ ಮತ್ತು ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾ ಗಿತ್ತು. ಸುಗಟೂರು ಗ್ರಾಮದಲ್ಲಿ ನಡೆದ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಎಸ್ ಎಂ ಸೆಹಗಲ್ ಫೌಂಡೇಶನ್ ಸಂಸ್ಥೆಯ ವಿಷಯ ತಜ್ಞ ವೆಂಕಟಶಿವಾರೆಡ್ಡಿ, ಮಾವು ಬೆಳೆಗೆ ಹೂವಿನ ಹಂತದಲ್ಲಿ ಬಾಧಿಸುವ ಕೀಟ, ರೋಗಗಳ ಸಮಗ್ರ ನಿರ್ವಹಣೆ ಕುರಿತು ತಿಳಿಸಿ, ಸೂಕ್ಷ್ಮ ಪೋಷಕಾಂಶಗಳಾದ ಬೋರಾನ್, ಬಾಹರ್‌ನ ಬಳಕೆ, ಉಪಯೋಗ ಕುರಿತು ಮಾಹಿತಿ ನೀಡಿದರು.

ಎಸ್ ಎಂ ಸೆಹಗಲ್ ಫೌಂಡೇಶನ್ ಸಂಸ್ಥೆಯ ಕಾರ್ಯಕ್ರಮ ಸಂಯೋಜಕ ಯತೀಶ್‌ಗೌಡ ಮಾತನಾಡಿ, ಮಾವು ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವುದು, ನಮ್ಮ ಸಂಸ್ಥೆ ವತಿಯಿಂದ ಕಡಲೆಕಾಯಿ ಎಣ್ಣೆ ತೆಗೆಯುವ ಘಟಕ ನಿರ್ಮಾಣಕ್ಕೆ ಯಂತ್ರವನ್ನು ಒದಗಿಸಿದ್ದು, ಅದರಿಂದ ರಾಸಾಯನಿಕ ಮುಕ್ತ ಕಡಲೆಕಾಯಿ ಎಣ್ಣೆಯನ್ನು ತೆಗೆದು



ಉದಯವಾಹಿನಿ ಚಿತ್ರ

**ರೈತರಿಗೆ ರಸಗೊಬ್ಬರಗಳ ವಿತರಣೆ**

ಉತ್ತಮ ಬೆಲೆಯಲ್ಲಿ ರೈತರಿಗೆ ಮಾರಾಟ ಮಾಡಲಾಗುತ್ತಿರುವ ಕುರಿತು ತಿಳಿಸಿದರು.

ಅದೇ ರೀತಿ ಖಾಸಗಿ ಕಂಪನಿಯಾದ ಕ್ರಿಬ್ಕೋ ಪರ್ಟಿಲೈಸರ್ ಕಂಪನಿ ರವರು ತಮ್ಮ ಉತ್ಪನ್ನಗಳು, ರೈತ ಉತ್ಪಾದಕರ ಕಂಪನಿಗೆ ಲೋಕಲ್ ಸೊಸೈಟಿಗಳ ಮೂಲಕ ಗೊಬ್ಬರಗಳ ಸರಬರಾಜು ಮಾಡುವುದರ ಬಗ್ಗೆ ಸಮಗ್ರ ಮಾಹಿತಿ ನೀಡಿದರು. ರೈತ ಉತ್ಪಾದಕ ಕಂಪನಿಯ ಅಧ್ಯಕ್ಷ ಕೆ.ನಂದೀಶ್ ಮಾತನಾಡಿ, ನಮ್ಮ ಕಂಪನಿಯಲ್ಲಿ ಸಾವಯವ ಬೆಲ್ಲ, ಜೇನುತುಪ್ಪ ಮತ್ತು ಕಡಲೆಕಾಯಿ ಎಣ್ಣೆ ಉತ್ಪನ್ನಗಳನ್ನು ಗುಣಮಟ್ಟದ ಧರ ದಲ್ಲಿ ರೈತರಿಗೆ ಮಾರಾಟ ಮಾಡುತ್ತಿರುವುದರ ಬಗ್ಗೆ ತಿಳಿಸಿಕೊಡಲಾಯಿತು.

ನಂತರ ಎಸ್ ಎಂ ಸೆಹಗಲ್ ಫೌಂಡೇಶನ್ ಸಂಸ್ಥೆ ವತಿಯಿಂದ ನಮ್ಮ ರೈತ ಉತ್ಪಾದಕರ ಕಂಪನಿಗೆ ಒದಗಿಸಿರುವ ಸೌಲಭ್ಯಗಳ ಬಗ್ಗೆ ರೈತರಿಗೆ ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ತೋಟಗಾರಿಕೆ ಇಲಾಖೆ ಮಂಜುನಾಥ, ಎಸ್ ಎಂ ಸೆಹಗಲ್ ಫೌಂಡೇಶನ್ ಸಂಸ್ಥೆಯ ಯತೀಶ್ ಗೌಡ, ಮಾಲತೇಶ್, ವಾಣಿ, ಎಸ್ ಯು ಜೆ ಎಂ ಟಿ ರೈತ ಉತ್ಪಾದಕರ ಕಂಪನಿಯ ಅಧ್ಯಕ್ಷರು ನಂದೀಶ್ ಕೆ, ಭೂಪತಿಗೌಡ, ಮಂಜುನಾಥಗೌಡ, ರಮೇಶ್ ಬಾಬು, ವೆಂಕಟಸ್ವಾಮಪ್ಪ, ರವಿ, ರಾಜಪ್ಪ ಮತ್ತಿತರರು ಹಾಜರಿದ್ದರು.

**ತೋಟಗಾರಿಕೆ ಇಲಾಖೆಯ ಕ್ಷೇತ್ರ ಅಧಿಕಾರಿ ಮಂಜುನಾಥ ಮಾತನಾಡಿ, ಮಾವು ಬೆಳೆಗಾರರಿಗೆ ಶೇ.50% ರಷ್ಟು ಸಹಾಯಧನದ ರೂಪದಲ್ಲಿ ಮಾವು ಸ್ಪೇಶಲ್, ಮೋಹಕ ಬಲೆಗಳು, ಫ್ರೂಟ್ ಕವರ್ ಬ್ಯಾಗ್‌ಗಳು, ಪ್ಲಾಸ್ಟಿಕ್ ಕ್ರೇಟ್‌ಗಳು ಮತ್ತು ಮಾವು ಬೆಳೆಯಲ್ಲಿ ಪಾತಿ ಮಾಡುವುದು, ರೆಂಬೆಗಳ ಸವರುವಿಕೆಗೆ, ಮಾವು ಬೆಳೆಯಲ್ಲಿ ಕಾಂಡ ಕೊರಕದ ನಿರ್ವಹಣೆ ಕ್ರಮಗಳು ಹಾಗೂ ಇಲಾಖೆಯಲ್ಲಿ ದೊರಕುವ ಸೌಲಭ್ಯಗಳ ಬಗ್ಗೆ ಸಮಗ್ರ ಮಾಹಿತಿ ನೀಡಿದರು.**

# ಮುಳ್ಳು ಹಂದಿ ಸಾಗಣೆ

## ಇಬ್ಬರು ಆರೋಪಿಗಳ ಬಂಧನ

• **ಉದಯವಾಹಿನಿ, ಹಲಗೂರು**

ಸಮೀಪದ ಕಾವೇರಿ ವನ್ಯಜೀವಿ ವಲಯ ಅರಣ್ಯ ಪ್ರದೇಶದಲ್ಲಿ ಮುಳ್ಳು ಹಂದಿ ಸಾಗಿಸುತ್ತಿದ್ದ ಇಬ್ಬರನ್ನು ಅರಣ್ಯ ಇಲಾಖೆ ಸಿಬ್ಬಂದಿ ಬಂಧಿಸಿದ್ದಾರೆ. ಹಲಗೂರು ಸಮೀಪದ ಓದುಬಸಪ್ಪನದೊಡ್ಡಿ ಗ್ರಾಮದ ನಂದೀಶ್, ಕಿರುಗಾವಲು ಹೋಬಳಿ ದೇವಿಪುರ ಗ್ರಾಮದ ಮಧು ಬಂಧಿತ ಆರೋಪಿಗಳು. ಧನಗೂರು ಗಸ್ತಿನ ಗಸ್ತು ಅರಣ್ಯ ಪಾಲಕರು ದಬ್ಬಹಳ್ಳಿ ಅರಣ್ಯ ಪ್ರದೇಶದ ಡಿ-ಲೈನ್ ಗಡಿಯ ಬಳಿ ಆನೆ ಕಾವಲು ನಡೆಸುತ್ತಿರುವ ಸಂದರ್ಭ ಶಿಂಷಾ ಕಡೆಯಿಂದ ದಬ್ಬಹಳ್ಳಿ ಕಡೆಗೆ ಮೋಟಾರ್ ಬೈಕ್‌ನಲ್ಲಿ ಬಂದ ಮೂವರು ಆರೋಪಿಗಳು ಅರಣ್ಯ ಇಲಾಖೆ ಸಿಬ್ಬಂದಿ ನೋಡಿ ಪರಾರಿ ಆಗಲು ಯತ್ನಿಸಿದ್ದಾರೆ. ಆದರೆ ಸಿಬ್ಬಂದಿ ಪುನೀತ್ ಮತ್ತು ಮಲ್ಲಿಕಾರ್ಜುನ ಕುಂಬಾರ ಬೆನ್ನತ್ತಿ ಇಬ್ಬರು ಆರೋಪಿಗಳನ್ನು ವಶಕ್ಕೆ ಪಡೆದಿದ್ದಾರೆ. ಬುಯ್ಯನದೊಡ್ಡಿ ಗ್ರಾಮದ ಅಭಿಷೇಕ್, ಹೊಸದೊಡ್ಡಿ ಗ್ರಾಮದ ಸಿದ್ದರಾಜು ಕತ್ತಲಿನಲ್ಲಿ ಪರಾರಿಯಾಗಿದ್ದಾರೆ.



ಉದಯವಾಹಿನಿ ಚಿತ್ರ

ಆರೋಪಿಗಳ ಸನಿಹದಲ್ಲಿ ಬಿದ್ದಿದ್ದ ಚೀಲವನ್ನು ತೆರದು ನೋಡಿದಾಗ ಮುಳ್ಳು ಹಂದಿ ಮೃತದೇಹ ಪತ್ತೆಯಾಗಿದೆ. ಬಂಧಿತ ಆರೋಪಿಗಳಿಂದ ಮೋಟಾರ್ ಬೈಕ್ ಮತ್ತು ಮೊಬೈಲ್ ಫೋನ್ ಅನ್ನು ವಶಪಡಿಸಿಕೊಂಡು, ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ.

ಕಾವೇರಿ ವನ್ಯಜೀವಿ ಕೊಳ್ಳೇಗಾಲ ಮುಖ್ಯ ಅರಣ್ಯ ಸಂರಕಣಾ ಅಧಿಕಾರಿ ಎಂ.ಸಿ. ಸುರೇಂದ್ರ, ಸಹಾಯಕ ಮುಖ್ಯ ಅರಣ್ಯ ಸಂರಕ್ಷಣಾ ಅಧಿಕಾರಿ ನಾಗೇಂದ್ರ ಪ್ರಸಾದ್, ಮಾರ್ಗದರ್ಶನದಲ್ಲಿ ಹಲಗೂರು ವಲಯ ಅರಣ್ಯ ಅಧಿಕಾರಿ ಎಸ್.ಎಂ.ಪ್ರಮೋದ್ ಕುಮಾರ್ ದೇವ್ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಮಿನಿ ನ್ಯೂಸ್

### ಲಾಲ್ ಬಾಗ್‌ನಲ್ಲಿ ಅಂಬೇಡ್ಕರ್ ಪ್ರತಿಮೆ ನಿರ್ಮಿಸಲಿ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ರಾಮನಗರ**

ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಡಾ.ಬಿ.ಆರ್.ಅಂಬೇಡ್ಕರ್‌ಅವರ 250 ಅಡಿ ಎತ್ತರದ ಪ್ರತಿಮೆ ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ಭೀಮ್‌ಸೇನೆ ರಾಜ್ಯ ಪ್ರಧಾನ ಕಾರ್ಯದರ್ಶಿ ಸುರೇಶ್ ಗವಿಯಪ್ಪ ಒತ್ತಾಯಿಸಿದರು. ಪ್ರತಿಮೆ ನಿರ್ಮಾಣ ವಿಚಾರವಾಗಿ ರಾಮನಗರದ ಪ್ರವಾಸಿ ಮಂದಿರದಲ್ಲಿ ಗುರುವಾರ ಕರ್ನಾಟಕ ಭೀಮ್ ಸೇನೆ ಪದಾಧಿಕಾರಿಗಳ ಸಮ್ಮುಖದಲ್ಲಿ ಡಾ ಬಿ.ಆರ್. ಅಂಬೇಡ್ಕರ್ ಭಾವಚಿತ್ರದ ಪೋಸ್ಟರ್, ಕರಪತ್ರ ಬಿಡುಗಡೆಗೊಳಿಸಿ ಮಾತನಾಡಿದರು. ಅಂಬೇಡ್ಕರ್ ದೇಶದ ಬಹು ದೊಡ್ಡ ಆಸ್ತಿ. ಅಂತಹ ಮಹಾನ್ ಪುರುಷರ ಪ್ರತಿಮೆಯನ್ನು ನೆರೆ ರಾಜ್ಯ ತೆಲಂಗಾಣದಲ್ಲಿ 2023ರಲ್ಲಿ 123 ಅಡಿ, ಅಂಧ್ರಪ್ರದೇಶದ ವಿಜಯವಾಡದಲ್ಲಿ 206 ಅಡಿ ಪ್ರತಿಮೆಯನ್ನು ಅಲ್ಲಿನ ಸರ್ಕಾರಗಳು ಅನಾವರಣ ಮಾಡಿವೆ. ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಸುಮಾರು 245 ಎಕರೆ ಪ್ರದೇಶವಿದ್ದು, ಈ ಸಾಲಿನ ರಾಜ್ಯ ಬಜೆಟ್‌ನಲ್ಲಿ ಪ್ರತಿಮೆ ನಿರ್ಮಾಣ ಮಾಡಲು ಘೋಷಣೆ ಮಾಡಬೇಕು ಎಂದು ಒತ್ತಾಯಿಸಿದರು.

### ಕಲ್ಲು ತೂರಾಟ ಪ್ರಕರಣದ ತನಿಖೆ ನಡೆಸುತ್ತಿದ್ದ ಪೊಲೀಸ್ ಅಧಿಕಾರಿ ವರ್ಗಾವಣೆ

• **ಉದಯವಾಹಿನಿ, ಮೈಸೂರು**

ಉದಯಗಿರಿ ಪೊಲೀಸ್ ಠಾಣೆ ಮೇಲಿನ ದಾಳಿ ಪ್ರಕರಣದ ತನಿಖೆ ನಡೆಸುತ್ತಿದ್ದ ಪೊಲೀಸ್ ಅಧಿಕಾರಿಯನ್ನು ದಿಢೀರ್ ವರ್ಗಾವಣೆ ಮಾಡಲಾಗಿದೆ. ಸೋಮವಾರ ರಾತ್ರಿ ಉದಯಗಿರಿ ಪೊಲೀಸ್ ಠಾಣೆ ಮೇಲೆ ನಡೆದ ಕಲ್ಲುತೂರಾಟ ಪ್ರಕರಣದ ತನಿಖಾಧಿಕಾರಿಯಾಗಿದ್ದ ಸಿಸಿಬಿ ಎಸಿಪಿ ಸಂದೇಶ್ ಕುಮಾರ್ ಅವರನ್ನು ಎತ್ತಂಗಡಿ ಮಾಡಲಾಗಿದೆ. ಸಂದೇಶ್ ಕುಮಾರ್ ಅವರ ಜಾಗಕ್ಕೆ ಸಿಐಡಿಯಲ್ಲಿದ್ದ ಮೊಹಮ್ಮದ್ ಶರೀಫ್ ರಾವುತರ್ ಅವರನ್ನು ಮೈಸೂರು ನಗರ ಸಿಸಿಬಿ ಎಸಿಪಿಯಾಗಿ ನೇಮಿಸಲಾಗಿದೆ. ಉದಯಗಿರಿ ಠಾಣೆ ಮೇಲಿನ ಕಲ್ಲು ತೂರಾಟ ಪ್ರಕರಣದಲ್ಲಿ ಎಸಿಪಿ, ಇನ್‌ಸ್ಪೆಕ್ಟರ್ ಸೇರಿದಂತೆ 14 ಮಂದಿ ಪೊಲೀಸ್ ಸಿಬ್ಬಂದಿ ಸಹ ಗಾಯಗೊಂಡಿದ್ದರು.

ಈ ಪ್ರಕರಣದ ತನಿಖೆಯನ್ನು ಎಸಿಪಿ ಸಂದೇಶ್ ಕುಮಾರ್ ಅವರು ಕೈಗೊಂಡು ಈವರೆಗೂ ಹಲವರನ್ನು ಬಂಧಿಸಿದ್ದರು. ಈ ಪ್ರಕರಣದ ತನಿಖೆ ಇನ್ನು ನಡೆಯುತ್ತಿದ್ದಾಗಲೇ ಸಂದೇಶ್ ಕುಮಾರ್ ಅವರನ್ನು ವರ್ಗಾವಣೆ ಮಾಡಿರುವುದು ಹಲವು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ. ವರ್ಗಾವಣೆಗೊಂಡಿರುವ ಎಸಿಪಿ ಸಂದೇಶ್ ಕುಮಾರ್ ಅವರಿಗೆ ಯಾವುದೇ ಸ್ಥಳವನ್ನು ತೋರಿಸಿಲ್ಲ. ಶಾಂತಮಲ್ಲಪ್ಪ ವರ್ಗಾವಣೆ ಹಾಗೆಯೇ ಮೈಸೂರಿನ ದೇವರಾಜ ಉಪವಿಭಾಗದ ಎಸಿಪಿ ಯಾಗಿದ್ದ ಶಾಂತಮಲ್ಲಪ್ಪ ಅವರನ್ನು ವರ್ಗಾವಣೆಗೊಳಿಸಲಾಗಿದ್ದು ಅವರ ಸ್ಥಾನಕ್ಕೆ ರಾಜೇಂದ್ರ, ಅವರನ್ನು ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.


### ಬಾವಿಯಲ್ಲಿ ಮಹಿಳೆಯ ಶವ ಪತ್ತೆ, ಸಾವಿನ ಸುತ್ತ ಅನುಮಾನ

• **ಉದಯವಾಹಿನಿ, ಮಂಡ್ಯ**

ಮಹಿಳೆಯ ಶವ ಬಾವಿಯಲ್ಲಿ ಪತ್ತೆಯಾಗಿದ್ದು ಸಾವಿನ ಹಿಂದೆ ಹಲವಾರು ಅನುಮಾನ ಮೂಡಿದೆ. ತಾಲ್ಲೂಕಿನ ಕೆ.ಗೌಡಗೆರೆ ಗ್ರಾಮದಲ್ಲಿ ಗೃಹಿಣಿ ಜಾಹ್ನವಿ (26) ಮೃತದೇಹ ಪತ್ತೆಯಾಗಿದೆ. ಜಾಹ್ನವಿಯನ್ನು ಕೊಂದು ಆತ್ಮಹತ್ಯೆ ಎಂದು ಬಿಂಬಿಸಲು ಯತ್ನಿಸಲಾಗಿದೆ ಮೃತಳ ಕುಟುಂಬಸ್ಥರು ಆರೋಪಿಸಿದ್ದರೆ. ಕಳೆದ 4 ವರ್ಷದ ಹಿಂದೆ ಯಶವಂತ್ ಮತ್ತು ಜಾಹ್ನವಿ ಮದುವೆಯಾಗಿತ್ತು.ನಂತರ ನಿತ್ಯ ಪತಿ ಕುಡಿದು ಬಂದು ಜಾಹ್ನವಿಗೆ ಹಲ್ಲೆ ಮಾಡುತ್ತಿದ್ದ ಕಿರುಕುಳ ಸಹಿಸಲಾಗದೆ ಬಾವಿಗೆ ಬಿದ್ದು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಸ್ಥಳೀಯರು ಹೇಳಿದ್ದಾರೆ.

ಆದರೆ, ಮೃತದೇಹದ ಮೇಲೆ ಮತ್ತು ಮುಖದ ಮೇಲೆ ರಕ್ತದ ಕಲೆ ಪತ್ತೆಯಾಗಿದೆ. ಹಲ್ಲೆ ನಡೆಸಿ, ಬಳಿಕ ಪತಿಯೇ ಕೊಲೆ ಮಾಡಿದ್ದಾನೆಂದು ಜಾಹ್ನವಿ ಪೋಷಕರು ಆರೋಪಿಸಿದ್ದಾರೆ. ಕೆರಗೋಡು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪ್ರಕರಣ ದಾಖಲಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ

### ಕೆಂಗಲ್ ಹನುಮಂತಯ್ಯ ಜನ್ಮ ದಿನಾಚರಣೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ರಾಮನಗರ**

ಇಲ್ಲಿನ ಹಳೆ ಬಸ್ ನಿಲ್ದಾಣದಲ್ಲಿ ಈಚೆಗೆ ಕೆಂಗಲ್ ಹನುಮಂತಯ್ಯ ಸಾಮಾಜಿಕ, ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಕೆಂಗಲ್ ಹನುಮಂತಯ್ಯ ಅವರ 116ನೇ ವರ್ಷದ ಜನ್ಮದಿನವನ್ನು ಆಚರಿಸಲಾಯಿತು. ಈ ವೇಳೆ ನಗರಸಭೆ ಅಧ್ಯಕ್ಷ ಕೆ.ಶೇಷಾದ್ರಿ, ಮಾತನಾಡಿ, ನಮ್ಮ ಜಿಲ್ಲೆಯ ಹೆಮ್ಮೆಯ ನಾಯಕ ಕೆಂಗಲ್ ಹನುಮಂತಯ್ಯ ಅವರ ಆದರ್ಶಗಳು ಮುಂದಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಅವರು ನಡೆದು ಬಂದ ಹಾದಿಯನ್ನು ಪುಸ್ತಕ ರೂಪದಲ್ಲಿ ಹೊರ ತರಬೇಕಿದೆ ಎಂದು ಹೇಳಿದರು. ಕೆಂಗಲ್ ಹನುಮಂತಯ್ಯ ಅವರ ಕೊಡುಗೆ ನಾಡಿಗೆ ಅಪಾರವಾಗಿದೆ. ಅವರ ದೂರದೃಷ್ಟಿಯ ಫಲ ಶುಕ್ರವಾರ ನಾವು ವಿಧಾನಸೌಧವನ್ನು ಕಂಡಿದ್ದೇವೆ. ಯಾವ ಪ್ರತಿಫಲಾಪೇಕ್ಷೆ ಇಲ್ಲದೆ ನಿಸ್ವಾರ್ಥದಿಂದ ಸೇವೆ ಸಲ್ಲಿಸಿ ನಾಡಿಗೆ ಕೊಡುಗೆ ನೀಡಿದ್ದಾರೆ ಎಂದರು.

ಸಾಹಿತಿ ಸೂ.ಚಿ. ಗಂಗಾಧರಯ್ಯ ಮಾತನಾಡಿ, ರಾಜಕೀಯದಲ್ಲಿ ಯಾವುದೇ ಕಪ್ಪುಚುಕ್ಕೆ ಇಲ್ಲದೆ ಉತ್ತಮ ಆಡಳಿತ ನೀಡಿದವರು ಕೆಂಗಲ್ ಹನುಮಂತಯ್ಯ. ನೈತಿಕತೆ ವಿಷಯದಲ್ಲಿ ಎಂದೂ ರಾಜಿಯಾಗದೆ ಪ್ರಾಮಾಣಿವಾಗಿ ಆಡಳಿತ ನಡೆಸಿದವರು. ಅವರ ಜನಪರ ಆಡಳಿತ, ಜನಸೇವಾ ಕಾರ್ಯಗಳು ಅವರ ದೂರದೃಷ್ಟಿ ಎಂದು ತಿಳಿಸಿದರು. ಕೆಂಗಲ್ ಹನುಮಂತಯ್ಯ ಪುತ್ಥಳಿಗೆ ಹಾರ ಹಾಕಿ ಸಿಹಿ ಹಂಚಿ ಪ್ರತಿಮೆಗೆ ಪೂಜೆ ಸಲ್ಲಿಸಲಾಯಿತು. ನಂತರ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

# ‘ನಗು-ಮಗು’ ಮನವಿಗೂ ಸ್ಪಂದಿಸದ ಆರೋಗ್ಯ ಇಲಾಖೆ

● 250 ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗಳ ಸಹಿತ ತಾಲ್ಲೂಕು ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಈ ಆಂಬುಲೆನ್ಸ್ ತೆರೆಮರೆಗೆ

• ಉದಯವಾಹಿನಿ ಪುತ್ತೂರು

ಗರ್ಭಿಣಿಯರು ಹಾಗೂ ಬಾಣಂತಿಯರಿಗೆ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯವಾಗಿದ್ದ ‘ನಗು-ಮಗು’ ಆಂಬುಲೆನ್ಸ್ ಕಳೆದ 20 ದಿನಗಳಿಂದ ಚಾಲನೆ ಬಂದ್ ಮಾಡಿ ಮೂಲೆ ಸೇರಿದೆ. ರಾಜ್ಯದ 250 ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗಳ ಸಹಿತ ತಾಲೂಕು ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಈ ಆಂಬುಲೆನ್ಸ್ ತೆರೆಯ ಮರೆಗೆ ಸರಿಯಲು ಇಲಾಖೆಯ ನಿರ್ಲಕ್ಷ್ಯ ಎಂಬುವುದು ಸ್ಪಷ್ಟವಾಗಿದೆ. ಈ ಆಂಬುಲೆನ್ಸ್‌ಗಳು ರಸ್ತೆಗಿಳಿಯದಂತಾಗಲು ಕಾರಣ ಇನ್ಶೂರೆನ್ಸ್ ಕಟ್ಟಿಲ್ಲ..!

ವಾರ್ಷಿಕವಾಗಿ ಸುಮಾರು ರೂ.10 ಸಾವಿರ ಇನ್ಶೂರೆನ್ಸ್ ಕಟ್ಟಬೇಕಾಗಿದ್ದು, ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗಳಿಂದ ಮೇಲಿಂದ ಮೇಲೆ ಮನವಿ ಸಲ್ಲಿಸಿದರೂ ಇಲಾಖೆ ಈ ಅನುದಾನ ನೀಡಿಲ್ಲ. ಹಾಗಾಗಿ ‘ನಗು-ಮಗು’ ಬಹುತೇಕ ಎಲ್ಲಾ ಆಸ್ಪತ್ರೆಗಳಲ್ಲಿಯೂ ತನ್ನ ಚಲನೆಯನ್ನು ನಿಲ್ಲಿಸಿದೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಬೇರೆ ಆಂಬುಲೆನ್ಸ್ ಗಳಿದ್ದರೂ ಈ ನಗು-ಮಗುವಿಗೆ ಪ್ರತ್ಯೇಕವಾದ ಸ್ಥಾನವೊಂದಿದೆ. ವಿಶೇಷವಾಗಿ ಸರ್ಕಾರಿ ಆಸ್ಪತ್ರೆಗಳಲ್ಲಿ ಹೆರಿಗೆಯಾದ ನಂತರ ಮಗು ಮತ್ತು ಬಾಣಂತಿ ತಾಯಿಯನ್ನು ಅವರ ಮನೆಗೆ ಕ್ಷೇಮವಾಗಿ ತಲುಪಿಸುವ ಜವಾಬ್ದಾರಿ ಈ ಆಂಬುಲೆನ್ಸ್‌ನದ್ದಾಗಿದೆ. ಇದೀಗ ಈ ಸೌಲಭ್ಯದಿಂದ ತಾಯಿ-ಮಗು ವಂಚಿತರಾಗುತ್ತಿದ್ದಾರೆ.

**ಆರೋಗ್ಯ ವಿಕಾಸ ಸೌಧ ಮೌನಾಚರಣೆ:** ಆಂಬುಲೆನ್ಸ್ ಗಳಿಗೆ ಇನ್ಶೂರೆನ್ಸ್ ಕಟ್ಟಲು ಆರೋಗ್ಯ ವಿಕಾಸ ಸೌಧದ ಕಚೇರಿ ಹಣವನ್ನು ಸಾರ್ವಜನಿಕ ಆಸ್ಪತ್ರೆಗೆ ನೀಡಬೇಕು.

ಈ ಹಣ ಆಸ್ಪತ್ರೆಯ ಡ್ರಾಯಿಂಗ್ ಆಫೀಸರ್ ಎಕೌಂಟಿಗೆ ಹಾಕಬೇಕು. ಬಳಿಕ ಇನ್ಶೂರೆನ್ಸ್ ಪಾವತಿ ಮಾಡುವ ಕೆಲಸ




**20 ದಿನಗಳಿಂದ ಚಾಲನೆ ಬಂದ್**

ಮಾಡಲಾಗುತ್ತದೆ. ಖಜಾನೆ-2 ಅಡಿಯಲ್ಲಿಯೇ ಈ ಹಣ ಪಾವತಿ ಮಾಡುವುದು ಕಡ್ಡಾಯ. ಈ ಹಿನ್ನಲೆಯಲ್ಲಿ ಸ್ಥಳೀಯವಾಗಿ ಹಣ ಹೊಂದಾಣಿಕೆ ಮಾಡಿಕೊಂಡು ಇನ್ಶೂರೆನ್ಸ್ ಕಟ್ಟುವ ಹಾಗಿಲ್ಲ. ಆದರೆ ವಾರ್ಷಿಕವಾಗಿ ಕಟ್ಟಬೇಕಾದ ಈ ಪಾವತಿಯನ್ನು ಇನ್ನೂ ಆರೋಗ್ಯ ವಿಕಾಸ ಸೌಧದಿಂದ ನೀಡಲಾಗಿಲ್ಲ. ಸರ್ಕಾರಿ ಆಸ್ಪತ್ರೆಗಳಿಂದ ಹಣ ಪಾವತಿ ಮಾಡಿ ಎಂಬ ಕೂಗಿಗೆ ಆರೋಗ್ಯ ವಿಕಾಸ ಸೌಧದ ಅಧಿಕಾರಿ ವರ್ಗ ಮೌನಾಚರಣೆ ಮಾಡುತ್ತಿದೆ ಎನ್ನುವ ಮಾಹಿತಿ ತಿಳಿದುಬಂದಿದೆ.

### ಸರ್ಕಾರಕ್ಕೆ ಹಣದ ಕೊರತೆಯೇ?

ರಾಜ್ಯದ 250 ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗಳು ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿನ ಈ ನಗು-ಮಗು ಆಂಬುಲೆನ್ಸ್ ಗಳಿಗೆ ಇನ್ಶೂರೆನ್ಸ್ ಕಟ್ಟಲು ದೊಡ್ಡ ಪರದಾಟ ಮಾಡಬೇಕಾಗಿಲ್ಲ. ಅಬ್ಬಬ್ಬಾ ಅಂದರೆ ವಾರ್ಷಿಕವಾಗಿ 5 ಲಕ್ಷ ಹಣ ಸಾಕು. ಆದರೆ ಈ ಹಣಕ್ಕೂ ಸರ್ಕಾರದಲ್ಲಿ ಕೊರತೆ ಇದೆಯಾ ಎಂಬ ಪ್ರಶ್ನೆ ಮೂಡುತ್ತಿದೆ. ಮಾಹಿತಿ ಪ್ರಕಾರ ಈ ಹಣಕ್ಕಾಗಿ ಕಳೆದ ಒಂದೂವರೆ ತಿಂಗಳಿನಿಂದ ಆರೋಗ್ಯ ವಿಕಾಸ ಸೌಧದ ಅಧಿಕಾರಿಗಳಿಗೆ ಆಸ್ಪತ್ರೆಯ ಜವಾಬ್ದಾರಿಯುತ ಅಧಿಕಾರಿ ವರ್ಗ ಮನವಿ ಸಲ್ಲಿಸುತ್ತಿದೆ. ಹಾಗಿದ್ದರೂ ಯಾವ ಪ್ರಯೋಜನವೂ ಆಗಿಲ್ಲ. ಇದರ ಪರಿಣಾಮ ‘ನಗು-ಮಗು’ ಈಗ ನಗುತ್ತಿಲ್ಲ. ಇದು ರಾಜ್ಯ ಸರ್ಕಾರಕ್ಕೆ ಹಣದ ಕೊರತೆ ಕಾಡುತ್ತಿದೆ ಎಂಬ ಸೂಚನೆಯೇ ಎನ್ನುವುದು ಸಾರ್ವಜನಿಕರ ಪ್ರಶ್ನೆಯಾಗಿದೆ.

> ಈ ವಿಚಾರ ನನ್ನ ಗಮನಕ್ಕೆ ಬಂದಿರಲಿಲ್ಲ. ಸಂಯುಕ್ತ ಕರ್ನಾಟಕ ಪತ್ರಿಕೆಯಿಂದ ಈ ಬಗ್ಗೆ ಮಾಹಿತಿ ತಿಳಿದುಬಂತು. ಈಗಲೇ ಆರೋಗ್ಯ ಇಲಾಖೆಯ ಸಚಿವರಾದ ದಿನೇಶ್ ಗುಂಡೂರಾವ್ ಅವರ ಜತೆಗೆ ಚರ್ಚೆ ನಡೆಸಿ ತಕ್ಷಣ ಹಣ ಬಿಡುಗಡೆ ನಡೆಸಲು ಕ್ರಮ ಕೈಗೊಳ್ಳುತ್ತೇನೆ. ಸರ್ಕಾರ ಹಣ ಪಾವತಿ ನಡೆಸದೇ ಇರಲು ತಾಂತ್ರಿಕ ಸಮಸ್ಯೆ ಇದೆಯಾ ಎಂದು ವಿಚಾರಿಸುತ್ತೇನೆ. ಗುತ್ತಿಗೆದಾರರ ಬದಲಾವಣೆಯ ಕಾರಣವೇ ಎಂಬ ಬಗ್ಗೆ ಮಾಹಿತಿ ಪಡೆದುಕೊಳ್ಳುತ್ತೇನೆ. ಏನೇ ಇದ್ದರೂ ‘ನಗು-ಮಗು’ ಆಂಬುಲೆನ್ಸ್ ಚಾಲನೆಗೆ ಬೇಕಾದ ವ್ಯವಸ್ಥೆಯನ್ನು ಸರ್ಕಾರದಿಂದ ಮಾಡಿಸುವುದು ನನ್ನ ಜವಾಬ್ದಾರಿ. ಹಾಗಂತ ಈಗ ಪುತ್ತೂರು ಸರ್ಕಾರಿ ಆಸ್ಪತ್ರೆ ಮತ್ತು ಉಪ್ಪಿನಂಗಡಿ ಸರ್ಕಾ ಆಸ್ಪತ್ರೆಯಲ್ಲಿ ಆಂಬುಲೆನ್ಸ್‌ಗಳಿವೆ. ಯಾವುದೇ ಜನರಿಗೆ ಸೌಲಭ್ಯದ ಕೊರತೆಯಾಗದಂತೆ ಕ್ರಮ ವಹಿಸಲು ಸೂಚಿಸುತ್ತೇನೆ- ಅಶೋಕ್ ರೈ ಶಾಸಕರು ಪುತ್ತೂರು


-ಮೇಘಾ ಪಾಲೆತ್ತಾಡಿ

## ವಿದ್ಯಾರ್ಥಿ ದೆಸೆಯಿಂದಲೇ ಮೌಲ್ಯಗಳು, ಪ್ರಯತ್ನಶೀಲತೆ ಮೈಗೂಡಲಿ

• ಉದಯವಾಹಿನಿ ಕಲಬುರಗಿ

ವಿದ್ಯಾರ್ಥಿಗಳು ಬಾಲ್ಯದಲ್ಲಿಯೇ ಗುರಿಯನ್ನು ನಿರ್ಧರಿಸಿ, ಅದಕ್ಕೆ ಪೂರಕವಾಗಿ ಕಾರ್ಯನಿರ್ವಹಿಸಬೇಕು. ಕೀಳರಿಮೆ ತಾಳದೆ, ಧನಾತ್ಮಕ ಚಿಂತನೆ, ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು. ತಂದೆ-ತಾತಿ, ಗುರು-ಹಿರಿಯರಿಗೆ ಗೌರವ ನೀಡಬೇಕು. ವಿದೇಶ ಸಂಸ್ಕೃತಿ ಅನುಕರಣೆ ಬೇಡ. ಸತತ ಅಧ್ಯಯನ, ನಿರಂತರವಾಗಿ ಪ್ರಯತ್ನ ಮಾಡಿದರೆ ಉತ್ತಮ ಫಲಿತಾಂಶ ಪಡೆದು ಉನ್ನತ ಸಾಧನೆ ಮಾಡಬಹುದಾಗಿದೆ ಎಂದು ಗುವಿವಿ ವಿಶ್ರಾಂತ ಪ್ರಾಧ್ಯಾಪಕ ಡಾ.ವಾಸುದೇವ ಸೇಡಂ ಎಚ್. ಹೇಳಿದರು.

ಜೇವರ್ಗಿ ಪಟ್ಟಣದ ಶಹಾಪುರ ರಸ್ತೆಯಲ್ಲಿರುವ ಜೈನಾಪುರ ಫಂಕ್ಷನ್ ಹಾಲ್‌ನಲ್ಲಿ ಶುಕ್ರವಾರ ಏರ್ಪಡಿಸಲಾಗಿದ್ದ ‘ಶ್ರೀ ನರೇಂದ್ರ ಪದವಿ ಪೂರ್ವ ಕಾಲೇಜ್’ನ ವಾರ್ಷಿಕೋತ್ಸವ,ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ಮಂಜುನಾಥ ಬಿ.ಗುತ್ತೇದಾರ, ಉಪನ್ಯಾಸಕ




ಉದಯವಾಹಿನಿ ಚಿತ್ರ

ಎಚ್.ಬಿ.ಪಾಟೀಲ, ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಉದ್ಯಮಿ ಗುರು ತಳವಾರ ಜೈನಾಪುರ, ಯಡ್ರಾಮಿ ಕದಂಬ ಪಿಯು ಕಾಲೇಜಿನ ಪ್ರಾಚಾರ್ಯ ದೇವಿಂದ್ರ ಬಿ.ಗುಡೂರ, ಗೌನಳ್ಳಿ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಅಮೃತ ಮಾಲಿ ಪಾಟೀಲ, ಗಂವ್ಹಾರ ತ್ರಿವಿಕ್ರಮಾನಂದ ಸರಸ್ವತಿ ಸ್ವಾಮಿಗಳ ಪ್ರೌಢಶಾಲೆಯ ಮುಖ್ಯ ಶಿಕ್ಷಕ ವಿಜಯಕುಮಾರ ರೆಡ್ಡಿ, ಕೂಡಿ ದರ್ಗಾ ಸರ್ಕಾರಿ ಪ್ರೌಢಶಾಲೆ ಶಿಕ್ಷಕ ಸುಭಾಷ, ಕಾಲೇಜಿನ ಪ್ರಾಚಾರ್ಯ ದೇವಣ್ಣಗೌಡ ಪಾಟೀಲ ಹಂದನೂರ, ಉಪನ್ಯಾಸಕರಾದ ಮಲ್ಲಿಕಾರ್ಜುನ ಭಾಸಗಿ, ರಾಯಣ್ಣ ಕಟ್ಟಿಮನಿ, ನಿ ಪಟೇಲ್, ಕಲ್ಪನಾ ರೆಡ್ಡಿ, ವಿರೇಶ ಗೋಗಿ, ಶಾಂತಕುಮಾರ ಕುರಡೇಕರ್, ಶಿವಾನಂದ ಬಡಿಗೇರ, ಆಶಾರಾಣಿ ಹವಲ್ದಾರ, ಬಸವರಾಜ ಕೆ.ಪಾಟೀಲ ಹಾಗೂ ವಿದ್ಯಾರ್ಥಿಗಳು, ಪಾಲಕ-ಪೋಷಕರು ಪಾಲ್ಗೊಂಡಿದ್ದರು. ಇದೇ ಸಂದರ್ಭದಲ್ಲಿ ಕಳೆದ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

> ವಿದ್ಯಾರ್ಥಿಗಳು ಶ್ರದ್ಧೆಯಿಂದ ಅಧ್ಯಯನ ಮಾಡಬೇಕು. ತುಳಿಯುವವರ ನಡುವೆ, ಏಳುವವರಾಗಿರಿ. ಉತ್ತಮವಾದ ಫಲಿತಾಂಶ ಪಡೆದು ಪಾಲಕರು, ಶಿಕ್ಷಕರು, ಸಂಸ್ಥೆಗೆ ಹೆಸರು ತರುವ ಕೆಲಸ ಮಾಡಬೇಕು. ರಾಷ್ಟ್ರದ ಅಭಿವೃದ್ಧಿಯಲ್ಲಿ ಶಿಕ್ಷಕರ ಪಾತ್ರ ಪ್ರಮುಖವಾಗಿದ್ದು, ಇದನ್ನು ಅರಿತು ಜವಾಬ್ದಾರಿಯಿಂದ ಸೇವೆ ಸಲ್ಲಿಸಿ, ವಿದ್ಯಾರ್ಥಿಗಳ ಬದುಕನ್ನು ಕಟ್ಟಿಕೊಡಬೇಕಾದದ್ದು ಅಗತ್ಯವಾಗಿದೆ
>
> -ಶ್ರೀಶೈಲ್ ಕೆ.ಖಣದಾಳ, ಕದಂಬ ಪಿಯು ಕಾಲೇಜಿನ ಪ್ರಾಚಾರ್ಯ

## ಕಾಯಕ ಬಂಧು ತರಬೇತಿ



ಉದಯವಾಹಿನಿ ಚಿತ್ರ

• ಉದಯವಾಹಿನಿ ಗುರುಮಠಕಲ್

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಅಲ್ಲ, ಅದು ಒಂದು ಕಾಯ್ದೆ. ಆ ಕಾಯ್ದೆಯಡಿ ತಾವೆಲ್ಲ ಕಾರ್ಯ ನಿರ್ವಹಿಸುತ್ತಿರಿ ಎಂದು ಗುರುಮಠಕಲ್ ತಾಲ್ಲೂಕಿನ ಪಂಚಾಯತ ರಾಜ್ ಸಹಾಯಕ ನಿರ್ದೇಶಕ ಶರಣಪ್ಪ ಮೈಲಾರಿ ಹೇಳಿದರು.

ಗುರುಮಠಕಲ್ ತಾಲ್ಲೂಕು ಪಂಚಾಯಿತಿಯ ಸಭಾಂಗಣದಲ್ಲಿ ಗ್ರಾಮೀಣ ಅಭಿವೃದ್ಧಿ ಆಯುಕ್ತಾಲಯ ಮತ್ತು ಪಂಚಾಯತ್ ರಾಜ್ ಇಲಾಖೆ ಬೆಂಗಳೂರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ತರಬೇತಿ ಸಂಸ್ಥೆ ಮೈಸೂರು ಹಾಗೂ ರಾಜ್ಯ ಗ್ರಾಮ ಸ್ವರಾಜ್ ಅಭಿಯಾನ ಹಾಗೂ ಯಾದಗಿರಿ ಜಿ.ಪಂ ಮತ್ತು ಗುರುಮಠಕಲ್ ತಾ.ಪಂ ಸಂಯುಕ್ತಾಶ್ರಯದಲ್ಲಿ ಗುರುವಾರ ಕಾಯಕ ಬಂದು ತರಬೇತಿಗೆ ಸಸಿಗೆ ನೀರು ಎರೆಯುವ ಮೂಲಕ ಮೂರು ದಿನದ ತರಬೇತಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಗುಳೆ ಹೋಗುವುದನ್ನು ತಪ್ಪಿಸಲು ಮನರೇಗಾ ಕಾಯ್ದೆ ಜಾರಿಯಾಗಿದೆ. ಈ ಕಾಯ್ದೆಯಿಂದ ದುಡಿಯುವ ಕೈಗಳಿಗೆ ಸ್ಥಳೀಯವಾಗಿ ಕೆಲಸ ಸಿಕ್ಕಿದೆ. ಗಂಡು ಹೆಣ್ಣಿಗೂ ಸಮಾನ ಕೂಲಿ ದರ ನಿಗದಿಪಡಿಸಲಾಗಿದೆ. ಹಲವು ಕುಟುಂಬಗಳಿಗೆ ಈ ಕಾಯ್ದೆಯಿಂದ ಸಹಾಯವಾಗಿದೆ ಎಂದರು. ಕಾಯಕ ಬಂಧುಗಳ ಜವಾಬ್ದಾರಿ ಮಹತ್ವದಾಗಿದ್ದು,

ಮೂವತ್ತು ಕೂಲಿಕಾರರ ಮೇಲೆ ಒಬ್ಬರನ್ನು ಮೇಟಿ ಎಂದು ನೇಮಕ ಮಾಡುವರು. ಉದ್ಯೋಗ ಬೇಡಿಕೆ ಅರ್ಜಿ ಸಂಖ್ಯೆ 6, ಮತ್ತು ಹಾಜರಾತಿ ತೆಗೆದುಕೊಳ್ಳುವ ಬಗೆ ಸೇರಿದಂತೆ ಇನ್ನಿತರ ವಿಷಯಗಳ ಕುರಿತು ಸಂಪನ್ಮೂಲ ವ್ಯಕ್ತಿಗಳು ತಿಳಿಸಿಕೊಡಲಿದ್ದಾರೆ ಎಂದರು.

ಸಂಪನ್ಮೂಲ ವ್ಯಕ್ತಿ ದುರ್ಗೇಶ್ ಅವರು ಶಿಬಿರಾರ್ಥಿಗಳಿಗೆ ಕಾಯಕ ಬಂಧು ಕಾರ್ಯಗಳು ಮತ್ತು ಜವಾಬ್ದಾರಿ ಕುರಿತು ಹೇಳಿದರು. ತಾಲ್ಲೂಕು ಎಮ್ ಐ ಎಸ್ ಸಂಯೋಜಕ ತಮ್ಮಾರೆಡ್ಡಿ ಪಾಟೀಲ್ ಅವರು ಭುವನ್ ಜಿಯೋ ಟ್ಯಾಗ್, ಎನ್ ಎಮ್ ಎಮ್ ಎಸ್ ಮತ್ತು ಇತರೆ ವಿಷಯಗಳ ಕುರಿತು ತರಬೇತಿ ನೀಡಿದರು.

## ಸುಸಜ್ಜಿತ ಕಟ್ಟಡ ನಿರ್ಮಾಣ ನಮ್ಮ ಗುರಿ

• ಉದಯವಾಹಿನಿ ಕೊಲ್ಹಾರ

ಜಿಲ್ಲಾ ಪಂಚಾಯತ ವಿಜಯಪುರ,ಪಂಚಾಯತ ರಾಜ್ ಇಂಜನೀಯರಿಂಗ್ ಉಪವಿಭಾಗ ಬಸವನ ಬಾಗೇವಾಡಿ,2022-23 ನೇ ಸಾಲಿನ ವಿಶೇಷ ಅಭಿವೃದ್ಧಿ ಯೋಜನೆಯಡಿ ಕೂಡಗಿ ಕೆ ಪಿ ಎಸ್ ಶಾಲೆ ನಿರ್ಮಾಣ ಹಾಗೂ ರಿಪೇರಿ ಅಂದಾಜು ಮೊತ್ತ 174 ಲಕ್ಷ ಕಾಮಗಾರಿಗೆ ಜವಳಿ,ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಭೂಮಿ ಪೂಜೆ ನೇರವೇರಿಸಿದರು.

ಭೂಮಿ ಪೂಜೆ ನೇರವೇರಿಸಿ ಸಚಿವ ಶಿವಾನಂದ ಪಾಟೀಲ ಮಾತನಾಡಿ, ಈ ಕೆ ಪಿ ಎಸ್ ಶಾಲೆಯ ಶೀತಲಾವ್ಯಸ್ಥೆಯಲ್ಲಿರತಕ್ಕಂತಹ ಎಲ್ಲಾ ಕಟ್ಟಡಗಳನ್ನು ಬರುವ ದಿನಗಳಲ್ಲಿ ಸುಂದರವಾದ ಕಟ್ಟಡಗಳನ್ನಾಗಿ ಮಾಡಿಕೊಡಲಾಗುವುದು. ಜೊತೆಗೆ ಮೂಲಭೂತ ಸೌಲಭ್ಯಗಳನ್ನು ಇರುವ ಅನುದಾನವನ್ನು ಸದುಪಯೋಗ ಮಾಡಿಕೊಂಡು, ಕಡಿಮೆ ಬಿದ್ದರೆ ಅದನ್ನು ಬೇರೆ ಮೂಲಗಳಿಂದ ಒದಗಿಸಿಕೊಡಲಾಗುವುದು. ಈ ಹೊಸ ಕಟ್ಟಡವನ್ನು 9 ತಿಂಗಳನಲ್ಲಿ ಪೂರ್ಣಗೊಳಸಲಾಗುವುದು.



ಉದಯವಾಹಿನಿ ಚಿತ್ರ

**9 ತಿಂಗಳಿನಲ್ಲಿ ಪೂರ್ಣ**

ಮುಂದಿನ ಭಾಗ ಶಾಲಾ ಕಟ್ಟಡ ಮಾಡಿಕೊಂಡು , ಹಿಂದಿನ ಭಾಗವನ್ನು ಆಟದ ಮೈದಾನ ಮಾಡಿ ಒಂದು ಸುಸಜ್ಜಿತ ಕಟ್ಟಡ ಮಾಡಿಕೊಡುವ ಭರವಸೆ ನೀಡಿದರು.

ಈ ವೇಳೆ ಕಾರ್ಯಕ್ರಮದ ಸಾನಿಧ್ಯವನ್ನು ಮೈರಾಜಪೀರಾ ವಹಿಸಿದ್ದರು.ಅತಿಥಿಗಳಾಗಿ ಗ್ರಾ.ಪಂ ಅದ್ಯಕ್ಷ ಹುಸೇನಬಿ ಮಾಶ್ಯಾಳ, ಕ್ಷೇತ್ರ ಶಿಕ್ಷಣಾಧಿಕಾರಿ ವಸಂತ ರಾಠೋಡ, ಮಾಜಿ ತಾ.ಪಂ ಸದಸ್ಯ ಈಶ್ವರ ಜಾಧವ, ಚಂದ್ರಶೇಖರ ಜುಗುತಿ,ಸಂತೋಷ ಚನಗೊಂಡ,ಹನಮಂತ ಮಸೂತಿ,ಶಾಂತಪ್ಪ ತೊರವಿ ಇತರರು ಇದ್ದರು.

## ನರೇಗಾದಲ್ಲಿ ಹುಮನಾಬಾದ ತಾಲ್ಲೂಕು ಮಾದರಿ : ಸಿಇಓ ಬದೋಲೆ

• ಉದಯವಾಹಿನಿ ಹುಮನಾಬಾದ

ರಕ್ತದಾನದಿಂದ ರಕ್ತದೊತ್ತಡ, ಮಧುಮೇಹದಂತಹ ರೋಗಗಳು ನಿಯಂತ್ರಣಕ್ಕೆ ಬರುವುದರ ಜತೆಗೆ ಆತ್ಮತೃಪ್ತಿ ಸಿಗುತ್ತದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ದಿಲೀಪ್ ಬದೋಲೆ ತಿಳಿಸಿದರು.

ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ 2025ನೇ ನರೇಗಾ ಹಬ್ಬ ಹಾಗೂ ನರೇಗಾ ಮಹಿಳಾ ಕೂಲಿ ಕಾರ್ಮಿಕರಿಗಾಗಿ ಆಯೋಜನೆ ಮಾಡಿರುವ ಕ್ರೀಡಾಕೂಟದಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣೆ ಮತ್ತು ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಭಾಗಿಯಾಗಿ ಅವರು ಮಾತನಾಡಿದರು,

ಜಿಲ್ಲೆಯಲ್ಲಿ ಹುಮನಾಬಾದ ತಾಲ್ಲೂಕು ಮಾದರಿಯಾಗಿದೆ, ಏಕೆಂದರೆ ನರೇಗಾ ಯೋಜನೆ ಪರಿಣಾರಿಯಾಗಿ ಅನುಷ್ಠಾನ ಮಾಡುವುದರ ಜೊತೆಗೆ ಅದ್ದೂರಿಯಾಗಿ ನರೇಗಾ ಹಬ್ಬ ಆಚರಣೆ ಮಾಡಿ. ಮಹಿಳಾ ಕೂಲಿ ಕಾರ್ಮಿಕರಿಗೆ ಮತ್ತು ಮೇಟಿಗಳ ಕ್ರೀಡಾ ಕೂಟ ಸ್ಪರ್ಧೆ ಏರ್ಪಡಿಸಿ ಮತ್ತು ರಕ್ತದಾನ ಶಿಬಿರವನ್ನು ಅರ್ಥಪೂರ್ಣವಾಗಿ ಆಯೋಜನೆ ಮಾಡಲಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು. ರಕ್ತದಾನ ಮನುಷ್ಯನ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೆ ಸಕಾರಾತ್ಮಕ ಪರಿಣಾಮ ಬೀರುತ್ತದೆ.



ಉದಯವಾಹಿನಿ ಚಿತ್ರ

ಸಮಯಕ್ಕೆ ಸರಿಯಾಗಿ ರಕ್ತ ಸಿಗದೆ ವಿವಿಧ ಕಾಯಿಲೆಗಳಿಂದ ಬಳಲುತ್ತಿರುವ ರೋಗಿಗಳು, ಅಪಘಾತದ ಗಾಯಾಳುಗಳು ಮೃತಪಡುತ್ತಿದ್ದಾರೆ. ಅಮೂಲ್ಯವದ ಜೀವಗಳನ್ನು ಉಳಿಸಲು ರಕ್ತದಾನ ಮಾಡುವುದು ಅತಿ ಅಗತ್ಯವಾಗಿದ್ದು, ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಬೇಕು ಎಂದು ಕರೆ ನೀಡಿದರು.

ರಕ್ತದಾನ ಮಹಾದಾನ ಇದರಿಂದ ಒಂದು ಜೀವ ಉಳಿಯಲು ಸಾಧ್ಯ, ರಕ್ತದಾನದಿಂದ ಯಾವುದೇ ತೊಂದರೆ ಇಲ್ಲ, ಆರೋಗ್ಯ ಚೇತರಿಕೆಗೆ ಸಾಧ್ಯ. ಯುವ ಜನತೆ ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಲು ಮುಂದಾಗುವಂತೆ ಸೂಚಿಸಿದರು. ನರೇಗಾ ಯೋಜನೆಯಡಿ ಅತ್ಯುತ್ತ ಮವಾಗಿ ಕಾರ್ಯನಿರ್ವಹಿಸಿರುವಂತಹ ತಾಲ್ಲೂಕಿನ ಸಿಬ್ಬಂದಿಗಳಾದ. ತಾಲ್ಲೂಕು ಟಿ.ಎಮ್. ಐ.ಎಸ್, ತಾಂತ್ರಿಕ ಸಹಾಯಕರು, ಬಿ.ಎಫ್.ಟಿ ಮತ್ತು ಗ್ರಾಮ ಕಾಯಕ ಮಿತ್ರರನ್ನು ಮತ್ತು ಕ್ರೀಡಾಕೂಟದಲ್ಲಿ ಅತ್ಯುತ್ತಮವಾಗಿ ನಿರ್ಣಾಯಕರಾಗಿ ಕರ್ತವ್ಯ ನಿರ್ವಹಿಸಿದ್ದಕ್ಕಾಗಿ ವಿವಿಧ ಶಾಲೆಯ ಶಿಕ್ಷಕರನ್ನು ಸನ್ಮಾನಿಸಲಾಯಿತು.

> ಗ್ರಾಮ ಪಂಚಾಯಿತಿಯ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ಮತ್ತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮತ್ತು ನಮ್ಮ ಎಲ್ಲಾ ನರೇಗಾ ಸಿಬ್ಬಂದಿಯವರ ಸಹಕಾರದಿಂದ ನಾವು ತಾಲ್ಲೂಕಿನಲ್ಲಿ ನರೇಗಾ ಯೋಜನೆಯಲ್ಲಿ ವಿವಿಧ ಕಾಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಿ ಗ್ರಾಮಗಳನ್ನು ಅಭಿವೃದ್ಧಿ ಮಾಡಲು ಸಾಧ್ಯ -ದೀಪಿಕಾ ಬಿ ನಾಯ್ಕರ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ

## ಚಾಲಕನ ಆವಾಂತರ -ಬಸ್ ಬೈಕ್‌ಗೆ ಡಿಕ್ಕಿ ಹೊಡೆದು ಜೀಪ್ ಪಲ್ಟಿ

• ಉದಯವಾಹಿನಿ ಉಳ್ಳಾಲ

ಚಾಲಕನ ಧಾವಂತಕ್ಕೆ ಜೀಪೊಂದು ಕೇರಳ ಸಾರಿಗೆ ಬಸ್ಸಿನ ಹಿಂಬದಿಗೆ ಡಿಕ್ಕಿ ಹೊಡೆದು ಬಳಿಕ ಎಡ ಭಾಗದಿಂದ ಸಾಗುತ್ತಿದ್ದ ಬೈಕ್ ಸವಾರರಿಗೆ ಡಿಕ್ಕಿ ಹೊಡೆದ ಘಟನೆ ರಾಷ್ಟ್ರೀಯ ಹೆದ್ದಾರಿ 66 ರ ಆಡಂಕುದ್ರು ಎಂಬಲ್ಲಿ ಸಂಜೆ ವೇಳೆ ಸಂಭಾವಿಸಿದೆ.

ಬೈಕ್ ಸವಾರರಿ ಬ್ಬರೂ ಗಾಯಗೊಂಡಿದ್ದಾರೆ.ಮಂಗಳೂರು ಕಡೆಯಿಂದ ಕಾಸರಗೋಡು ಕಡೆಗೆ ಚಲಿಸುತ್ತಿದ್ದ ಕೇರಳ ಸಾರಿಗೆ ಬಸ್ಸಿನ ಹಿಂಬದಿಗೆ, ಅತಿ ವೇಗ ಹಾಗೂ ಅಜಾಗರೂಕತೆಯ ಚಾಲನೆ ನಡೆಸಿದ ಜೀಪ್ ಚಾಲಕ ನಿಯಂತ್ರಣ ತಪ್ಪಿ ಗುದ್ದಿದ್ದಾನೆ. ಅಲ್ಲಿಂದ ಮತ್ತೆ ಎಡ ಭಾಗಕ್ಕೆ ತಿರುಗಿಸಿದ ಪರಿಣಾಮ ಸವಾರರಿಬ್ಬರು ತೆರಳುತ್ತಿದ್ದ ಬೈಕಿಗೆ ಜೀಪ್ ಡಿಕ್ಕಿ ಹೊಡೆದು ಬಳಿಕ ಕಂದಕಕ್ಕೆ ಉರುಳಿದೆ.



ಉದಯವಾಹಿನಿ ಚಿತ್ರ

ಘಟನೆಯಿಂದ ರಾ. ಹೆಯಲ್ಲಿ ಕೆಲವು ಘಂಟೆಗಳ ಕಾಲ ರಸ್ತೆ ಸಂಚಾರದಲ್ಲಿ ವ್ಯತ್ಯಾಸ ಉಂಟಾಗಿದೆ. ಮಂಗಳೂರು ದಕ್ಷಿಣ ಸಂಚಾರಿ ಠಾಣಾ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಮಿನಿ ನ್ಯೂಸ್

### ಸಹಾಯವಾಣಿ ಸ್ಥಾಪನೆ

• ಉದಯವಾಹಿನಿ ಚಿತ್ರದುರ್ಗ

ಗ್ರಾಮ ಆಡಳಿತ ಅಧಿಕಾರಿಗಳ ಮುಷ್ಕರದಿಂದ ಜಾತಿ, ಆದಾಯ ಪ್ರಮಾಣ ಪತ್ರ ಪಡೆಯಲು ವಿಳಂಬವಾಗುತ್ತಿದ್ದು, ಸಾರ್ವಜನಿಕರ ಹಿತದೃಷ್ಟಿ ಕಾಪಾಡಲು ವಿದ್ಯಾರ್ಥಿಗಳು ಹಾಗೂ ಅಭ್ಯರ್ಥಿಗಳ ಅನುಕೂಲಕ್ಕಾಗಿ ಜಿಲ್ಲಾ ಮತ್ತು ತಾಲ್ಲೂಕು ಕಚೇರಿಯಲ್ಲಿ ಸಹಾಯವಾಣಿ ಸ್ಥಾಪಿಸಲಾಗಿದೆ.

ಪರೀಕ್ಷೆ ಹಾಗೂ ನೇಮಕಾತಿ ಉದ್ದೇಶಗಳಿಗಾಗಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಅವಶ್ಯಕತೆ ಇರುವ ವಿದ್ಯಾರ್ಥಿಗಳು, ಅಭ್ಯರ್ಥಿಗಳು ಜಿಲ್ಲಾ ಮತ್ತು ತಾಲ್ಲೂಕು ಕಚೇರಿಯಲ್ಲಿ ಸ್ಥಾಪನೆಗೊಂಡಿರುವ ಸಹಾಯವಾಣಿ ಮೂಲಕ ತಮ್ಮ ಸಮಸ್ಯೆಗಳನ್ನು ದಾಖಲಿಸಬಹುದಾಗಿದೆ.

ಜಾತಿ ಮತ್ತು ಆದಾಯ ಪ್ರಮಾಣ ಪತ್ರಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ಕಚೇರಿಯ ಸಹಾಯವಾಣಿ ಸಂಖ್ಯೆ 8277862928, ಚಿತ್ರದುರ್ಗ ತಾಲ್ಲೂಕು ಕಚೇರಿ 7353829559, ಚಳ್ಳಕೆರೆ ತಾಲ್ಲೂಕು ಕಚೇರಿ-9164064797, ಹಿರಿಯೂರು ತಾಲ್ಲೂಕು ಕಚೇರಿ-9449210282, ಹೊಸದುರ್ಗ ತಾಲ್ಲೂಕು ಕಚೇರಿ-9611460183, ಹೊಳಲ್ಕೆರೆ ತಾಲ್ಲೂಕು ಕಚೇರಿ-7019732031 ಹಾಗೂ ಮೊಳಕಾಲ್ಮುರು ತಾಲ್ಲೂಕು ಕಚೇರಿ-9448948032 ಗೆ ಕರೆ ಮಾಡಬಹುದು.

ಸ್ವೀಕೃತ ಕರೆಗಳಿಗೆ ಕೂಡಲೇ ಸ್ಪಂದಿಸಿ ಕ್ರಮವಹಿಸಲಾಗುವುದು. ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಡಿಡಿಯು ಸಿಬಿಎಸ್‌ಇ ಶಾಲೆಯಲ್ಲಿ ಪುಲ್ವಾಮಾ ದಾಳಿ ಯೋಧರಿಗೆ ಗೌರವ ನಮನ



ಉದಯವಾಹಿನಿ ಚಿತ್ರ

• ಉದಯವಾಹಿನಿ ವಡಗೇರಾ

ದೇಶ ರಕ್ಷಣೆಗಾಗಿ ಹಗಲಿರುಳು ಶ್ರಮಿಸುತ್ತಿರುವ ಯೋಧರನ್ನು ಪ್ರತಿಯೊಬ್ಬರು ಗೌರವಿಸಬೇಕು ಎಂದು ಪಟ್ಟಣದ ಡಿಡಿಯು ಸಿಬಿಎಸ್‌ಇ ಶಾಲೆಯ ಪ್ರಾಂಶುಪಾಲರಾದ ಸಜೀಶ್ ರಾಜ್ ಹೇಳಿದರು. ಪಟ್ಟಣದ ಡಿಡಿಯು ಶಿಕ್ಷಣ ಸಂಸ್ಥೆಯ ಸಿಬಿಎಸ್‌ಇ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಪುಲ್ವಾಮಾ ದಾಳಿಯಲ್ಲಿ ಹುತಾತ್ಮರಾದ ಯೋಧರಿಗೆ ಗೌರವಪೂರ್ಣ ಶ್ರದ್ಧಾಂಜಲಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಯೋಧರು ತಮ್ಮ ಪ್ರಾಣವನ್ನು ಲೆಕ್ಕಿಸದೆ ಗಡಿ ಕಾಯುವ ಕೆಲಸದಲ್ಲಿ ನಿರತರಾಗಿರುತ್ತಾರೆ ಅವರಿಂದಲೇ ನಾವೆಲ್ಲರೂ ಸುರಕ್ಷಿತವಾಗಿದ್ದೇವೆ ಪ್ರತಿಯೊಬ್ಬ ವಿದ್ಯಾರ್ಥಿಗಳು ದೇಶ ಅಭಿಮಾನ ಬೆಳೆಸಿಕೊಳ್ಳಬೇಕು ತಾವು ಕೂಡ ಯೋಧರಾಗುವ ಕನಸನ್ನು ಕಟ್ಟಿಕೊಂಡು ದೇಶ ಸೇವೆಯಲ್ಲಿ ತೊಡಗಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.ಎಸ್‌ಎಸ್ ಕ್ಲಬ್‌ನ ಮುಖ್ಯಸ್ಥೆ ರಿಸ್ವಾನ್ ಮತ್ತು ಕ್ಲಬ್‌ನ ವಿದ್ಯಾರ್ಥಿಗಳಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ಶಾಲೆಯ ಎಲ್ಲಾ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಸ್ಮರಣಾರ್ಥ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಮುಷ್ಕರಕ್ಕೆ ಬೆಂಬಲ

• ಉದಯವಾಹಿನಿ ನವಲಗುಂದ

ಪಟ್ಟಣದಲ್ಲಿರು ತಹಶೀಲ್ದಾರ ಕಚೇರಿ ಆವರಣದಲ್ಲಿ ತಾಲ್ಲೂಕಿನ ಗ್ರಾಮ ಆಡಳಿತ ಅಧಿಕಾರಿಗಳು ನಡೆಸುತ್ತಿರುವ ಅನಿರ್ಧಿಷ್ಟ ಮುಷ್ಕರಕ್ಕೆ ಕರ್ನಾಟಕ ರೈತ ಸೇನೆ ಹಾಗೂ ಮಹದಾಯಿ ಕಳಸಾ ಬಂಡೂರಿ ಒಕ್ಕೂಟದಿಂದ ಪ್ರತ್ಯೇಕವಾಗಿ ಬೆಂಬಲ ಸೂಚಿಸಿ ತಹಶೀಲ್ದಾರ ಸುಧೀರ ಸಾಹುಕಾರ ಮುಖಾಂತರ ಸಿಎಂ ಸಿದ್ದರಾಮಯ್ಯ ಹಾಗೂ ಕಂದಾಯ ಸಚಿವ ಕೃಷ್ಣಬೈರೇಗೌಡ ಅವರಿಗೆ ಮನವಿ ಸಲ್ಲಿಸಿದರು. ಈ ವೇಳೆ ರೈತ ಮುಖಂಡರಾದ ಲೋಕನಾಥ ಹೇಬಸೂರ, ಶಂಕರಪ್ಪ ಅಂಬಲಿ ಮಾತನಾಡಿ ಗ್ರಾಮ ಆಡಳಿತ ಅಧಿಕಾರಿಗಳ ಎಲ್ಲಾ ನ್ಯಾಯ ಸಮ್ಮತ ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ರಾಜ್ಯಾದ್ಯಂತ ಎಲ್ಲ ರೈತರು ಹಾಗೂ ರೈತ ಮುಖಂಡರು ಸೇರಿ ಉಗ್ರ ಹೋರಾಟ ಮಾಡಲಾಗುವುದು ಎಂದರು. ರೈತ ಮುಖಂಡರಾದ ರಘುನಾಥ ನಡುವಿನಮನಿ, ಡಿ ಎಸ್ ಗುಡಿಸಾಗರ, ಮಲ್ಲಪ್ಪ ಗಾನಗೇರ, ಉಮೇಶ ನವಲಗುಂದ, ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ಅಧ್ಯಕ್ಷ ರೇವಣಸಿದ್ಧ ಡೆಂಗಿ, ರಾಜು ನಾಯ್ಕ, ಮಹಾದೇವಿ ಬಿಜ್ಜರಗಿ, ಮುಷ್ಕರದಲ್ಲಿ ಪಾಲ್ಗೊಂಡಿದ್ದರು.

# ರಸ್ತೆ ಅಪಘಾತ ತಡೆಗೆ ಕಟ್ಟುನಿಟ್ಟಾಗಿ ರಸ್ತೆ ಸುರಕ್ಷತಾ ನಿಯಮ ಅನುಷ್ಠಾನಗೊಳಿಸಿ

## ಅಪಘಾತ ತಡೆಯುವ ಹಾಗೂ ಸುಗಮ ಸಂಚಾರ ವ್ಯವಸ್ಥೆಯನ್ನು ಕಾಪಾಡಿಕೊಳ್ಳುವಲ್ಲಿ ಜಾಗೃತಿ ಮೂಡಿಸಬೇಕು: ಜಿಲ್ಲಾಧಿಕಾರಿ ಟಿ.ಭೂಬಾಲನ್

• ಉದಯವಾಹಿನಿ ವಿಜಯಪುರ

ಅಪಘಾತಗಳನ್ನು ತಡೆಯುವ ನಿಟ್ಟಿನಲ್ಲಿ ಮುಂಜಾಗ್ರತ ಕ್ರಮವಾಗಿ ರಸ್ತೆ ಸುರಕ್ಷತಾ ನಿಯಮಗಳನ್ನು ವಿಧಾನಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಪಘಾತ ತಡೆಯುವ ಹಾಗೂ ಸುಗಮ ಸಂಚಾರ ವ್ಯವಸ್ಥೆಯನ್ನು ಕಾಪಾಡಿಕೊಳ್ಳುವಲ್ಲಿ ಜಾಗೃತಿ ಮೂಡಿಸಬೇಕು. ರಸ್ತೆ ಅಪಘಾತಗಳನ್ನು ತಡೆಯುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಗಳು ಕಡ್ಡಾಯವಾಗಿ ರಸ್ತೆ ನಿಯಮಗಳ ಪಾಲನೆ ಮಾಡುವಂತೆ ವಾಹನ ಸವಾರರು-ಸಾರ್ವಜನಿಕರಲ್ಲಿ ಸೂಕ್ತ ಅರಿವು ಮೂಡಿಸುವಂತೆ ಅವರು ಸೂಚನೆ ನೀಡಿದರು.

ವಿಜಯಪುರ ನಗರಕ್ಕೆ ಹೊಂದಿಕೊಂಡಿರುವ ರಾಷ್ಟ್ರೀಯ ಹೆದ್ದಾರಿ ಹಾಗೂ ರಾಜ್ಯ ಹೆದ್ದಾರಿಯ ಪ್ರಮುಖ ಸ್ಥಳಗಳಲ್ಲಿ ಕೈಕೊಳ್ಳಬೇಕಾದ ರಸ್ತೆ ಸುಧಾರಣೆ ಕ್ರಮಗಳ ಕುರಿತು ತಿಳಿಸಿದ ಅವರು, ಸೊಲ್ಲಾಪೂರ ಬೈಪಾಸ್ ಸರ್ಕಲ್‌ನಲ್ಲಿ ಅಂಗಡಿಕಾರರು ರಸ್ತೆ ಒತ್ತುವರಿ ಮಾಡಿಕೊಂಡಿದ್ದಲ್ಲದೇ, ರಸ್ತೆಯ ಮುಂಭಾಗ ಎಲ್ಲೆಂದರಲ್ಲಿ ವಾಹನಗಳ ಪಾರ್ಕಿಂಗ್ ಮಾಡುವುದರಿಂದ ವಾಹನ ಸವಾರರಿಗೆ ತೊಂದರೆಯಾಗುತ್ತಿದೆ. ಒತ್ತುವರಿಯಾದ ರಸ್ತೆಯನ್ನು ತೆರವುಗೊಳಿಸಲು ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು. ಸೂಕ್ತ ಪಾರ್ಕಿಂಗ್ ವ್ಯವಸ್ಥೆಗೆ ಕ್ರಮ ವಹಿಸಬೇಕು. ಸೊಲ್ಲಾಪೂರ ರಸ್ತೆಯ ಸರ್ವಿಸ್ ರಸ್ತೆಯಲ್ಲಿ ಒನ್‌ವೇ ಇದ್ದು, ಅರಕೇರಿ, ಉಮದಿ ರಸ್ತೆ ಕಡೆಯಿಂದ ಒನ್‌ವೇ ಉಲ್ಲಂಘಿಸಿ ಎದುರಿಗೆ ವಾಹನಗಳ ಸಂಚಾರದಿಂದ ಅಪಘಾತಗಳಾಗುವ ಸಂಭವದ ಹಿನ್ನಲೆಯಲ್ಲಿ ಈ ರಸ್ತೆಯ ಸಂಚಾರ ನಿರ್ಬಂಧ ಅವಶ್ಯವಾಗಿರುತ್ತದೆ.

ಸೊಲ್ಲಾಪೂರ ಕಡೆಗೆ ಹೋಗುವ ಪ್ರಯಾಣಿಕರ ಸಲುವಾಗಿ ರಸ್ತೆಯ ಎಡಬದಿಗೆ ಲಘು ಬಸ್‌ನಿಲ್ದಾಣ ನಿರ್ಮಾಣ ಮಾಡುವ ಅವಶ್ಯಕತೆ ಬಗ್ಗೆ ಪರಿಶೀಲನೆ ನಡೆಸಬೇಕು. ಸರ್ಕಲ್‌ದ ನಾಲ್ಕು ಕಡೆಗಳಲ್ಲಿ ಸಿಸಿಟಿವಿ ಅಳವಡಿಸುವ ಕುರಿತು ಪರಿಶೀಲನೆ ನಡೆಸಿ ವರದಿ ಸಲ್ಲಿಸುವಂತೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ವಿಜಯಪುರ ಸೊಲ್ಲಾಪೂರ ರಸ್ತೆ ಐಓಸಿ ಹತ್ತಿರ ಸೊಲ್ಲಾಪೂರ ಕಡೆಯಿಂದ ಆಗಮಿಸುವ ವಾಹನಗಳು ಇಂಡಸ್ಟ್ರೀಯಲ್ ಏರಿಯಾ ಕಡೆಗೆ ಹೋಗುವ ಸಂದರ್ಭದಲ್ಲಿ ಸರ್ವಿಸ್ ರಸ್ತೆ ಕೂಡಿ ಹೋಗಬೇಕಾಗಿದ್ದು, ಆ ಸಂದರ್ಭದಲ್ಲಿ ಎದುರಿಗೆ ಏಕಮುಖವಾಗಿ ವಾಹನಗಳು ಬರುತ್ತಿದ್ದು, ಇದು ಜನದಟ್ಟಣೆ ಹಾಗೂ ಅಪಘಾತಕ್ಕೆ ಕಾರಣವಾಗುವ ಸಂಭವವಿರುವುದರಿಂದ ಸೂಕ್ತ ಸುಗಮ ವಾಹನ ಸಂಚಾರಕ್ಕೆ ಅಗತ್ಯ ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ವಾಹನಗಳ ಸುಗಮ ಸಂಚಾರಕ್ಕಾಗಿ ಅನಗತ್ಯವಾದ ರೋಡ್ ಬ್ರೆಕ್‌ಗಳನ್ನು ತೆರವುಗೊಳಿಸಬೇಕು. ರಸ್ತೆ ತಿರುವುಗಳಲ್ಲಿ ಅಗತ್ಯ ಮಾಹಿತಿ ಹಾಗೂ ಸೂಚನಾ ಫಲಕ ಅಳವಡಿಸಬೇಕು. ಪದೇ-ಪದೇ ಅಪಘಾತಗಳು ಸಂಭವಿಸುವ ಪ್ರದೇಶ-ಸ್ಥಳಗಳಲ್ಲಿ ಎಚ್ಚರಿಕೆ ಮಾಹಿತಿ ವಿವರದ ಫಲಕ ಹಾಕಬೇಕು. ಮತ್ತು ಅಲ್ಲಿ ಅಪಘಾತಗಳು ಸಂಭವಿಸದಂತೆ ಪರಿಹಾರೋಪಾಯ ಕ್ರಮಗಳನ್ನು ಕೈಗೊಳ್ಳಬೇಕು. ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿಕೊಂಡು ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಸ್ಥಳ ತನಿಖೆ ಕೈಗೊಂಡು ಪ್ರಸ್ತಾವನೆ ಸಹಿತ ವರದಿಯನ್ನು ಒಂದು ತಿಂಗಳೊಳಗೆ ಸಲ್ಲಿಸುವಂತೆ ಅವರು ಸೂಚನೆ ನೀಡಿದರು.ಸಭೆಯಲ್ಲಿ ವಿಜಯಪುರ ಉಪವಿಭಾಗಾಧಿಕಾರಿ ಗುರುನಾಥ ದಡ್ಡಿ, ಇಂಡಿ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ, ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ಜಿಲ್ಲಾ ಶಸ್ತ್ರಚಿಕಿತ್ಸಕ ಶಿವಾನಂದ ಮಾಸ್ತಿಹೊಳಿ, ಪೀಟರ್ ಅಲೆಕ್ಸಾಂಡರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಕ್ರಮ ವಹಿಸುವಂತೆ ಸೂಚನೆ

ಇಂಡಿ ಅಂಡರ್ ಬೈಪಾಸ್ ಸ್ಥಳದಲ್ಲಿ ಇಂಡಿ ಕಡೆಯಿಂದ ಮುಖ ರಸ್ತೆಗೆ ವಿರುದ್ದವಾಗಿ ವಾಹನಗಳು ಬಂದು ಪ್ರಮುಖ ರಸ್ತೆಗೆ ಹಾಗೂ ಸೊಲ್ಲಾಪೂರ ಕಡೆಯಿಂದ ಇಂಡಿ ಕಡೆಗೆ ಹೋಗುವ ವಾಹನಗಳು ಸರ್ವೀಸ್ ರೋಡ ಕೂಡುವ ಸ್ಥಳದಲ್ಲಿ ಡಿವೈಡರ್ ಅಂತರ ಕಡಿಮೆ ಮಾಡಬೇಕು. ಇಂಡಿ ಅಂಡರ್‌ಪಾಸ್‌ನಲ್ಲಿ ಅಂಗಡಿಕಾರರು ರಸ್ತೆಯನ್ನು ಒತ್ತುವರಿ ಮಾಡಿದ್ದು, ಅದನ್ನು ತೆರವುಗೊಳಿಸಲು ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

**ರಸ್ತೆ ಸುಧಾರಣೆಗೆ ಕ್ರಮ**



ಉದಯವಾಹಿನಿ ಚಿತ್ರ

### ಸೂಚನಾ ಫಲಕ ಹಾಗೂ ಮಾರ್ಗಸೂಚಿಗಳನ್ನು ಅಳವಡಿಸಬೇಕು

ಅಂಡರ್ಪಾಸ್ ಕೆಳಗಡೆ ಬೃಹತ್ ವಾಹನಗಳನ್ನು ಕಾರ್, ಬೈಕ್‌ಗಳನ್ನು ನಿಲ್ಲಿಸುತ್ತಿದ್ದು, ಈ ಬಗ್ಗೆ ಅಂಡರ್‌ಪಾಸ್‌ಕೆಳಗೆ ಇರುವ ಖಾಲಿ ಜಾಗವನ್ನು ಇಳಿಜಾರು ಜಾಗವನ್ನಾಗಿ ಮಾಡಿ ಖಾಲಿ ಇರುವ ಸ್ಥಳದಲ್ಲಿ ಪಾರ್ಕಿಂಗ್ ನಿರ್ಮಾಣಕ್ಕೆ ಕ್ರಮ ವಹಿಸಬೇಕು. ವಿವಿಧೆಡೆ ಇರುವ ವೃತ್ತಗಳಲ್ಲಿ ಸೂಚನಾ ಫಲಕ ಹಾಗೂ ಮಾರ್ಗಸೂಚಿಗಳನ್ನು ಅಳವಡಿಸಬೇಕು. ಸೊಲ್ಲಾಪೂರ ವಿಜಯಪುರ ರಾಷ್ಟ್ರೀಯ ಹೆದ್ದಾರಿ ರಸ್ತೆ ರೂಪಾದೇವಿ ಸ್ಕೂಲ್ ಹತ್ತಿರದಲ್ಲಿ ಹಂಚಿನಾಳ ಗ್ರಾಮದಿಂದ ಪ್ರಮುಖ ರಸ್ತೆಗೆ ಸಂಪರ್ಕಿಸುತ್ತಿದ್ದು, ಏಕಮುಖ ರಸ್ತೆಗೆ ವಿರುದ್ದ ದಿಕ್ಕಿನಲ್ಲಿ ಸಂಚಾರ ಮಾಡುತ್ತಿದ್ದು, ಇದು ಅಪಘಾತ ಸಂಭವಿಸುವ ಸ್ಥಳವಾಗಿರುತ್ತದೆ. ಈ ಸ್ಥಳದಲ್ಲಿ ರೋಡ ಡಿವೈಡರ್ ಹೆಚ್ಚಿಗಿದ್ದು, ವಾಹನ ಸವಾರರು ತಮ್ಮ ವೇಗವನ್ನು ನಿಯಂತ್ರಿಸದೇ ಇರುವುದರಿಂದ ಅಪಘಾತಗಳಾಗುವುದರಿಂದ ಈ ರಸ್ತೆಯಲ್ಲಿ ಡಿವೈಡ್‌ರ್‌ನ ಅಂತರವನ್ನು ಕಡಿಮೆ ಮಾಡುವಂತೆ ಅವರು ಸೂಚನೆ ನೀಡಿದರು.

> ಕೊಲ್ಹಾರ ಸೇತುವೆ ಮೇಲೆ ಬೀದಿ ದೀಪಗಳನ್ನು ಹಾಗೂ ಸುಮಾರು ಹತ್ತು ಸಿಸಿಟಿವಿ ಅಳವಡಿಸಬೇಕು. ನಗರದಲ್ಲಿ ವಾಹನ ದಟ್ಟಣೆ ತಡೆ, ಅವಶ್ಯಕತೆ ಇರುವಲ್ಲಿ ಸೂಚನಾ ಫಲಕ ಹಾಗೂ ಮಾಹಿತಿ ಫಲಕ ಅಳವಡಿಸುವುದು. ಸಿಂದಗಿ ಅಂಡರ್‌ಪಾಸ್ ಸರ್ಕಲ್‌ದಲ್ಲಿ ಸಿಂದಗಿ ಕಡೆಯಿಂದ ಎನ್‌ಎಚ್ ರಸ್ತೆ ಕೂಡವ ಕಡೆ ಹೋಗುವ ಸ್ಥಳದಲ್ಲಿ ಟೈರ್ ಅಂಗಡಿಯವರು ರಸ್ತೆಯನ್ನು ಒತ್ತುವರಿ ಮಾಡಿದ್ದು ಅದನ್ನು ತೆರವುಗೊಳಿಸುವ ಅವಶ್ಯಕತೆ ಇರುತ್ತದೆ. ನಗರದ ಕೆಲವು ರಸ್ತೆಯ ಸುಧಾರಣೆ ಮಾಡುವುದರ ಜೊತೆಗೆ ರಸ್ತೆಯ ತಳಮಟ್ಟವನ್ನು ಹೆಚ್ಚಿಸಿ ಸುಧಾರಣೆ ಕೈಕೊಳ್ಳುವದು ಅವಶ್ಯವಾಗಿರುತ್ತದೆ -ಲಕ್ಷ್ಮಣ ನಿಂಬರಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

# ಅತ್ತ ಅಮೆರಿಕದಲ್ಲಿ ಮೋದಿ

## ಇತ್ತ ಅಕ್ರಮ ವಲಸಿಗರ ಹೊತ್ತ 2ನೇ ವಿಮಾನ ಆಗಮನ ಸಾಧ್ಯತೆ





**ಹೊಸದಿಲ್ಲಿ:** ಭಾರತವೂ ಸೇರಿದಂತೆ ವಿವಿಧ ದೇಶಗಳ ಅಕ್ರಮ ವಲಸಿಗರನ್ನು ಅಮೆರಿಕ ಗಡೀಪಾರು ಮಾಡುತ್ತಿದೆ. ಈಗಾಗಲೇ 104 ಭಾರತೀಯರನ್ನು ಗಡೀಪಾರು ಮಾಡಿರುವ ಅಮೆರಿಕ ಎರಡನೇ ಹಂತದಲ್ಲಿ ಮತ್ತಷ್ಟು ಭಾರತೀಯರನ್ನು ಗಡೀಪಾರು ಮಾಡುತ್ತಿದ್ದು, 2ನೇ ವಿಮಾನವು ಫೆಬ್ರವರಿ 15ರಂದು ಪಂಜಾಬ್‌ನ ಅಮೃತಸರಕ್ಕೆ ಬಂದಿಳಿಯಲಿದೆ ಎಂದು ಮೂಲಗಳು ಹೇಳಿವೆ.

ಅಮೆರಿಕದ ಸೇನಾ ವಿಮಾನದ ಮೂಲಕ ಅಕ್ರಮ ಭಾರತೀಯ ವಲಸಿಗರನ್ನು ಗಡೀಪಾರು ಮಾಡಿದ ಸಂದರ್ಭದಲ್ಲಿ ಅವರನ್ನು ಅಮಾನವೀಯವಾಗಿ ನಡೆಸಿಕೊಂಡಿರುವ ವಿಚಾರವನ್ನು ಪ್ರಧಾನಿ ಮೋದಿ ಅವರು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜತೆ ಪ್ರಸ್ತಾಪಿಸುತ್ತಾರೆ ಎಂಬ ವರದಿಗಳ ಮಧ್ಯೆ 2ನೇ ಹಂತದ ಗಡೀಪಾರಿಗೆ ಚಾಲನೆ ದೊರೆತಿದೆ ಎನ್ನಲಾಗಿದೆ.

ಇದರ ಮಧ್ಯೆ, ಅಕ್ರಮ ವಲಸಿರನ್ನು ಹೊತ್ತು ಅಮೆರಿಕದ ಸೇನಾ ವಿಮಾನವನ್ನು ಅಮೃತ ಸರದಲ್ಲಿಯೇ ಏಕೆ ಲ್ಯಾಂಡಿಂಗ್ ಮಾಡಿಸಲು ಅವಕಾಶ ನೀಡಲಾಗುತ್ತಿದೆ, ಪಂಜಾಬ್‌ನ ವರ್ಚಸ್ಸಿಗೆ ಧಕ್ಕೆ ತರಲು ಪ್ರಯತ್ನಿಸಲಾಗುತ್ತಿದೆಯೇ, ಗುಜರಾತ್ ಅಥವಾ ಹರಿಯಾಣದ ಏರ್‌ಪೋರ್ಟ್‌ಗಳಲ್ಲಿ ಲ್ಯಾಂಡಿಂಗ್‌ಗೆ ಏಕೆ ಅವಕಾಶ ನೀಡುತ್ತಿಲ್ಲ ಎಂದು ಪಂಜಾಬ್ ಹಣಕಾಸು ಸಚಿವ ಹರ್ಪಾಲ್ ಚೀಮಾ ಪ್ರಶ್ನಿಸಿದ್ದಾರೆ.

- ಭಾರತ ಸೇರಿದಂತೆ ವಿವಿಧ ದೇಶಗಳ ಅಕ್ರಮ ವಲಸಿಗರನ್ನು ಗಡೀಪಾರು ಮಾಡುತ್ತಿದೆ ಅಮೆರಿಕ
- ಈಗಾಗಲೇ 104 ಭಾರತೀಯರನ್ನು ಗಡೀಪಾರು ಮಾಡಿದೆ ಅಮೆರಿಕ
- 487 ಅಕ್ರಮ ಭಾರತೀಯ ವಲಸಿಗರನ್ನು ಇನ್ನೂ ಗಡೀಪಾರು ಮಾಡುತ್ತಿರುವುದಾಗಿ ಮಾಹಿತಿ
- ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಮಾಹಿತಿ



''ಸದ್ಯ 487 ಅಕ್ರಮ ಭಾರತೀಯ ವಲಸಿಗರನ್ನು ಗಡೀಪಾರು ಮಾಡುತ್ತಿರುವ ಕುರಿತು ಅಮೆರಿಕ ನಮ್ಮ ಜತೆ ಮಾಹಿತಿ ಹಂಚಿಕೊಂಡಿದೆ,'' ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಹೇಳಿದ್ದಾರೆ. ಅಲ್ಲದೇ ವಲಸಿಗರನ್ನು ಅಮಾನವೀಯವಾಗಿ ನಡೆಸಿಕೊಳ್ಳದಂತೆ ಅಮೆರಿಕ ಸರಕಾರಕ್ಕೆ ಸೂಚಿಸಿದ್ದೇವೆ ಎಂದಿದ್ದಾರೆ.

### ಭಾರತದಲ್ಲಿ ಟೆಸ್ಲಾ ಸ್ಥಾಪನೆ ಕುರಿತು ಮೋದಿ ಚರ್ಚೆ

ಅಮೆರಿಕ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ಗುರುವಾರ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭೇಟಿಗೂ (ನಸುಕಿನ 2.30) ಮುನ್ನ ನೂತನ ಸರಕಾರದಲ್ಲಿ ಹೊಣೆ ಹೊತ್ತಿರುವ ನಾಯಕರೊಂದಿಗೆ ಸಮಾಲೋಚನೆ ನಡೆಸಿದರು. ಮೊದಲಿಗೆ ಅಮೆರಿಕದ ರಾಷ್ಟ್ರೀಯ ಗುಪ್ತಚರ ಇಲಾಖೆ ನಿರ್ದೇಶಕಿಯಾಗಿ ನೇಮಕಗೊಂಡಿರುವ ಭಾರತೀಯ ಮೂಲದ ತುಳಸಿ ಗಬ್ಬಾರ್ಡ್ ಅವರೊಂದಿಗೆ ಮಾತುಕತೆ ನಡೆಸಿದರು. ಉಭಯ ದೇಶಗಳ ನಡುವೆ ಗುಪ್ತಚರ ಸಂಸ್ಥೆಗಳ ನಡುವೆ ಸಹಕಾರ ಮನೋಭಾವ ವೃದ್ಧಿಸುವ ಕುರಿತು ಚರ್ಚೆ ನಡೆಯಿತು.

ಬಳಿಕ ಅಮೆರಿಕ ರಾಷ್ಟ್ರೀಯ ಭದ್ರತೆ ಸಲಹೆಗಾರ ಮೈಕೆಲ್ ವಾಲ್ಟ್ಜ ಅವರೊಂದಿಗೆ ಮಾತುಕತೆ ನಡೆಸಿದ ಮೋದಿ, ರಕ್ಷಣೆ, ಭಯೋತ್ಪಾದನೆ ನಿಗ್ರಹ, ಸೈಬರ್ ಅಪರಾಧ ನಿಯಂತ್ರಣ, ಭಾರತ-ಅಮೆರಿಕ ನಡುವೆ ರಕ್ಷಣಾ ಬಾಂಧವ್ಯ ಕುರಿತು ಚರ್ಚೆ ನಡೆಸಿದರು.

ರಾತ್ರಿ 10 ಗಂಟೆಗೆ ಸರಕಾರಿ ಕಾರ್ಯದಕ್ಷತೆ ಇಲಾಖೆ ಮುಖ್ಯಸ್ಥ ಎಲಾನ್ ಮಸ್ಕ್‌ರನ್ನು ಭೇಟಿಯಾದ ಮೋದಿ ಅವರು ಹಲವು ಮಹತ್ವದ ವಿಚಾರಗಳ ಕುರಿತು ಚರ್ಚಿಸಿದರು.

ಭಾರತದಲ್ಲಿ ಟೆಸ್ಲಾ ಕಾರು ಉತ್ಪಾದನಾ ಘಟಕ ಸ್ಥಾಪನೆ, ಭಾರತ ಸೇರಿದಂತೆ ದಕ್ಷಿಣ ಏಷ್ಯಾದಲ್ಲಿ ಸ್ಯಾಟಲೈಟ್ ಬ್ರಾಡ್ ಬ್ಯಾಂಡ್ ಸೇವೆ ಆರಂಭಿಸುವ ಸ್ಟಾರ್‌ಲಿಂಕ್ ಯೋಜನೆ ಬಗ್ಗೆ ಸಮಾಲೋಚಿಸಿದರು.

## ಗಂಡ ಸಾಲ ಮಾಡಿದ್ದ ಲೋನ್ ಏಜೆಂಟ್ ಜೊತೆ ಓಡಿಹೋಗಿ ವಿವಾಹವಾದ ಪತ್ನಿ



**ಪಾಟ್ನಾ:** ಗಂಡ ಮಾಡಿದ್ದ ಸಾಲದ ವಸೂಲಿಗೆ ಬರುತ್ತಿದ್ದ ಲೋನ್ ಏಜೆಂಟ್ನೊಂದಿಗೆ ಪ್ರೀತಿ ಅಂಕುರವಾಗಿ ಪತ್ನಿ ಗಂಡ ಬಿಟ್ಟು ಓಡಿ ಹೋಗಿರುವ ಆತನೊಂದಿಗೆ ವಿವಾಹವಾಗಿರುವ ಘಟನೆ ಬಿಹಾರದಲ್ಲಿ ನಡೆದಿದೆ. ವಿಶೇಷವೆಂದರೆ ಲೋನ್ ಏಜೆಂಟ್‌ನ ಕುಟುಂಬ ಈ ಮದುವೆಗೆ ಸಮ್ಮತಿ ಸೂಚಿಸಿದೆ. ಮಹಿಳೆಯ ಕುಟುಂಬ ಇದನ್ನು ವಿರೋಧಿಸಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದೆ.

**ಏನಿದು ಪ್ರಕರಣ..?:** ಬಿಹಾರದ ಜಮುಯಿ ಜಿಲ್ಲೆಯ ನಿವಾಸಿ ನಕುಲ್ ಶರ್ಮಾ ಎಂಬಾತ ಇಂದಿರಾ ಕುಮಾರಿಯನ್ನು 2022ರಲ್ಲಿ ಮದುವೆಯಾಗಿದ್ದು, ಮದುವೆ ಆರಂಭದಲ್ಲಿ ಚೆನ್ನಾಗಿದ್ದ ನಕುಲ್, ನಂತರದ ದಿನಗಳಲ್ಲಿ ಕುಡಿದು ಬಂದು ಗಲಾಟೆ ಮಾಡಲು ಶುರು ಮಾಡಿದ್ದ. ಕುಡಿತದ ದಾಸನಾಗಿದ್ದ ನಕುಲ್ ಒಂದಷ್ಟು ಸಾಲ ಮಾಡಿ, ಹೆಂಡತಿಗೆ ಚಿತ್ರ ಹಿಂಸೆ ನೀಡುತ್ತಿದ್ದ.

ಇತ್ತ ಹಣಕಾಸು ಸಂಸ್ಥೆಯ ಲೋನ್ ಏಜೆಂಟರ್‌ಗಳು ಸಾಲ ವಸೂಲಿಗಾಗಿ ಮನೆಗೆ ಬರಲು ಆರಂಭಿಸಿದ್ದರು. ಹೀಗೆ ಹಣ ವಸೂಲಿಗೆ ಬರುತ್ತಿದ್ದ ಪವನ್ ಕುಮಾರ್ ಎಂಬಾತನೊಂದಿಗೆ ಸಲುಹೆ ಬೆಳೆದು ಪ್ರೇಮಾಂಕುರವಾಗಿದೆ. ಕೊನೆಗೆ ಇಂದಿರಾ ಪತಿಯನ್ನು ಬಿಟ್ಟು ಲೋನ್ ಏಜೆಂಟ್ ನನ್ನು ಮದುವೆಯಾಗಲು ನಿರ್ಧರಿಸಿ ಮನೆ ಬಿಟ್ಟು ಓಡಿ ಹೋಗಿದ್ದಳು.

ವಿಮಾನದ ಮೂಲಕ ಪಶ್ಚಿಮ ಬಂಗಾಳದ ಆಸಾನ್ಸೆಲ್‌ಗೆ ಪರಾರಿಯಾಗಿದ್ದ ಈಕೆ ಫೆಬ್ರವರಿ 11 ರಂದು ಹಿಂದೂ ಸಂಪ್ರದಾಯದಂತೆ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದಾಳೆ. ಮದುವೆ ನಂತರ ಇಬ್ಬರು ಜಮುಯಿಗೆ ಮರಳಿದ್ದಾರೆ.

## ಗೂಗಲ್ ಆ್ಯಪ್ ಸ್ಟೋರ್‌ನಲ್ಲಿ ಟಿಕ್‌ಟಾಕ್ ಲಭ್ಯ

**ವಾಷಿಂಗ್ಟನ್:** ಅಮೇರಿಕಾದಲ್ಲಿ ನಿಷೇಧಕ್ಕೆ ಒಳಗಾಗಿರುವ ಟಿಕ್‌ಟಾಕ್ ಆಪ್, ಹಲವು ತಿಂಗಳ ಬಳಿಕ ಆಪಲ್ ಮತ್ತು ಗೂಗಲ್ ಆಪ್ ಸ್ಟೋರ್‌ಗಳಲ್ಲಿ ಲಭ್ಯವಾಗಿದೆ. ಚೀನಾದ ಒಡೆತನದ ಸಾಮಾಜಿಕ ಮಾಧ್ಯಮ ವೇದಿಕೆಯ ಮೇಲಿನ ನಿಷೇಧ ಜಾರಿಗೊಳಿಸುವಿಕೆಯನ್ನು ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಏಪ್ರಿಲ್ 5 ರವರೆಗೆ ಮುಂದೂಡಿದ ನಂತರ, ಟಿಕ್‌ಟಾಕ್ ಮತ್ತೆ ಆಪಲ್ ಮತ್ತು ಗೂಗಲ್‌ನ ಯುಎಸ್ ಆಪ್ ಸ್ಟೋರ್‌ಗಳಲ್ಲಿ ಲಭ್ಯವಿದೆ.

170 ಮಿಲಿಯನ್‌ಗಿಂತಲೂ ಹೆಚ್ಚು ಅಮೇರಿಕನ್ ಬಳಕೆದಾರರು ಬಳಸುತ್ತಿರುವ ಜನಪ್ರಿಯ ಅಪ್ಲಿಕೇಶನ್, ಕಳೆದ ತಿಂಗಳು ನಿಷೇಧದ ಗಡುವು ಸಮೀಪಿಸುತ್ತಿದ್ದಂತೆ ಅಮೇರಿಕಾದಲ್ಲಿ ಆಪ್ ಬಗ್ಗೆ ಅನುಮಾನ ವ್ಯಕ್ತವಾಗಿತ್ತು. ಅಧ್ಯಕ್ಷರಾಗಿ ಅಧಿಕಾರ ಸ್ವೀಕಾರ ಮಾಡುತ್ತಿದ್ದಂತೆ 90 ದಿನಗಳ ಗುಡುವು ನೀಡಿದ್ದರು. 90 ದಿನಗಳ ಒಳಗೆ ಟಿಕ್ ಟಾಕ್ ಸಂಸ್ಥೆಯನ್ನು ಅಮೇರಿಕಾಕ್ಕೆ ಮಾರಾಟವಾಗದಿದ್ದರೆ ಅಪ್ಲಿಕೇಶನ್ ಅನ್ನು ನಿಷೇಧಿಸುವ ಕಾನೂನನ್ನು ಅನುಸರಿಸಲು 75 ದಿನಗಳ ವಿಸ್ತರಣೆ ನೀಡುವ ಕಾರ್ಯನಿರ್ವಾಹಕ ಆದೇಶಕ್ಕೆ ಸಹಿ ಹಾಕಿದ್ದರು. ಈ ಹಿನ್ನೆಲೆಯಲ್ಲಿ ಆಪಲ್ ಮತ್ತು ಗೂಗಲ್ ಸ್ಟೋರ್ನಲ್ಲಿ ಟಿಕ್ ಟಾಕ್ ಲಭ್ಯವಿದೆ. ಟಿಕ್‌ಟಾಕ್ ಅಪ್ಲಿಕೇಶನ್ ಆಪಲ್ ಮತ್ತು ಗೂಗಲ್ ಸ್ಟೋರ್ಗಳಿಗೆ ಮರಳಿದೆ. ಆಪಲ್ ಮತ್ತು ಗೂಗಲ್ ಡೌನ್‌ಲೋಡ್‌ಗಳನ್ನು ಅನುಮತಿಸಲು ಹೊಣೆಗಾರರಾಗಿರುವುದಿಲ್ಲ ಮತ್ತು ನಿಷೇಧವನ್ನು ಇನ್ನೂ ಜಾರಿಗೊಳಿಸಲಾಗುವುದಿಲ್ಲ ಎಂದು ಡೊನಾಲ್ಡ್ ಟ್ರಂಪ್ ಆಡಳಿತ ಭರವಸೆ ಪಡೆದ ನಂತರ ಅದರ ಲಭ್ಯತೆ ಪುನರಾರಂಭಿಸುವ ನಿರ್ಧಾರ ಬಂದಿದೆ. ಸೆನೆಟ್‌ನಲ್ಲಿ ಉಭಯಪಕ್ಷೀಯ ಮತದೊಂದಿಗೆ ಅಂಗೀಕರಿಸಲ್ಪಟ್ಟ ನಿಷೇಧವನ್ನು ಮಾಜಿ ಅಧ್ಯಕ್ಷ ಜೋ ಬಿಡನ್ ಕಾನೂನಾಗಿ ಸಹಿ ಹಾಕಿದರು.




ಸಂಪೂರ್ಣ ನಿಷೇಧ ತಪ್ಪಿಸಲು ಟಿಕ್‌ಟಾಕ್‌ನ ಚೀನಾದ ಮಾಲೀಕ ಬೈಟ್‌ಡ್ಯಾನ್ಸ್‌ಗೆ ವೇದಿಕೆಯ ಅಮೇರಿಕಾ ಆವೃತ್ತಿಯನ್ನು ತಟಸ್ಥ ಪಕ್ಷಕ್ಕೆ ಮಾರಾಟ ಮಾಡುವಂತೆ ಅದು ಆದೇಶಿಸಿದೆ. ಬೈಡೆನ್ ಆಡಳಿತ ಟಿಕ್ ಟಾಕ್ ಅನ್ನು ಚೀನಾ ಬೇಹುಗಾರಿಕೆ ಮತ್ತು ರಾಜಕೀಯ ಕುಶಲತೆಗೆ ಸಾಧನವಾಗಿ ಬಳಸಬಹುದು ಎಂದು ವಾದಿಸಿತ್ತು.

ಈ ಕಾರಣಕ್ಕಾಗಿಯೇ ಅಮೇರಿಕಾದಲ್ಲಿ ನಿಷೇಧ ಮಾಡಲಾಗಿತ್ತು. ಚೀನಾ ಮತ್ತು ಟಿಕ್‌ಟಾಕ್ ಪದೇ ಪದೇ ಆ ಆರೋಪಗಳನ್ನು ನಿರಾಕರಿಸಿವೆ. ಚೀನಾ ಈ ಹಿಂದೆ ಟಿಕ್‌ಟಾಕ್‌ನ ಅಮೆರಿಕಾ ಕಾರ್ಯಾಚರಣೆಗಳ ಮಾರಾಟಕ್ಕೆ ಬಂದ ಕರೆಗಳನ್ನು ತಿರಸ್ಕರಿಸಿದೆ.

## ಡಿಜಿಟಲ್ ಬಂಧನ: 1 ಕೋಟಿ 10 ಲಕ್ಷ ರೂ. ವಂಚನೆ

**ನೋಯ್ಡಾ:** ಉತ್ತರ ಪ್ರದೇಶದ ನೋಯ್ಡಾದಲ್ಲಿ ಸೈಬರ್ ಅಪರಾಧಿಗಳು ಐದು ದಿನಗಳ ಕಾಲ ಡಿಜಿಟಲ್ ಬಂಧನ ಮಾಡುವ ಮೂಲಕ ಒಂದು ಕುಟುಂಬಕ್ಕೆ 1 ಕೋಟಿ 10 ಲಕ್ಷ ರೂ. ವಂಚನೆ ಮಾಡಿದ್ದಾರೆ. ಈ ಘಟನೆ ಸೆಕ್ಟರ್ -19 ರಲ್ಲಿ ವಾಸಿಸುವ ಚಂದ್ರಭನ್ ಪಲಿವಾಲ್ ಅವರೊಂದಿಗೆ ನಡೆದಿದೆ, ಅವರು ಈ ವಿಷಯದ ಬಗ್ಗೆ ಪೊಲೀಸರಿಗೆ ದೂರು ನೀಡಿದ್ದಾರೆ.

ಪೊಲೀಸರ ಪ್ರಕಾರ, ಫೆ. 1 ರಂದು ಮಧ್ಯಾಹ್ನ 2:40 ರ ಸುಮಾರಿಗೆ, ಪಾಲಿವಾಲ್ ಅವರ ಮೊಬೈಲ್‌ಗೆ ಅಪರಿಚಿತ ಸಂಖ್ಯೆಯಿಂದ ಕರೆ ಬಂದಿದೆ. ಕರೆ ಮಾಡಿದವರು ಅವರ ಸಿಮ್ ಕಾರ್ಡ್ ನಿರ್ಬಂಧಿಸಲಾಗುವುದು ಎಂದು ತಿಳಿಸಿ, ನಂತರ ಭಾರತೀಯ ದೂರಸಂಪರ್ಕ ನಿಯಂತ್ರಣ ಪ್ರಾಧಿಕಾರವನ್ನು ಸಂಪರ್ಕಿಸಲು ಹೇಳಿದ್ದಾರೆ. ನಂತರ, ಪಾಲಿವಾಲ್ ವಿರುದ್ಧ ಮುಂಬೈನ ಸೈಬರ್ ಕ್ರೈಮ್ ಬ್ರಾಂಚ್ ಪ್ರಕರಣ ದಾಖಲಾಗಿದೆ ಎಂದು ತಿಳಿಸಲಾಗಿದೆ. ಮತ್ತು ಸ್ವಲ್ಪ ಸಮಯದ ನಂತರ ಮತ್ತೊಬ್ಬ ವ್ಯಕ್ತಿ ಭಾರತೀಯ ಪೊಲೀಸ್ ಸೇವೆ (ಐಪಿಎಸ್) ಅಧಿಕಾರಿ ಎಂದು ಹೇಳಿಕೊಂಡು ಪಾಲಿವಾಲ್‌ಗೆ ವಿಡಿಯೋ ಕರೆ ಮಾಡಿದ್ದಾನೆ.



ವೀಡಿಯೊ ಕರೆಯಲ್ಲಿ, ಆ ವ್ಯಕ್ತಿ ಪಾಲಿವಾಲ್ ಮೇಲೆ ಜನರನ್ನು ಬೆದರಿಸುವ ಮೂಲಕ ಹಣ ಸುಲಿಗೆ ಮಾಡಿದ ಆರೋಪ ಹೊರಿಸಿದ್ದಾನೆ ಮತ್ತು ಈ ಪ್ರಕರಣ ಮುಂಬೈನ ಕೊಲವಾ ಪೊಲೀಸ್ ಠಾಣೆಗೆ ಸಂಬಂಧಿಸಿದೆ ಎಂದು ಬೆದರಿಕೆ ಹಾಕಿದ್ದಾನೆ. ಕೇಂದ್ರೀಯ ತನಿಖಾ ದಳ (ಸಿಬಿಐ) ಅವರ ವಿರುದ್ಧ ಹಣ ಅಕ್ರಮ ವರ್ಗಾವಣೆ ಪ್ರಕರಣ ನಡೆಯುತ್ತಿದೆ ಎಂದು ಅವರಿಗೆ ತಿಳಿಸಲಾಗಿದೆ. ಇದಾದ ನಂತರ, ಶೀಘ್ರದಲ್ಲೇ ಹಣವನ್ನು ಪಾವತಿಸದಿದ್ದರೆ, ಅವರನ್ನು ಬಂಧಿಸಲಾಗುವುದು ಎಂದು ಪಾಲಿವಾಲ್‌ಗೆ ಬೆದರಿಕೆ ಹಾಕಲಾಗಿದೆ.

ದೂರಿನ ಪ್ರಕಾರ, ಆರೋಪಿಯು ಪಾಲಿವಾಲ್ ಜೊತೆಗೆ ಆತನ ಪತ್ನಿ ಮತ್ತು ಮಗಳನ್ನು ಡಿಜಿಟಲ್ ರೂಪದಲ್ಲಿ ಬಂಧಿಸಿದ್ದಾನೆ ಮತ್ತು ಅವರಿಗೆ ಇದೇ ರೀತಿಯ ಬೆದರಿಕೆ ಹಾಕಿದ್ದಾನೆ. ಈ ಕುಟುಂಬಕ್ಕೆ ಐದು ದಿನಗಳ ಕಾಲ ಮಾನಸಿಕ ಕಿರುಕುಳ ಮತ್ತು ಒತ್ತಡ ಹೇರಲಾಗಿದೆ.

## ಲಾಲೂಗೆ ಅಪಹರಣಕಾರರ ಸಂಪರ್ಕ: ರಾಬ್ರಿ ಸಹೋದರ

**ಪಾಟ್ನಾ:** ಆರ್‌ಜೆಡಿ ಮುಖ್ಯಸ್ಥ ಲಾಲೂ ಪ್ರಸಾದ್ ಯಾದವ್ ಅವರು ತಮ್ಮ ಅಧಿಕಾರಾವಧಿಯಲ್ಲಿ ಸುಲಿಗೆ ಮತ್ತು ಅಪಹರಣಕಾರರ ಗ್ಯಾಂಗ್‌ನೊಂದಿಗೆ ಸಂಪರ್ಕ ಹೊಂದಿದ್ದರು ಎಂದು ಅವರ ಪತ್ನಿ ರಾಬ್ರಿ ದೇವಿಯ ಕಿರಿಯ ಸಹೋದರ ಸುಭಾಷ್ ಯಾದವ್ ಆರೋಪಿಸಿದ್ದಾರೆ.



ಅಪಹರಣಗಳ ಹಿಂದೆ ನನ್ನ ಕೈವಾಡವಿದೆ ಎಂದು ಅವರು ಆರೋಪಿಸುತ್ತಾರೆ. ಜನರನ್ನು ಅಪಹರಿಸಿ ಬಿಡುಗಡೆ ಮಾಡಲು ಆದೇಶಿಸುವವರು ಲಾಲೂ ಅವರೇ ಎಂದು ಯಾದವ್ ಹೇಳಿದ್ದಾರೆ. ಮತ್ತು ಅಂದಿನಿಂದ ಅವರ ಸಂಪರ್ಕ ಕಡಿದುಕೊಂಡಿದ್ದೇನೆ ಎಂದು ಅವರು ತಿಳಿಸಿದ್ದಾರೆ.

### ಮೇವು ಹಗರಣದಲ್ಲಿ ಭಾಗಿ

ನನ್ನ ವಿರುದ್ಧ ಯಾವುದೇ ಪುರಾವೆಗಳಿದ್ದರೆ ಮೇವು ಹಗರಣದಲ್ಲಿ ಭಾಗಿಯಾಗಿರುವ ಪುರಾವೆಗಳಿದ್ದ ಲಾಲು ಜಿಯಂತೆಯೇ ನಾನು ಜೈಲಿನಲ್ಲಿರುತ್ತಿದ್ದೆ ಎಂದು ಅವರು ಹೇಳಿದರು.

ಆದಾಗ್ಯೂ, ರಾಬ್ರಿ ದೇವಿಯ ಮತ್ತೊಬ್ಬ ಸಹೋದರ ಸಾಧು ಯಾದವ್ ಈ ಆರೋಪವನ್ನು ತಳ್ಳಿಹಾಕಿದರು ಮತ್ತು ಸುಭಾಷ್ ಅಸಂಬದ್ಧವಾಗಿ ಮಾತನಾಡುತ್ತಿದ್ದಾರೆ ಎಂದಿದ್ದಾರೆ.

ಅಂತಹ ವಿಷಯಗಳನ್ನು ಹೇಳಲು ಅವರಿಗೆ ಯಾವುದೋ ರಾಜಕೀಯ ಪಕ್ಷದಿಂದ ಪ್ರೇರಣೆ ಬಂದಂತೆ ತೋರುತ್ತದೆ ಎಂದು ಹೇಳಿದರು.

ಸುಭಾಷ್ ಎಲ್ಲಾ ರೀತಿಯ ಸಂಶಯಾಸ್ಪದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದ. ಅವನಿಗೆ ಅಪಹರಣಕಾರರೊಂದಿಗೆ ಸಂಪರ್ಕವಿರಬೇಕು ಎಂದು ನಾನು ಅನುಮಾನಿಸುತ್ತೇನೆ. ಎಂದಿದ್ದಾರೆ.

## ಆರ್‌ಎಸ್‌ಎಸ್ ರ‍್ಯಾಲಿಗೆ ಹೈಕೋರ್ಟ್ ಅಸ್ತು: ಮಮತಾ ಸರ್ಕಾರಕ್ಕೆ ಹಿನ್ನಡೆ

**ಕೋಲ್ಕತ್ತಾ:** ರಾಷ್ಟ್ರೀಯ ಸ್ವಯಂಸೇವಕ ಸಂಘ(ಆರ್‌ಎಸ್‌ಎಸ್) ಫೆಬ್ರವರಿ 16 ರ ಭಾನುವಾರದಂದು ಪಶ್ಚಿಮ ಬಂಗಾಳದ ಬುರ್ದ್ವಾನ್‌ನಲ್ಲಿ ರ‍್ಯಾಲಿ ನಡೆಸಲು ಕಲ್ಕತ್ತಾ ಹೈಕೋರ್ಟ್ ಶುಕ್ರವಾರ ಅನುಮತಿ ನೀಡಿದೆ. ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರು ಉದ್ದೇಶಿಸಿ ಮಾತನಾಡಲಿರುವ ಈ ರ?ಯಾಲಿಗೆ ಮಮತಾ ಬ್ಯಾನರ್ಜಿ ನೇತೃತ್ವದ ಪಶ್ಚಿಮ ಬಂಗಾಳ ಸರ್ಕಾರ ಅನುಮತಿ ನಿರಾಕರಿಸಿತ್ತು.

ಸರ್ಕಾರ ಅನುಮತಿ ನಿರಾಕರಿಸಿದ ನಂತರ ಆರ್‌ಎಸ್‌ಎಸ್, ಅನುಮತಿ ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು.

ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್, ರಾಜ್ಯದಲ್ಲಿ ಪರೀಕ್ಷೆಗಳು ನಡೆಯುತ್ತಿರುವುದರಿಂದ ಶಬ್ದವನ್ನು ಕಡಿಮೆ ಇಡಬೇಕು ಎಂಬ ಷರತ್ತಿನೊಂದಿಗೆ ಅನುಮತಿ ನೀಡಿದೆ.


ಭಾರತೀಯ ಕ್ರೀಡಾ ಪ್ರಾಧಿಕಾರ ಮೈದಾನದಲ್ಲಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಲು ಅಥವಾ ಧ್ವನಿವರ್ಧಕಗಳನ್ನು ಬಳಸಲು ಅನುಮತಿ ನಿರಾಕರಿಸಿದ್ದರಿಂದ ಹೈಕೋರ್ಟ್‌ನ ಈ ತೀರ್ಪು ರಾಜ್ಯ ಸರ್ಕಾರಕ್ಕೆ ದೊಡ್ಡ ಹಿನ್ನಡೆಯಾಗಿದೆ.

ತೃಣಮೂಲ ಕಾಂಗ್ರೆಸ್ ಸರ್ಕಾರವು ರಾಜ್ಯದಲ್ಲಿ ನಡೆಯುತ್ತಿರುವ 10ನೇ ತರಗತಿಯ ಬೋರ್ಡ್ ಪರೀಕ್ಷೆಗಳನ್ನು ಉಲ್ಲೇಖಿಸಿ ಆರ್ ಎಸ್‌ಎಸ್ ರ‍್ಯಾಲಿಗೆ ಅನುಮತಿ ನಿರಾಕರಿಸಿತ್ತು.

ರ‍್ಯಾಲಿ ನಡೆಯುವ ಸ್ಥಳಕ್ಕೆ ಹತ್ತಿರದಲ್ಲಿ ಯಾವುದೇ ಶಾಲೆಗಳಿಲ್ಲ ಎಂದು ಅರ್ಜಿದಾರರು ವಾದಿಸಿದರು. ಅಲ್ಲದೆ ಈ ಕಾರ್ಯಕ್ರಮವು ಭಾನುವಾರದಂದು ನಡೆಯುತ್ತದೆ ಮತ್ತು ಕಡಿಮೆ ಸಮಯ ಇರುತ್ತದೆ ಎಂಬ ಕಾರಣಕ್ಕೆ ನ್ಯಾಯಾಲಯ ಅನುಮತಿ ನೀಡಿದೆ.

# ಜ್ವರದಿಂದ ಬಳಲುತ್ತಿದ್ದರೂ ಅಧಿವೇಶನದಲ್ಲಿ ಭಾಗಿಯಾದ ಗೌಡ್ರು

- ರಾಜ್ಯದ ಸಮಸ್ಯೆಗಳನ್ನು ಸದನದ ಗಮನಕ್ಕೆ ತಂದಿದ್ದಾರೆ, ಸದನಕ್ಕೆ ಗೈರಾಗಲು ತನ್ನ ಆತ್ಮಸಾಕ್ಷಿ ಒಪ್ಪಲಿಲ್ಲ: ದೇವೇಗೌಡ



**ನವದೆಹಲಿ:** ಮಾಜಿ ಪ್ರಧಾನ ಮಂತ್ರಿ ಮತ್ತು ಹಿರಿಯ ಮುತ್ಸದ್ದಿ ಹಾಗೂ ರಾಜ್ಯಸಭಾ ಸದಸ್ಯರಾಗಿರುವ ದೇವೇಗೌಡರು 92ರ ಇಳಿವಯಸ್ಸು ಮತ್ತು ಜ್ವರದಿಂದ ಬಳಲುತ್ತಿ ದ್ದರೂ ಇವತ್ತಿನ ಚರ್ಚೆಯಲ್ಲಿ ಭಾಗಿಯಾಗಿ ರಾಜ್ಯದ ಸಮಸ್ಯೆಗಳನ್ನು ಸದನದ ಗಮನಕ್ಕೆ ತಂದಿದ್ದಾರೆ. ಸದನಕ್ಕೆ ಗೈರಾಗಲು ತನ್ನ ಆತ್ಮಸಾಕ್ಷಿ ಒಪ್ಪಲಿಲ್ಲ ಎಂದು ಅವರು ಹೇಳುತ್ತಾರೆ.

> ಹೆಚ್ಚೆಚ್ಚು ಉದ್ಯೋಗವಕಾಶ ಕಲ್ಪಿಸುವ ಅಗತ್ಯವಿದೆ

ರಾಜ್ಯಸಭೆಯ ಅಧ್ಯಕ್ಷರಾಗಿರುವ ಜಗದೀಪ್ ಧನ್ಕರ್ ಅವರು, ಸರ್, ಆಯಾಸ ಮಾಡ್ಕೋಬೇಡಿ, ನಿಮ್ಮ ಪೇಪರ್ಗಳನ್ನು ಟೇಬಲ್ ಮೇಲಿಡಿ ಸಾಕು ಅನ್ನುತ್ತಾರೆ. ಅದರೂ ದೇವೇಗೌಡರು ತಮ್ಮ ಮಾತನ್ನು ಮಂಡಿಸುತ್ತಾರೆ. ಅನಾರೋಗ್ಯದ ನಡುವೆಯೂ ರಾಜ್ಯಸಭೆಯಲ್ಲಿ ಗುರುವಾರ ಬಜೆಟ್ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡಿದ್ದ ಮಾಜಿ ಪ್ರಧಾನಿಗಳಾದ ಹೆಚ್.ಡಿ.ದೇವೇಗೌಡರು, ಇಡೀ ರಾಷ್ಟ್ರದ ಎಲ್ಲಾ ವರ್ಗಗಳ ಜನರಿಗೆ ಶಕ್ತಿ ತುಂಬುವ ಆಯವ್ಯಯ ಮಂಡಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಆ ಸಂದರ್ಭದಲ್ಲಿ ಸದನದಲ್ಲಿಯೇ ಹಾಜರಿದ್ದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ್ರು, ಎಲ್ಲರಿಗೂ ಅನುಕೂಲ ಆಗುವಂತಹ, ದೇಶದ ಅಭಿವೃದ್ಧಿಗೆ ದೂರದೃಷ್ಟಿಯ ಕೊಡುಗೆ ನೀಡುವಂತಹ ಬಜೆಟ್ ಮಂಡಿಸಿದ್ದೀರಿ ಎಂದರು. ಜನರ ಹಿತಾಸಕ್ತಿಯನ್ನು ಕಾಪಾಡಲು ವಿತ್ತ ಸಚಿವರು ತಮ್ಮ ಕೈಲಾದ ಎಲ್ಲವನ್ನೂ ಮಾಡಿದ್ದಾರೆ. ನಾನು ಅವರನ್ನು ಅಭಿನಂದಿಸುತ್ತೇನೆ ಎಂದು ದೇವೇಗೌಡರು ಹೇಳಿದರು. ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಭಾಗದಿಂದ ಯುವಜನರು ನಗರಗಳಿಗೆ ವಲಸೆ ಬರುವವರ ಪ್ರಮಾಣ ಹೆಚ್ಚುತ್ತಲೇ ಇದೆ ಎಂದು ದೇವೇಗೌಡರು ಕಳವಳ ವ್ಯಕ್ತಪಡಿಸಿದರು. ಬೆಂಗಳೂರಿನ ಜನಸಂಖ್ಯೆ ಈಗ 1.4 ಕೋಟಿಗೆ ಮುಟ್ಟಿದೆ. ಎಲ್ಲಾ ಯುವಕರು ತಮ್ಮ ವಿದ್ಯಾಭ್ಯಾಸ ಮುಗಿದ ತಕ್ಷಣ ಹಳ್ಳಿಗಳನ್ನು ತೊರೆದು ನಗರಗಳಿಗೆ ಬಂದು ಸೇರುತ್ತಿದ್ದಾರೆ.

ಇದು ಜೀವನೋಪಾಯದ ಸಮತೋಲನವನ್ನು ತಪ್ಪಿಸುತ್ತಿದೆ. ಯುವಕರಿಗೆ ತಮ್ಮ ಪ್ರದೇಶಗಳಿಗಳಲ್ಲಿಯೇ ಹೆಚ್ಚೆಚ್ಚು ಉದ್ಯೋಗವಕಾಶ ಕಲ್ಪಿಸುವ ಅಗತ್ಯವಿದೆ ಎಂದು ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ್ರು ಸಲಹೆ ನೀಡಿದರು. ಸಮತೋಲಿತ ಜೀವನೋಪಾಯ ಸೃಷ್ಟಿ ಮಾಡುವ ನಿಟ್ಟಿನಲ್ಲಿ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಗಾತ್ರದ ಉದ್ಯಮಗಳನ್ನು ಬೆಂಬಲಿಸಲು ಹೆಚ್ಚು ಸೂಕ್ತವಾದ ಉಪಕ್ರಮಗಳನ್ನು ಕೈಗೊಳ್ಳಬೇಕಾದ ಅಗತ್ಯವನ್ನು ದೇವೇಗೌಡ್ರು ಒತ್ತಿ ಹೇಳಿದರು. ಕೃಷಿ ಉತ್ಪನ್ನಗಳಿಗೆ ನಾವು ಹೆಚ್ಚು ಬೆಂಬಲ ನೀಡುವುದನ್ನು ನಾವು ಮುಂದುವರಿಸಬೇಕು. ಬಿಹಾರದಲ್ಲಿ ಮಖಾನಾ ಮಂಡಳಿ ರಚನೆ ಮಾಡಿರುವುದನ್ನು ನಾನು ಸ್ವಾಗತ ಮಾಡುತ್ತೇನೆ ಎಂದ ದೇವೇಗೌಡರು, ಅದೇ ರೀತಿ ಹಲಸಿನ ಹಣ್ಣು, ನೇರಳೆ, ಹುಣಸೆಹಣ್ಣು ಮಂಡಳಿ ರಚಿಸಬೇಕು ಎಂದು ಒತ್ತಾಯ ಮಾಡಿದರು. ಅತಿ ಕಡಿಮೆ ಬಂಡವಾಳದಿಂದ ಮಖಾನಾ ಬೆಳೆಯಲಾಗುತ್ತಿದೆ. ಇದರಿಂದ ರೈತರಿಗೆ ಹೆಚ್ಚು ಅನುಕೂಲ ಆಗುತ್ತಿದೆ. ಮಂಡಳಿ ರಚನೆಯಿಂದ ಮತ್ತಷ್ಟು ಅನುಕೂಲ ಆಗುತ್ತದೆ. ಹೀಗಿದ್ದ ಮೇಲೆ ಕನಿಷ್ಠ ಬಂಡವಾಳದಿಂದ ನೈಸರ್ಗಿಕವಾಗಿ ಬೆಳೆಯಲಾಗುವ ಹಲಸಿನ ಹಣ್ಣು, ನೇರಳೆ ಹಾಗೂ ಹುಣಸೆಹಣ್ಣು ಮಂಡಳಿಯನ್ನು ರಚಿಸಬಾರದೇಕೆ ಎಂದು ಸಲಹೆ ನೀಡಿದರು.



### ಬಡ್ಡಿದರಗಳನ್ನು ಇಳಿಸಬೇಕು

ಹಣಕಾಸು ಬೆಂಬಲ ಪಡೆಯುವಲ್ಲಿ ಅತಿಸಣ್ಣ, ಸಣ್ಣ ಕೈಗಾರಿಕೆಗಳು ಮಧ್ಯಮ ಗಾತ್ರದ ಕೈಗಾರಿಕೆಗಳೊಂದಿಗೆ ಸ್ಪರ್ಧಿಸಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ಈ ಉದ್ದೇಶಕ್ಕಾಗಿ ಪ್ರತ್ಯೇಕ ನೀತಿ, ಕಾರ್ಯಕ್ರಮಗಳನ್ನು ರೂಪಿಸುವ ಅಗತ್ಯ ತುಂಬಾ ಇದೆ ಎಂದು ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಅವರು ಹೇಳಿದರು. ಅತಿ ಸಣ್ಣ, ಸಣ್ಣ ಕೈಗಾರಿಕೆಗಳಿಗೆ ಸಾಲದ ಅನುಮೋದನೆ ನೀಡುವಾಗ ಸಿಬಿಲ್‌ಸ್ಕೋರ್ ಮಾನದಂಡವನ್ನು ಪರಿಗಣಿಸಬಾರದು. ಬಡ್ಡಿದರಗಳನ್ನು ಶೇ.7ರಿಂದ 8ಕ್ಕೆ ಇಳಿಸಬೇಕು ಮತ್ತು ಆರಂಭಿಕ ಸಾಲ ಮರುಪಾವತಿಗಾಗಿ ಸ್ವತ್ತುಗಳ ಮರುಸ್ವಾಧೀನ ದಂಡ ಪ್ರಯೋಗವನ್ನು ಕೈಬಿಡಬೇಕು ಎಂದು ದೇವೇಗೌಡರು ಸರಕಾರವನ್ನು ಒತ್ತಾಯಿಸಿದರು.

## ಮಿನಿ ನ್ಯೂಸ್

### ರಸ್ತೆ ಅಪಘಾತದಲ್ಲಿ ಒಂದೇ ಕುಟುಂಬದ ನಾಲ್ವರು ಸಾವು

**ಹತ್ರಾಸ್:** ಕಾರು ಕಾಲುವೆಗೆ ಬಿದ್ದ ಪರಿಣಾಮ ಇಬ್ಬರು ಮಕ್ಕಳು ಸೇರಿದಂತೆ ಒಂದೇ ಕುಟುಂಬದ ನಾಲ್ವರು ಮೃತಪಟ್ಟು ಐವರು ಗಾಯಗೊಂಡಿರವ ಘಟನೆ ಉತ್ತರಪ್ರದೇಶದ ಹತ್ರಾಸ್ ಜಿಲ್ಲೆಯ ಜರೇರಾ ಗ್ರಾಮದ ಬಳಿ ನಡೆದಿದೆ.

ಕಳೆದ ರಾತ್ರಿ ಕುಟುಂಬ ಸಮೇತರಾಗಿ ಮದುವೆ ಸಮಾರಂಭದಲ್ಲಿ ಪಾಲ್ಗೊಂಡು ಆಲಿಗಢದಿಂದ ಇಟಾಹ್ ಜಿಲ್ಲೆಯ ಜಲೇಸರ್‌ಗೆ ಹಿಂದಿರುಗುತ್ತಿದ್ದಾಗ ಈ ದುರ್ಘಟನೆ ಸಂಭವಿಸಿದೆ. ಮೃತರನ್ನು ಬಬ್ಬು (45), ಅವರ ಸಹೋದರನ ಪತ್ನಿ ಪೂನಂ (35), ಪೂನಂ ಅವರ ಪುತ್ರಿಯರಾದ ಕಾವ್ಯ (3) ಮತ್ತು ಭೂಮಿ (1) ಎಂದು ಗುರುತ್ತಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಚಿರಂಜೀವ್ ನಾಥ್ ಸಿನ್ಹಾ ತಿಳಿಸಿದ್ದಾರೆ. ಗಾಯಾಳುಗಳು ಸಿಕಂದರಾವು ಸಮುದಾಯ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದು ಕೆಲವರ ಸ್ಥಿತಿ ಗಂಭೀರವಾಗಿದೆ ಎಂದು ಹೇಳಿದರು. ವೇಗದಲ್ಲಿದ್ದ ಕಾರು ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಪಕ್ಕದ ಕಾಲುವೆಗೆ ಉರುಳಿದೆ ಎಂದು ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ. ಮೃತರ ಶವಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಎಸ್ಪಿ ತಿಳಿಸಿದ್ದಾರೆ.

### ತಿಮಿಂಗಲ ಬಾಯಿಂದ ಹೊರಬಿದ್ದ ಯುವಕ

**ಪ್ಯಾಟಗೋನಿಯಾ:** ಹಂಪ್‌ಬ್ಯಾಕ್ ತಿಮಿಂಗಿಲವೊಂದು ನೌಕಾಯಾನ ಮಾಡುತ್ತಿದ್ದ ಯುವಕನನ್ನು ದೋಣಿ ಸಮೇತ ನುಂಗಿ ನಂತರ ಕಕ್ಕುವ ಭಯಾನಕ ಮತ್ತು ರೋಮಾಂಚಕಾರಿ ವಿಡಿಯೋ ಹೊರಬಿದ್ದಿದೆ. ಈ ಘಟನೆ ಚಿಲಿಯ ಪ್ಯಾಟಗೋನಿಯಾದಲ್ಲಿ ನಡೆದಿದೆ. ಯುವಕನ ತಂದೆ ಈ ಇಡೀ ಘಟನೆಯನ್ನು ವಿಡಿಯೋದಲ್ಲಿ ಸೆರೆಹಿಡಿದಿದ್ದಾರೆ. ಆಡ್ರಿಯನ್ ಸಿಮಾಕಾಸ್ ತನ್ನ ತಂದೆಯೊಂದಿಗೆ ಸಾಗರದಲ್ಲಿ ನೌಕಾಯಾನ ಮಾಡುತ್ತಿದ್ದ. ಅವನ ತಂದೆ ಅವನ ವಿಡಿಯೋ ಮಾಡುತ್ತಿದ್ದರು.

ಸಮುದ್ರದ ನೀರಿನಿಂದ ಒಂದು ದೈತ್ಯ ಹಂಪ್‌ಬ್ಯಾಕ್ ತಿಮಿಂಗಿಲ ಹೊರ ಬಂದು ಮತ್ತು ಆಡ್ರಿಯನ್ ಇರುವ ದೋಣಿ ಸಮೇತ ನುಂಗುತ್ತದೆ. ಆದರೆ ಮುಂದಿನ ಕೆಲವು ಕ್ಷಣಗಳಲ್ಲಿ ತಿಮ್‌ಂಗಿಲ ಕಕ್ಕುವ ಮೂಲಕ ನುಂಗಿದ ದೋಣಿಯನ್ನು ಹೊರಹಾಕುತ್ತದೆ. ಆಡ್ರಿಯನ್ ತನ್ನ ದೋಣಿಯೊಂದಿಗೆ ತಿ ಮಿಂಗಿಲದ ಬಾಯಿಂದ ಹೊರಬಂದು ಬಚಾವ್ ಆಗುತ್ತಾನೆ. ಆಡ್ರಿಯನ್ ತಂದೆ ಡೇಲ್ ಕೆಲವೇ ಮೀಟರ್ ದೂರದಲ್ಲಿದ್ದು ಅವರು ತಕ್ಷಣ ಆಡ್ರಿಯನ್‌ನನ್ನು ತನ್ನ ಕಡೆಗೆ ಎಳೆದುಕೊಳ್ಳುತ್ತಾನೆ. ಈ ಸಮಯದಲ್ಲಿ ತಿಮಿಂಗಿಲವು ಸಮುದ್ರದಲ್ಲಿ ಮಾಯವಾಗುತ್ತದೆ. ನಾನು ಸತ್ತಿದ್ದೇನೆ ಎಂದು ಭಾವಿಸಿದೆ ಮತ್ತು ಆ ಕ್ಷಣ ತುಂಬಾ ಭಯಾನಕವಾಗಿತ್ತು ಎಂದು ಆಡ್ರಿಯನ್ ಹೇಳಿದ್ದಾನೆ. ಏಕೆಂದರೆ ಈಗ ನಾನು ಏನೂ ಮಾಡಲು ಸಾಧ್ಯವಿರಲಿಲ್ಲ ಎಂದಿದ್ದಾನೆ. ಸಾವಿನ ದವಡೆಯಿಂದ ಪಾರಾಗಿ ಬಂದ ಆಡ್ರಿಯನ್ ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.

### ಮುಂಬೈನಲ್ಲಿ ಮೊದಲ ಜಿಬಿಎಸ್ ಸಾವು

**ಮುಂಬೈ:** ಮಹಾರಾಷ್ಟ್ರದ ಪುಣೆ ನಂತರ, ದೇಶದ ಆರ್ಥಿಕ ರಾಜಧಾನಿ ಎಂದು ಕರೆಯಲ್ಪಡುವ ಮುಂಬೈನಲ್ಲಿ ಈಗ ಗುಯಿಲಿನ್-ಬಾರೆ ಸಿಂಡ್ರೋಮ್ ನ ಮೊದಲ ರೋಗಿ ಸಾವನ್ನಪ್ಪಿದ್ದಾರೆ. ರೋಗಿಯ ಸಾವಿನ ಬಗ್ಗೆ ಆಡಳಿತ ಮಂಡಳಿ ಮಾಹಿತಿ ನೀಡಿದೆ.

ಮುಂಬೈನ ನಾಯರ್ ಆಸ್ಪತ್ರೆಗೆ ದಾಖಲಾಗಿದ್ದ 53 ವರ್ಷದ ರೋಗಿಯೊಬ್ಬರು ಸಾವನ್ನಪ್ಪಿದ್ದಾರೆ. ಮುಂಬೈನಲ್ಲಿ ಜಿಬಿಎಸ್ ಸಿಂಡ್ರೋಮ್ ವೈರಸ್‌ನಿಂದಾಗಿ ಸಂಭವಿಸಿದ ಮೊದಲ ಸಾವು ಇದಾಗಿದೆ. ರೋಗಿಯು ವಡಾಲಾ ಪ್ರದೇಶದ ನಿವಾಸಿಯಾಗಿದ್ದಾರೆ, ಬಿಎಂಸಿಯ ಬಿಎನ್ ದೇಸಾಯಿ ಆಸ್ಪತ್ರೆಯಲ್ಲಿ ವಾರ್ಡ್ ಬಾಯ್ ಆಗಿ ಕೆಲಸ ಮಾಡುತ್ತಿದ್ದರು ಎನ್ನಲಾಗಿದೆ.



ನಾಯರ್ ಆಸ್ಪತ್ರೆಯಿಂದ ಬಂದ ಮಾಹಿತಿಯ ಪ್ರಕಾರ, ರೋಗಿ ದೀರ್ಘಕಾಲದವರೆಗೆ ಅನಾರೋಗ್ಯದಿಂದ ಬಳಲುತ್ತಿದ್ದರು ಮತ್ತು ಚಿಕಿತ್ಸೆ ಪಡೆಯುತ್ತಿದ್ದರು ಎನ್ನಲಾಗಿದೆ. ಇದಕ್ಕೂ ಮೊದಲು, ಮಹಾರಾಷ್ಟ್ರದ ಪುಣೆಯಲ್ಲಿ, ಜಿಬಿಎಸ್‌ನಿಂದಾಗಿ 7 ರೋಗಿಗಳು ಪ್ರಾಣ ಕಳೆದುಕೊಂಡಿದ್ದಾರೆ. ದೇಶದ ಕನಿಷ್ಠ 2 ರಾಜ್ಯಗಳಲ್ಲಿ ಜಿಬಿಎಸ್ ರೋಗಿಗಳು ದೃಢಪಟ್ಟಿದ್ದಾರೆ. ಇನ್ನೋರ್ವ ಜಿಬಿಎಸ್ ವೈರಸ್‌ನಿಂದ ಬಳಲುತ್ತಿರುವ ಪಾಲ್ಘರ್ ನ 10 ನೇ ತರಗತಿ ವಿದ್ಯಾರ್ಥಿನಿಯನ್ನು ನಾಯರ್ ಆಸ್ಪತ್ರೆಯಲ್ಲಿ ದಾಖಲಿಸಲಾಗಿದೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ವಿಶೇಷ ವ್ಯವಸ್ಥೆ ಮಾಡುವಂತೆ ಮುಖ್ಯಮಂತ್ರಿ ಸೂಚನೆ ನೀಡಿದ್ದಾರೆ. ಜಿಬಿಎಸ್ ಒಂದು ನರವೈಜ್ಞಾನಿಕ ಕಾಯಿಲೆಯಾಗಿದೆ. ಈ ರೋಗದ ಲಕ್ಷಣಗಳು ಹಂದಿ ಜ್ವರದಂತಿವೆ. ಇದರಲ್ಲಿ ಶೀತ, ಕೆಮ್ಮು ಮತ್ತು ತೀವ್ರ ಜ್ವರ ಬರುತ್ತದೆ. ಇದರಿಂದಾಗಿ ಸ್ನಾಯುಗಳು ದುರ್ಬಲವಾಗುತ್ತವೆ ಮತ್ತು ದೇಹದ ಭಾಗಗಳು ನಿಶ್ಚೇಷ್ಟಿತವಾಗುತ್ತವೆ. ಇದು ಪಾರ್ಶ್ವವಾಯುವಿಗೆ ಕಾರಣವಾಗಬಹುದು ಅಥವಾ ಕೆಲವೊಮ್ಮೆ ಸಾವಿಗೆ ಸಹ ಕಾರಣವಾಗಬಹುದು ಎನ್ನಲಾಗಿದೆ. ಜಿಬಿಎಸ್ ಸಾಂಕ್ರಾಮಿಕ ರೋಗವಲ್ಲ ಮತ್ತು ನಾಗರಿಕರು ಭಯಪಡುವ ಅಗತ್ಯವಿಲ್ಲ ಎಂದು ವೈದ್ಯಕೀಯ ತಜ್ಞರು ಹೇಳಿದ್ದಾರೆ.

### ಸುಪ್ರೀಂ ಕದ ತಟ್ಟಿದ ಯೂಟ್ಯೂಬರ್

**ನವದೆಹಲಿ:** ಯೂಟ್ಯೂಬರ್ ರಣವೀರ್ ಅಲಹಾಬಾದ್ ಈಗ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದಾರೆ. ಇಂಡಿಯಾಸ್ ಗಾಟ್ ಟ್ಯಾಲೆಂಟ್ ಕುರಿತು ಅಸಭ್ಯ ಮತ್ತು ಅಶ್ಲೀಲ ಕಾಮೆಂಟ್‌ಗಳಿಂದಾಗಿ ರಣವೀರ್ ಅಲಹಾಬಾದ್ ವಿವಾದಕ್ಕೆ ಸಿಲುಕಿದ್ದಾರೆ. ಇಂಡಿಯಾಸ್ ಗಾಟ್ ಟ್ಯಾಟೆಂಟ್ ಕಾರ್ಯಕ್ರಮದ ಸಂದರ್ಭದಲ್ಲಿ ನೀಡಿದ ಅಶ್ಲೀಲ ಹೇಳಿಕೆಗಳ ಆರೋಪದ ಮೇಲೆ ವಿವಿಧ ರಾಜ್ಯಗಳಲ್ಲಿ ತಮ್ಮ ವಿರುದ್ಧ ದಾಖಲಾಗಿರುವ ಬಹು ಎಫ್‌ಐಆರ್‌ಗಳಿಗೆ ಸಂಬಂಧಿಸಿದಂತೆ ಪರಿಹಾರ ಕೋರಿ ಬಿಯರ್ ಬೈಸೆಪ್ಸ್ ಎಂದೇ ಜನಪ್ರಿಯವಾಗಿರುವ ಯೂಟ್ಯೂಬರ್ ರಣವೀರ್ ಸುಪ್ರೀಂ ಕೋರ್ಟ್‌ಗೆ ಅನೇಕ ಎಫ್‌ಐಆರ್‌ಗಳನ್ನು ಒಟ್ಟುಗೂಡಿಸುವಂತೆ ಅರ್ಜಿ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮಗಳಲ್ಲಿ ಈ ವಿಡಿಯೋ ವೈರಲ್ ಆದ ನಂತರ ಭಾರೀ ಆಕ್ರೋಶಕ್ಕೆ ಕಾರಣವಾದ ಹೇಳಿಕೆಗಳ ಮೇಲೆ ಮಹಾರಾಷ್ಟ್ರ ಪೊಲೀಸರು ಮತ್ತು ಅಸ್ಸಾಂ ಪೊಲೀಸರು ಇಲ್ಲಿಯವರೆಗೆ ಎಫ್‌ಐಆರ್‌ಗಳನ್ನು ದಾಖಲಿಸಿದ್ದಾರೆ. ಡಾ. ಅಭಿನವ್ ಚಂದ್ರಚೂಡ್ ಅವರು ಭಾರತದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರ ಮುಂದೆ ಈ ವಿಷಯವನ್ನು ಪ್ರಸ್ತಾಪಿಸಿದ್ದಾರೆ. ಇದು ಸಂವಿಧಾನದ 32 ನೇ ವಿಧಿಯ ಅಡಿಯಲ್ಲಿ ಸಲ್ಲಿಸಲಾದ ಅರ್ಜಿಯಾಗಿದೆ ಎಂದು ಅವರು ಹೇಳಿದ್ದಾರೆ. ಈ ಪ್ರಕರಣದಲ್ಲಿ ಮುಂಬೈ ಪೊಲೀಸರು ರಣವೀರ್ ಅವರನ್ನು ವಿಚಾರಣೆಗೆ ಕರೆದಿದ್ದಾರೆ, ಆದರೆ ಅವರು ಪೊಲೀಸ್ ಠಾಣೆಗೆ ವಿಚಾರಣೆಗೆ ಹಾಜರಾಗಲು ನಿರಾಕರಿಸಿದ್ದಾರೆ. ಹೀಗಾಗಿ ಎರಡನೇ ಬಾರಿಗೆ ಸಮನ್ಸ್ ಜಾರಿ ಮಾಡಿದಾಗ, ಯೂಟ್ಯೂಬರ್ ತನ್ನ ಮನೆಯಲ್ಲಿ ತನ್ನ ಹೇಳಿಕೆಯನ್ನು ದಾಖಲಿಸಿಕೊಳ್ಳುವಂತೆ ವಿನಂತಿಸಿಕೊಂಡಿದ್ದಾರೆ.

# ನಾನು ಹೈದರಾಬಾದ್‌ನವಳು



ರಶ್ಮಿಕಾ ಮಾತಿಗೆ ಕನ್ನಡಿಗರು ಕೆಂಡ

ಕನ್ನಡ ಸಿನಿಮಾ ರಂಗದಿಂದ ಹೆಸರು ಮಾಡಿ, ಪರ ಭಾಷೆಗೆ ಜಂಪ್ ಆಗಿರುವ ರಶ್ಮಿಕಾ ಮಂದಣ್ಣ, ಇದೀಗ ಕನ್ನಡಿಗರ ಕಂಗೆಣ್ಣಿಗೆ ಗುರಿಯಾಗಿದ್ದಾರೆ. ಕನ್ನಡದ ನೆಲದಲ್ಲಿ ಹುಟ್ಟಿ, ಕಾವೇರಿ ನೀರು ಕುಡಿದು, ಕನ್ನಡ ಚಿತ್ರೋದ್ಯಮದಿಂದಲೇ ಅನ್ನ ಕಂಡುಕೊಂಡಿರುವ ಈ ನಟಿ ಮಾತಿನಲ್ಲೇ ಪ್ರಮಾದ ಮಾಡಿಕೊಂಡಿದ್ದಾರೆ.

ರಶ್ಮಿಕಾ ಮಂದಣ್ಣ ನಟನೆಯ ಛಾವಾ ಸಿನಿಮಾ ಈ ಶುಕ್ರವಾರ ಬಿಡುಗಡೆ ಆಗಿದೆ. ಈ ಸಿನಿಮಾದ ಪ್ರಮೋಷನ್ ವೇಳೆ ತಾವು ಹೈದರಾಬಾದ್‌ನವರು ಎಂದು ಹೇಳಿಕೊಂಡಿದ್ದಾರೆ. ನಾನು ಹೈದರಾಬಾದ್ ನವಳು ಅಂತಹೇಳೋಕೆ ಹೆಮ್ಮೆ ಅನಿಸುತ್ತಿದೆ. ನೀವು ಈಗ ನಮ್ಮ ಬಳಗ ಆಗಿದ್ದೀರಿ ಅನ್ನುವ ಮಾತುಗಳನ್ನು ಆಡಿದ್ದಾರೆ. ರಶ್ಮಿಕಾ ಮಂದಣ್ಣ ಆಡಿರುವ ಮಾತಿಗೆ ಸಾಕಷ್ಟು ಕನ್ನಡಿಗರು ಆಕ್ರೋಶ ವ್ಯಕ್ತ ಪಡಿಸಿದ್ದಾರೆ. ಕೆಲವರಂತೂ ಕನ್ನಡದ ನೆಲದ ಮೇಲೆ ನೀವು ಕಾಲು ಇಡಬೇಡಿ ಅಂತ ಕಟು ನುಡಿಗಳಲ್ಲೇ ಕಾಮೆಂಟ್ ಹಾಕಿದ್ದಾರೆ. ರಶ್ಮಿಕಾ ಅವರ ಸಿನಿಮಾಗಳನ್ನು ಕನ್ನಡದಲ್ಲಿ ರಿಲೀಸ್ ಮಾಡಲು ಬಿಡಬೇಡಿ ಅನ್ನುವ ಮಾತೂ ಕೇಳಿ ಬಂದಿವೆ. ರಶ್ಮಿಕಾಗೆ ತೆಲುಗು ಚಿತ್ರೋದ್ಯಮ ಬೆಳೆಸಿರಬಹುದು. ಆದರೆ, ಅವರಿಗೆ ಬುನಾದಿ ಹಾಕಿಕೊಟ್ಟಿದ್ದು ಕನ್ನಡ ಚಿತ್ರರಂಗ. ಹೊಸ ನಟಿಯಾಗಿದ್ದರೂ, ಪುನೀತ್ ರಾಜ್ ಕುಮಾರ್, ಗಣೇಶ್ ರೀತಿಯ ಸ್ಟಾರ್ ಗಳು ರಶ್ಮಿಕಾಗೆ ಅವಕಾಶ ಕೊಟ್ಟಿದ್ದಾರೆ. ಜೊತೆಗೆ ರಕ್ಷಿತಾ ಶೆಟ್ಟಿ ಬ್ರೇಕ್ ನೀಡಿದ್ದಾರೆ.



# ರೇಂಜ್ ರೋವರ್‌ನಲ್ಲಿ ಪವಿತ್ರಾ ಗೌಡ



ಕೊಲೆ ಕೇಸ್‌ನಲ್ಲಿ ಜೈಲಿನಿಂದ ರಿಲೀಸ್ ಆದ ಬಳಿಕ ಪವಿತ್ರಾ ಗೌಡ ಬಿಸಿನೆಸ್‌ನತ್ತ ಮುಖ ಮಾಡಿದ್ದಾರೆ. ಕಳೆದ 8 ತಿಂಗಳಿಂದ ಮುಚ್ಚಿದ್ದ ತಮ್ಮ ರೆಡ್ ಕಾರ್ಪೆಟ್ ಸ್ಟುಡಿಯೋವನ್ನು ರೀಲಾಂಚ್ ಮಾಡಿದ್ದಾರೆ. ನಟ ದರ್ಶನ್ ಗೆಳತಿ ಪವಿತ್ರಾ ಗೌಡ, ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ಜೈಲು ಸೇರಿದ್ದರು. ಜಾಮೀನಿನ ಮೇಲೆ ಜೈಲಿನಿಂದ ಹೊರಬಂದ ಬಳಿಕ ವ್ಯವಹಾರಗಳತ್ತ ಗಮನ ಹರಿಸಿದ್ದಾರೆ.

ಪವಿತ್ರಾ ಗೌಡ ರೆಡ್ ಕಾರ್ಪೆಟ್ ಸ್ಟುಡಿಯೋ ಪ್ರಾರಂಭಿಸಿದ್ದರು. ಕಳೆದ ಎಂಟು ತಿಂಗಳಿಂದ ಮುಚ್ಚಿದ್ದ ಸ್ಟುಡಿಯೋಗೆ ಮರುಚಾಲನೆ ನೀಡಲಾಗಿದೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್, ಪವಿತ್ರಾ ಜೈಲು ಸೇರಿದ್ದರು. ಜೈಲಿಗೆ ಹೋದ ಬಳಿಕ ಸ್ಟುಡಿಯೋ ಕ್ಲೋಸ್ ಆಗಿತ್ತು. ಪ್ರೇಮಿಗಳ ದಿನದ ಪ್ರಯುಕ್ತ ರೆಡ್ ಕಾರ್ಪೆಟ್ ಸ್ಟುಡಿಯೋ ರೀಲಾಂಚ್ ಮಾಡಿದ್ದಾರೆ. ಸ್ಟುಡಿಯೋಗೆ ಪವಿತ್ರಾ ಗೌಡ ರೇಂಜ್ ರೋವರ್ ಕಾರ್‌ನಲ್ಲಿ ಬಂದು ಗಮನ ಸೆಳೆದರು.

# ಡ್ಯಾಂಡ್ರಫ್ ಜಾಹೀರಾತಿನಿಂದ ಡೇಟಿಂಗ್ ಶುರು ಮಾಡಿದ್ದ ವಿರುಷ್ಕಾ!

ಇಬ್ಬರ ಲವ್ ಸ್ಟೋರಿಯನ್ನು ಓದಲೇಬೇಕು



ಪ್ರೇಮಿಗಳ ದಿನಾಚರಣೆ. ಈ ದಿನಾಚರಣೆಯಂದು ಹಲವರು ಪ್ರೇಮ ಕಥೆಗಳನ್ನು ನೀವು ಓದಿರಬಹುದು. ಈ ಪಟ್ಟಿಗೆ ನೀವು ಓದಲೇಬೇಕಾದ ಮತ್ತು ನೆನಪಿನಲ್ಲಿ ಇಟ್ಟುಕೊಳ್ಳಲೇಬೇಕಾದ ಪ್ರೇಮ ಕಥೆ ಯಾವುದು ಎಂದರೆ ವಿರಾಟ್ ಕೊಹ್ಲಿ ಮತ್ತು ಅನುಷ್ಕಾ ಲವ್ ಸ್ಟೋರಿ. ಸೆಲೆಬ್ರಿಟಿಗಳು ಲವ್ ಮಾಡಿ ನಂತರ ಬ್ರೇಕಪ್ ಆಗುವುದು ಇಂದು ಹೊಸದೇನಲ್ಲ. ಆದರೆ ವಿರಷ್ಕಾ ಜೋಡಿ ಪ್ರೀತಿ ಮಾಡಿ ಮದುವೆಯಾಗುವುದರ ಜೊತೆ ಈಗಲೂ ಅನ್ಯೋನ್ಯವಾಗಿದ್ದಾರೆ. ಈ ಮೂಲಕ ನಿಜವಾದ ಪ್ರೇಮಿಗಳಿಗೆ ಆದರ್ಶವಾಗಿದ್ದಾರೆ. ವಿರಾಟ್‌ಕೊಹ್ಲಿ ಮತ್ತು ಅನುಷ್ಕಾ ಶರ್ಮಾ ಇಬ್ಬರು ಸೆಲೆಬ್ರಿಟಿಗಳು. ಈ ಇಬ್ಬರು ಸ್ಟಾರ್‌ಗಳು ಮೊದಲು ಭೇಟಿಯಾಗಿದ್ದು ಡ್ಯಾಂಡ್ರಫ್ ಜಾಹೀರಾತಿನಲ್ಲಿ. 2013ರಲ್ಲಿ ಟಿವಿ ಜಾಹೀರಾತಿನಲ್ಲಿ ಭಾಗಿಯಾಗಿದ್ದರು. ಈ ಸಂದರ್ಭದಲ್ಲಿ ಕೊಹ್ಲಿ ಆರ್‌ಸಿಬಿ ತಂಡದ ನಾಯಕನಾಗಿದ್ದರೆ ಅನುಷ್ಕಾ ಬಾಲಿವುಡ್ ಬೇಡಿಕೆಯ ನಟಿಯಾಗಿದ್ದರು. ಜಾಹೀರಾತಿನಲ್ಲಿ ಇಬ್ಬರ ನಟನೆಯ ಕೆಮಿಸ್ಟ್ರಿ ವರ್ಕ್ ಆಯಿತು. ಪರಸ್ಪರ ಫೋನ್ ನಂಬರ್ ಬದಲಾವಣೆ ಆಯಿತು. ಆರಂಭದಲ್ಲಿ ಇಬ್ಬರು ಕದ್ದುಮುಚ್ಚಿ ಡೇಟ್ ಮಾಡಲು ಆರಂಭಿಸಿದರು. ಈ ವೇಳೆ ವಿರಾಟ್ ಕೊಹ್ಲಿ ಟೀಂ ಇಂಡಿಯಾದ ಸ್ಟಾರ್ ಬ್ಯಾಟ್ಸ್‌ಮನ್ ಆಗಿ ಹೊರಹೊಮ್ಮಿದ್ದರು. ಪರಿಣಾಮ ಕದ್ದುಮುಚ್ಚಿ ಸಾರ್ವಜನಿಕ ಸ್ಥಳಗಳಲ್ಲಿ ಹೋಗಲು ಸಾಧ್ಯವಾಗುತ್ತಿರಲಿಲ್ಲ. ಹೋದರೂ ಜನರು ಗುರುತು ಹಿಡಿಯುತ್ತಿದ್ದರು.

# ಮೆಗಾಸ್ಟಾರ್ ಬಗ್ಗೆ ಮಾತಾಡ್ತಾ ಕಣ್ಣೀರಿಟ್ರು



ಮೆಗಾಸ್ಟಾರ್ ಚಿರಂಜೀವಿ ಅನೇಕ ಜನರಿಗೆ ಹಲವು ರೀತಿಯಲ್ಲಿ ಸಹಾಯ ಮಾಡಿದ್ದಾರೆ. ಸಾಮಾನ್ಯ ಜನರು, ಅಭಿಮಾನಿಗಳು, ಚಲನಚಿತ್ರ ನಟರು, ಪತ್ರಕರ್ತರು, ಕಾರ್ಮಿಕರು ಸೇರಿದಂತೆ ಅಗತ್ಯವಿರುವವರಿಗೆ ಸಹಾಯ ಹಸ್ತ ಚಾಚಿದ್ರಂತೆ ಮೆಗಾಸ್ಟಾರ್ ಮೊದಲಿಗರು.

ಆದರೆ, ಚಿರಂಜೀವಿ ತಾವು ಮಾಡಿದ ಉತ್ತಮ ಕೆಲಸಗಳ ಬಗ್ಗೆ ಬಹಿರಂಗವಾಗಿ ಮಾತಾಡೋದಿಲ್ಲ. ಬಾಲಿವುಡ್ ಬ್ಯೂಟಿ ಊರ್ವಶಿ ರೌಟೇಲಾ ಅವರಿಗೂ ನಟ ಚಿರಂಜೀವಿ ಸಹಾಯ ಮಾಡಿದ್ದಾರಂತೆ. ಕೊನೆವರೆಗೂ ನಾನು ಚಿರಂಜೀವಿ ಅವರಿಗೆ ಋಣಿಯಾಗಿರುತ್ತೇನೆ ಎಂದಿದ್ದಾರೆ. ಚಿರಂಜೀವಿ ಅವರ ವಾಲ್ತೇರು ವೀರಯ್ಯ ಚಿತ್ರದಲ್ಲಿ ಊರ್ವಶಿ ರೌಟೇಲಾ ಸ್ಪೆಷಲ್ ಸಾಂಗಿಗೆ ಡ್ಯಾನ್ಸ್ ಮಾಡಿದ್ರು. ಚಿರಂಜೀವಿ ಜೊತೆ ಹೆಜ್ಜೆ ಹಾಕಿದ್ರು. ಸಂದರ್ಶನವೊಂದರಲ್ಲಿ ಮಾತಾಡಿದ ನಟಿ ಊರ್ವಶಿ ರೌಟೇಲಾ ಅವರು ಚಿರಂಜೀವಿ ಮಾಡಿದ ಸಹಾಯವನ್ನು ನೆನೆದಿದ್ದಾರೆ. ಕೊಂಚ ಅಪಾಯಕಾರಿ ಎಂದ ವೈದ್ಯರು ಹೇಳಿದ್ರಂತೆ. ಈ ವೇಳೆ ನಟ ಊರ್ವಶಿ ಚಿರಂಜೀವಿಯನ್ನು ಸಂಪರ್ಕಿಸಿ ಸಹಾಯ ಕೇಳಿದ್ರು. ಮೆಗಾಸ್ಟಾರ್ ತಕ್ಷಣ ಕೋಲ್ಕತ್ತಾದ ಅಪೋಲೋ ಆಸ್ಪತ್ರೆಯ ವೈದ್ಯರ ತಂಡದೊಂದಿಗೆ ಮಾತನಾಡಿದ್ದಾರೆ.

# ಪಾರು ಪಾರ್ವತಿಯಿಂದ ದೀಪಿಕಾ ದಾಸ್ ಖುಷ್

ಜನವರಿಯಲ್ಲಿ ತೆರೆಕಂಡ 'ಪಾರುಪಾರ್ವತಿ' ಚಿತ್ರ, ಕರ್ನಾಟಕ, ಯುಕೆ ಮತ್ತು ಐರ್ಲೆಂಡ್‌ನ ಚಿತ್ರ ಮಂದಿರಗಳಲ್ಲಿ ಬಿಡುಗಡೆಗೊಂಡು, ಯಶಸ್ವಿ ಪ್ರದರ್ಶನ ಕಂಡಿದೆ. ಅಲ್ಲಿಗೆ ವರ್ಷದ ಮೊದಲ ಸಿನಿಮಾದಲ್ಲಿ ಗೆದ್ದು, ಗೆಲುವಿನ ನಗೆ ಬೀರಿದ್ದಾರೆ ನಟ ದೀಪಿಕಾ ದಾಸ್. ಇದು ಮತ್ತಷ್ಟು ಸಿನಿಮಾಗಳನ್ನು ಮಾಡಲು ಸ್ಫೂರ್ತಿ ನೀಡಿದೆ ಎಂದಿದ್ದಾರೆ.


ಈ ಚಿತ್ರದಲ್ಲಿ ಜನಪ್ರಿಯ ಟೆಲಿವಿಷನ್ ನಟಿ ಮತ್ತು ಬಿಗ್ ಬಾಸ್ ಸ್ಪರ್ಧಿ ದೀಪಿಕಾ ದಾಸ್ ಟ್ರಾವೆಲಿಂಗ್ ಇನ್ಫ್ಲುಯೆನ್ಸರ್ ಆಗಿ ಹಿರಿಯ ನಟಿ ಪೂನಂ ಸಿರ್ನಾಯಕ್ ಅವರೊಂದಿಗೆ ನಟಿಸಿದ್ದಾರೆ. ಹೊಸಬರಾದ ಫವಾಜ್ ಅಶ್ರಫ್ ಕೂಡ ಚಿತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಉತ್ತಮ ಆರಂಭದ ನಂತರ, ಮೊದಲ ವಾರದಲ್ಲಿ 80 ಲಕ್ಷಗಳ ಗಳಿಕೆ ಕಂಡರೂ, ಸೀಮಿತ ಸಂಖ್ಯೆಯ ಚಿತ್ರ ಮಂದಿರಗಳು ಮತ್ತು ಅನಾನುಕೂಲಕರ ಪ್ರದರ್ಶನ ಸಮಯಗಳಿಂದಾಗಿ ಚಿತ್ರದ ವ್ಯಾಪ್ತಿ ಸೀಮಿತವಾಗಿದೆ. ಪ್ರಸ್ತುತ, ಈ ಚಿತ್ರ ತನ್ನ ಎರಡನೇ ವಾರದಲ್ಲಿದೆ. ಚಿತ್ರವನ್ನು ನೋಡಿದ ವೀಕ್ಷಕರು ಛಾಯಾಗ್ರಹಣ, ಸಂಗೀತ ಮತ್ತು ನಿರ್ದೇಶನವನ್ನು ಹೊಗಳಿದ್ದಾರೆ.

# ತಾಂಡೇಲ್ ಗೆಲ್ಲುತ್ತೆ ಎಂದು ಗೊತ್ತಿತ್ತು



'ತಾಂಡೇಲ್' ಸಿನಿಮಾ ತಂಡದವರು ಈಗ ಯಶಸ್ಸನ್ನು ಆನಂದಿಸುತ್ತಾ ಇದ್ದಾರೆ. ಈ ಚಿತ್ರದಲ್ಲಿ ಮುಖ್ಯ ಭೂಮಿಕೆಯಲ್ಲಿ ಕಾಣಿಸಿಕೊಂಡಿರೋ ನಾಗ ಚೈತನ್ಯ, ಸಾಯಿ ಪಲ್ಲವಿ ಸೇರಿದಂತೆ ಎಲ್ಲರೂ ಸಿನಿಮಾ ಗೆಲುವಿನಿಂದ ಸಾಕಷ್ಟು ಖುಷಿ ಆಗಿದ್ದಾರೆ. 'ತಾಂಡೇಲ್' ಸಿನಿಮಾ ಇಷ್ಟು ದೊಡ್ಡ ಗೆಲುವು ಕಾಣುತ್ತದೆ ಅನ್ನೋದು ಮೊದಲೇ ಗೊತ್ತಿತ್ತಾ ಹೌದು ಎನ್ನುತ್ತಾರೆ ಸಾಯಿ ಪಲ್ಲವಿ. ಈ ಬಗ್ಗೆ ಮೊದಲೇ ಸೂಚನೆ ಸಿಕ್ಕಿತ್ತು ಎಂಬರ್ಥದಲ್ಲಿ ಅವರು ಮಾತನಾಡಿದ್ದಾರೆ. ಅದರಲ್ಲೂ ಒಬ್ಬರಿಗೆ ಈ ಬಗ್ಗೆ ಈ ವಿಚಾರದಲ್ಲಿ ಖಾತ್ರಿ ಇತ್ತು. 'ತಾಂಡೇಲ್' ಇದು ನೈಜ ಘಟನೆ ಆಧಾರಿತ ಸಿನಿಮಾ. ಈ ಚಿತ್ರದ ಸಕ್ಸಸ್‌ಮೀಟ್‌ನ ಇತ್ತೀಚೆಗೆ ಆಚರಿಸಲಾಯಿತು. ಈ ವೇಳೆ ನಿಜ ಜೀವನದ ತಾಂಡೇಲ್ ರಾಮ್ ರಾವ್ ಕೂಡ ಅಲ್ಲಿ ಇದ್ದರು. ಸಾಯಿ ಪಲ್ಲವಿ ಅವರು ಅವರಿಗೆ ಧನ್ಯವಾದ ಹೇಳಿದರು. ಸಾಯಿ ಪಲ್ಲವಿ ಅವರು ಸಿನಿಮಾ ಯಶಸ್ಸಿನ ಬಗ್ಗೆ ಮಾತನಾಡಿದ್ದಾರೆ. 'ಪೋಸ್ಟ್ ಪ್ರೊಡಕ್ಷನ್ ಕೆಲಸ ನಡೆಯುವಾಗ ನಾಗ ಚೈತನ್ಯ ಅವರಲ್ಲಿ ಒಂದು ಫೈಯರ್ ಇತ್ತು. ಸಿನಿಮಾ ಗೆದ್ದೇ ಗೆಲ್ಲುತ್ತದೆ ಎನ್ನುವ ಭರವಸೆಯಲ್ಲಿ ಅವರು ಇದ್ದರು. ಅವರ ಲುಕ್ ಅಥವಾ ಪರಿಶ್ರಮದಿಂದ ಅವರು ಈ ಮಾತನ್ನು ಹೇಳಿರಲಿಲ್ಲ. 'ತಾಂಡೇಲ್' ಸಿನಿಮಾ ಆಡಿಯನ್ಸ್‌ಗೆ ಭಾವನಾತ್ಮಕವಾಗಿ ಕನೆಕ್ಟ್ ಆಗಲಿದೆ ಎಂದು ಅವರಿಗೆ ಅನಿಸಿತ್ತು' ಎಂದಿದ್ದಾರೆ ಅವರು. ಸಾಯಿ ಪಲ್ಲವಿ ಅವರು ಭರ್ಜರಿಯಾಗಿ ಡ್ಯಾನ್ಸ್ ಮಾಡಿದರು.

# ಸ್ಟಾರ್ ಕ್ರಿಕೆಟಿಗನಿಗೆ ಬಿಸಿಸಿಐ ಖಡಕ್ ಎಚ್ಚರಿಕೆ



ಭಾರತೀಯ ಕ್ರಿಕೆಟ್ ತಂಡದ ಮೇಲೆ ಬಿಸಿಸಿಐ ಕಠಿಣ ನಿಯಮಗಳನ್ನು ಜಾರಿಗೆ ತಂದಿದೆ. ಆಟಗಾರರು ತಮ್ಮ ಪತ್ನಿಯರನ್ನು ಟೂರ್ನಿಗೆ ಕರೆತರಲು ಅವಕಾಶವಿಲ್ಲ ಎಂಬುದು ಒಂದು ಪ್ರಮುಖ ನಿಯಮ. ಒಬ್ಬ ಸ್ಟಾರ್ ಆಟಗಾರ ಪತ್ನಿಯನ್ನು ಕರೆತರಲು ಅನುಮತಿ ಕೋರಿದ್ದರು, ಆದರೆ ಬಿಸಿಸಿಐ ಅದನ್ನು ತಿರಸ್ಕರಿಸಿದೆ. ಇದು ತಂಡದ ಏಕಾಗ್ರತೆ ಮತ್ತು ಶಿಸ್ತಿಗೆ ಅಗತ್ಯ ಎಂದು ಬಿಸಿಸಿಐ ಹೇಳಿದೆ.

ವಾರದೊಳಗೆ 'ಚಾಂಪಿಯನ್ಸ್ ಟ್ರೋಫಿ 2025' ಆರಂಭ ಆಗಲಿದೆ. ಮೊದಲ ಪಂದ್ಯದಲ್ಲಿ ಭಾರತವು ಪಾಕಿಸ್ತಾನವನ್ನು ಎದುರಿಸಲಿದೆ. ಈ ಬಾರಿ ಚಾಂಪಿಯನ್ಸ್ ಟ್ರೋಫಿಯನ್ನು ಭಾರತ ಗೆಲ್ಲಲೇಬೇಕು ಎನ್ನುವ ಹಂಬಲದಲ್ಲಿ ಇದೆ. ಭಾರತದ ಪಂದ್ಯಗಳು ದುಬೈನಲ್ಲಿ ನಡೆಯಲಿದೆ. ಅದಕ್ಕೂ ಮೊದಲು ಟೀಂ ಇಂಡಿಯಾ ಸ್ಟಾರ್ ಕ್ರಿಕೆಟರ್ ಒಬ್ಬರು ತಮ್ಮ ಜೊತೆ ಪತ್ನಿಗೂ ಬರಲು ಅವಕಾಶ ಕೋರಿದ್ದಾರೆ ಎನ್ನಲಾಗಿದೆ. ಆದರೆ, ಇದನ್ನು ಬಿಸಿಸಿಐ ನೇರವಾಗಿ ತಿರಸ್ಕರಿಸಿದೆ. ಟೀಂ ಇಂಡಿಯಾದ ಕಳಪೆ ಪ್ರದರ್ಶನದಿಂದ ಬೇಸತ್ತ ಬಿಸಿಸಿಐ ಕೆಲವು ಕಠಿಣ ನಿಯಮಗಳನ್ನು ಜಾರಿಗೆ ತಂದಿತ್ತು. ಟೀಂ ಇಂಡಿಯಾ ಆಟಗಾರರು ತಮ್ಮ ಪತ್ನಿಯನ್ನು ಕರೆತರುವಂತಿಲ್ಲ ಎಂಬುದು ನಿಯಮಗಳಲ್ಲಿ ಒಂದಾಗಿತ್ತು. ಎಲ್ಲಾ ನಿಯಮಗಳಂತೆ ಇದನ್ನು ಕಠಿಣವಾಗಿ ಪಾಲಿಸಲೇಬೇಕು ಎಂದು ಬಿಸಿಸಿಐ ಆಟಗಾರರಿಗೆ ಹೇಳಿದೆ.

ಸ್ಟಾರ್ ಆಟಗಾರನೋರ್ವ ಚಾಂಪಿಯನ್ಸ್ ಟ್ರೋಫಿಯಲ್ಲಿ ಪತ್ನಿಯನ್ನು ಕರೆತರಲು ಅವಕಾಶ ಕೋರಿದ್ದರು ಎನ್ನಲಾಗಿದೆ. ಇತ್ತೀಚೆಗೆ ಇಂಗ್ಲೆಂಡ್ ವಿರುದ್ಧ ಅಹಮದಾಬಾದ್‌ನಲ್ಲಿ ನಡೆದ ಕೊನೆಯ ಏಕದಿನ ಪಂದ್ಯದಲ್ಲಿ ಬಿಸಿಸಿಐ ಅಧಿಕಾರಿಗಳು ಆಟಗಾರರಿಗೆ ಸ್ಟ್ರಿಕ್ಟ್ ಆಗಿ ಸೂಚನೆ ಕೊಟ್ಟಿದ್ದಾರೆ ಎನ್ನಲಾಗಿದೆ.

'ನಿಯಮಗಳ ವಿಚಾರದಲ್ಲಿ ಬಿಸಿಸಿಐ ಕೂಡ ತುಂಬಾನೇ ಗಂಭೀರವಾಗಿದೆ. ಇದರಿಂದ ಹಿಂದೆ ಹೋಗುವ ಮಾತಿಲ್ಲ ಎಂಬುದು ತಿಳಿದಿರಲಿ' ಎಂದು ಆಟಗಾರರಿಗೆ ಸೂಚನೆ ನೀಡಲಾಗಿದೆ. ಪ್ರ್ಯಾಕ್ಟಿಸ್ ಸೆಷನ್‌ನಲ್ಲಿ ಒಟ್ಟಿಗೆ ಇರಬೇಕು, ಒಟ್ಟಾಗಿ ಬಸ್‌ನಲ್ಲೇ ಸಾಗಬೇಕಿದೆ. 'ಆಟಗಾರನೋರ್ವ ಕುಟುಂಬವನ್ನು ಕರೆತರೋದಾಗಿ ಕೇಳಿದ್ದ. ಆದರೆ, ಬಿಸಿಸಿಐ ಈ ವಿಚಾರದಲ್ಲಿ ಸ್ಟ್ರಿಕ್ಟ್ ಆಗಿದೆ ಎಂದು ಅವರಿಗೆ ತಿಳಿಸಲಾಗಿದೆ' ಎಂದು ಬಿಸಿಸಿಐ ಮೂಲಗಳು ಹೇಳಿರುವುದಾಗಿ ವರದಿ ಆಗಿದೆ. ಒಬ್ಬರಿಗೆ ಈ ರೀತಿಯ ಅವಕಾಶ ಕೊಟ್ಟರೆ ಎಲ್ಲಾರೂ ಅದನ್ನೇ ದುರ್ಬಳಕೆ ಮಾಡಿಕೊಳ್ಳುವ ಸಾಧ್ಯತೆ ಇರುತ್ತದೆ. ಹೀಗಾಗಿ ಎಲ್ಲಾ ಆಟಗಾರರನ್ನು ಒಂದೇ ತಕ್ಕಡಿಯಲ್ಲಿ ಇಟ್ಟು ಬಿಸಿಸಿಐ ತೂಗುತ್ತಿದೆ.

# ಪಾಕ್‌ನಲ್ಲಿ ಕ್ರಿಕೆಟ್ ಆಟಗಾರರ ಭದ್ರತೆ ಬಗ್ಗೆ ಕಳವಳ; ಆತಂಕ

ಪಾಕಿಸ್ತಾನದಲ್ಲಿ ಕ್ರಿಕೆಟ್ ಪಂದ್ಯ ಆಡಲು ಹಲವು ದೇಶಗಳು ಭದ್ರತೆಯ ಬಗ್ಗೆ ಪ್ರಶ್ನೆ ಮಾಡುತ್ತಲೇ ಇವೆ. ಇದೇ ತಿಂಗಳಲ್ಲಿ ನಡೆಯಲಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಪಂದ್ಯವನ್ನು ಆಡಲು ಭಾರತ ಪಕಿಸ್ತಾನಕ್ಕೆ ಪ್ರಯಾಣಿಸುತ್ತಿಲ್ಲ.

ಈ ನಡುವೆ ಇತ್ತೀಚೆಗೆ ಪಾಕಿಸ್ತಾನದಲ್ಲಿ ನಡೆದ ಕಾರ್ಯಕ್ರಮವೊಂದರ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದು ಭದ್ರತೆಯ ಬಗ್ಗೆ ಹಲವಾರು ಜನರು ಪ್ರಶ್ನೆ ಎತ್ತಿದ್ದಾರೆ.

ಕರಾಚಿಯಲ್ಲಿ ಹೊಸದಾಗಿ ನವೀಕರಿಸಿದ ರಾಷ್ಟ್ರೀಯ ಕ್ರೀಡಾಂಗಣವನ್ನು ಪ್ರದರ್ಶಿಸಲು ಪಾಕಿಸ್ತಾನ ಕ್ರಿಕೆಟ್ ಮಂಡಳಿ ಭವ್ಯವಾದ ಅನಾವರಣ ಸಮಾರಂಭವನ್ನು ನಡೆಸಿತು. ಈ ಕ್ರೀಡಾಂಗಣವು ಫೆಬ್ರವರಿ 19 ರಂದು ಪಾಕಿಸ್ತಾನ ಮತ್ತು ನ್ಯೂಜಿಲೆಂಡ್ ನಡುವಿನ ಖಅಅ ಚಾಂಪಿಯನ್ಸ್ ಟ್ರೋಫಿ 2025ರ ಆರಂಭಿಕ ಪಂದ್ಯವನ್ನು ಆಯೋಜಿಸುತ್ತದೆ. ಹೆಚ್ಚುವರಿಯಾಗಿ, ಇದು ಅಫ್ಘಾನಿಸ್ತಾನ ಮತ್ತು ಇಂಗ್ಲೆಂಡ್ ವಿರುದ್ಧದ ದಕ್ಷಿಣ ಆಫ್ರಿಕಾದ ಪಂದ್ಯಗಳೂ ಇದೇ ಮೈದಾನದಲ್ಲಿ ನಡೆಯಲಿವೆ.



# ವಿಶ್ವ ಚಾಂಪಿಯನ್ನರಿಗೆ ಹೀನಾಯ ಸೋಲು!



ಆಸ್ಟ್ರೇಲಿಯಾ ತಂಡ ಐಸಿಸಿ ಚಾಂಪಿಯನ್ಸ್ ಟ್ರೋಫಿಗೆ ಮುನ್ನಾ ನಡೆದ ಶ್ರೀಲಂಕಾ ವಿರುದ್ಧದ ಸರಣಿಯಲ್ಲಿ ಹೀನಾಯ ಪ್ರದರ್ಶನ ತೋರುವ ಮೂಲಕ 2-0 ಅಂತರದಲ್ಲಿ ಸರಣಿಯಲ್ಲಿ ವೈಟ್ ವಾಶ್ ಮುಖಭಂಗ ಅನುಭವಿಸಿದೆ.

ವಿಶೇಷವೆಂದರೆ ಶ್ರೀಲಂಕಾದ ಗರಿಷ್ಠ ನಾಲ್ವರು ಆಟಗಾರರು, ಪಾಕಿಸ್ತಾನದ ಮೂವರು ಮತ್ತು ಅಫ್ಘಾನಿಸ್ತಾನ ಮೂವರು ಆಟಗಾರರು ಈ ಅತ್ಯುತ್ತಮ ಏಕದಿನ ತಂಡದಲ್ಲಿ ಸ್ಥಾನ ಪಡೆದರು. ವೆಸ್ಟ್ ಇಂಡೀಸ್‌ನಿಂದ ಆಯ್ಕೆಯಾದ ಏಕೈಕ ಆಟಗಾರನೆಂದರೆ ಶೆರ್ಫಾನ್ ರುದರ್‌ಫೋರ್ಡ್.

ವಿಶೇಷವೆಂದರೆ ಶ್ರೀಲಂಕಾದ ಗರಿಷ್ಠ ನಾಲ್ವರು ಆಟಗಾರರು, ಪಾಕಿಸ್ತಾನದ ಮೂವರು ಮತ್ತು ಅಫ್ಘಾನಿಸ್ತಾನ ಮೂವರು ಆಟಗಾರರು ಈ ಅತ್ಯುತ್ತಮ ಏಕದಿನ ತಂಡದಲ್ಲಿ ಸ್ಥಾನ ಪಡೆದರು. ವೆಸ್ಟ್ ಇಂಡೀಸ್‌ನಿಂದ ಆಯ್ಕೆಯಾದ ಏಕೈಕ ಆಟಗಾರನೆಂದರೆ ಶೆರ್ಫಾನ್ ರುದರ್‌ಫೋರ್ಡ್.

ಹಾಲಿ ವಿಶ್ವ ಚಾಂಪಿಯನ್ ಆಸ್ಟ್ರೇಲಿಯಾ ತಂಡ ಮುಂಬರುವ ಐಸಿಸಿ ಚಾಂಪಿಯನ್ಸ್ ಟ್ರೋಫಿಗೆ ಮುನ್ನಾ ನಡೆದ ಶ್ರೀಲಂಕಾ ವಿರುದ್ಧದ ಸರಣಿಯಲ್ಲಿ ಹೀನಾಯ ಪ್ರದರ್ಶನ ತೋರುವ ಮೂಲಕ 2-0 ಅಂತರದಲ್ಲಿ ಸರಣಿಯಲ್ಲಿ ವೈಟ್ ವಾಶ್ ಮುಖಭಂಗ ಅನುಭವಿಸಿದೆ. ಆ ಮೂಲಕ ಹಾಲಿ ವಿಶ್ವ ಚಾಂಪಿಯನ್ ತಂಡ ಚಾಂಪಿಯನ್ಸ್ ಟ್ರೋಫಿಗೆ ಮುನ್ನ ನಿರಾಸೆ ಅನುಭವಿಸಿದೆ.

# ವಿರಾಟ್ ಕೊಹ್ಲಿಗೆ ಏಕೆ ಕೊಡಲಿಲ್ಲ ಕ್ಯಾಪ್ಟನ್ ಪಟ್ಟ



ಪಟಿದಾರ್‌ಗೆ ನಾಯಕ ಪಟ್ಟ

ಭಾರತೀಯ ಆಟಗಾರನಿಗೆ ನಾಯಕತ್ವ ಕೊಡಬೇಕು ಎಂಬುದು ಆರ್ಸಿಬಿ ಆಲೋಚನೆ ಆಗಿತ್ತು. ವಿರಾಟ್ ಅವರು ಕೂಡ ಲಿಸ್ಟ್‌ನಲ್ಲಿ ಇದ್ದರು. ಇತ್ತೀಚೆಗೆ ವಿರಾಟ್, ಆರ್ಸಿಬಿ ವ್ಯವಹಾರಗಳ ನಿರ್ದೇಶಕ ಮೊ ಬೊಬಾಟ್ ಹಾಗೂ ಮುಖ್ಯ ಕೋಚ್ ಆಯಂಡಿ ಫ್ಲವರ್ ಒಟ್ಟಾಗಿ ಸಭೆ ನಡೆಸಿದ್ದರು. ಈ ವೇಳೆ ರಜತ್ ಅವರ ಹೆಸರು ಫೈನಲ್ ಆಗಿದೆ. 2025ರ ಐಪಿಎಲ್‌ನಲ್ಲಿ ಆರ್‌ಸಿಬಿ ತಂಡವನ್ನು ಯಾರು ಮುನ್ನಡೆಸುತ್ತಾರೆ ಎನ್ನುವ ಪ್ರಶ್ನೆ ಮೂಡಿತ್ತು. ಅದಕ್ಕೆ ಕೊನೆಗೂ ಉತ್ತರ ಸಿಕ್ಕಿದೆ. ರಾಯಲ್ ಚಾಲೆಂಜರ್ಸ್ ತಂಡಕ್ಕೆ ರಜತ್ ಪಾಟಿದಾರ್ ಅವರು ಕ್ಯಾಪ್ಟನ್ ಆಗಿದ್ದಾರೆ. ಬಹುತೇಕರು ವಿರಾಟ್ ಕೊಹ್ಲಿ ನಾಯಕನಾಗಬಹುದು ಎಂದು ಊಹಿಸಿದ್ದರು. ಆದರೆ, ಅದು ಸುಳ್ಳಾಗಿದೆ. ವಿರಾಟ್‌ಗೆ ನಾಯಕತ್ವ ಏಕೆ ನೀಡಿಲ್ಲ ಎಂಬ ಬಗ್ಗೆ ಆರ್‌ಸಿಬಿ ಸ್ಪಷ್ಟನೆ ಕೊಟ್ಟಿದೆ. ಭಾರತೀಯ ಆಟಗಾರನಿಗೆ ನಾಯಕತ್ವ ಕೊಡಬೇಕು ಎಂಬುದು ಆರ್‌ಸಿಬಿ ಆಲೋಚನೆ ಆಗಿತ್ತು. ವಿರಾಟ್ ಅವರು ಕೂಡ ಲಿಸ್ಟ್‌ನಲ್ಲಿ ಇದ್ದರು. ಇತ್ತೀಚೆಗೆ ವಿರಾಟ್, ಆರ್‌ಸಿಬಿ ವ್ಯವಹಾರಗಳ ನಿರ್ದೇಶಕ ಮೊ ಬೊಬಾಟ್ ಹಾಗೂ ಮುಖ್ಯ ಕೋಚ್ ಆಂಡಿ ಫ್ಲವರ್‌ಒಟ್ಟಾಗಿ ಸಭೆ ನಡೆಸಿದ್ದರು. ಈ ವೇಳೆ ರಜತ್ ಅವರ ಹೆಸರು ಫೈನಲ್ ಆಗಿದೆ. 'ಭಾರತದ ಆಟಗಾರರನ್ನು ನಾಯಕನನ್ನಾಗಿ ಮಾಡಬೇಕು ಎಂಬುದು ನಮ್ಮ ಆಲೋಚನೆ ಆಗಿತ್ತು.

# ಮಹಿಳಾ ಪ್ರೀಮಿಯರ್‌ಲೀಗ್‌ನಲ್ಲಿ ಮೊದಲ ಪಂದ್ಯ



2025ನೇ ಸಾಲಿನ ಮಹಿಳಾ ಪ್ರೀಮಿಯರ್ ಲೀಗ್‌ನ ಮೊದಲ ರೋಮಾಂಚಕಾರಿ ಪಂದ್ಯ ಫೆಬ್ರವರಿ 14ರಂದು, ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಜೈಂಟ್ಸ್ ನಡುವೆ ನಡೆದಿದೆ. ಪಂದ್ಯ ವಡೋದರದ ಕೋಟಂಬಿ ಕ್ರೀಡಾಂಗಣದಲ್ಲಿ ಸಂಜೆ 7:30ಕ್ಕೆ ಆರಂಭವಾಗಿದೆ. ಪ್ರತಿ ಪಂದ್ಯವನ್ನು ಜಿಯೋ ಸಿನಿಮಾ ಮತ್ತು ಸ್ಪೋರ್ಟ್ಸ್ 18ರಲ್ಲಿ ವೀಕ್ಷಿಸಬಹುದು.

2025ನೇ ಸಾಲಿನ ಮಹಿಳಾ ಪ್ರೀಮಿಯರ್ ಲೀಗ್‌ನ ಮೊದಲ ಪಂದ್ಯ ನಡೆದಿದೆ. ಹಾಲಿ ಚಾಂಪಿಯನ್ಸ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಗುಜರಾತ್ ಜಿಯಂಟ್ಸ್ ವುಮನ್ ಮುಖಾಮುಖಿ ಆಗುತ್ತಿವೆ. ಇದು ಈ ಸೀಸನ್‌ನ ಮೊದಲ ಪಂದ್ಯ ಆಗಿರುವುದರಿಂದ ಸಾಕಷ್ಟು ಕುತೂಹಲ ಮೂಡಿದೆ. ಈ ಪಂದ್ಯ ಎಲ್ಲಿ ನಡೆಯಲಿದೆ ಎಷ್ಟು ಗಂಟೆಗೆ ನಡೆಯಲಿದೆ ಮತ್ತು ಇದನ್ನು ಎಲ್ಲಿ ವೀಕ್ಷಿಸಬಹುದು ಎಂಬುದರ ಬಗ್ಗೆ ಇಲ್ಲಿದೆ ಮಾಹಿತಿ ಇಂದಿನ ವುಮನ್ ಪ್ರೀಮಿಯರ್ ಲೀಗ್‌ಸಖತ್ ಥ್ರಿಲ್ಲಿಂಗ್ ಮ್ಯಾಚ್ ಆಗುವ ಎಲ್ಲಾ ಸಾಧ್ಯತೆ ಇದೆ. ಇಂದಿನ ಪಂದ್ಯ ರಾತ್ರಿ 7.30ಕ್ಕೆ ಆರಂಭ ಆಗಲಿದೆ. ವಡೋದರದ ಕೋಟಂಬಿ ಸ್ಟೇಡಿಯಂನಲ್ಲಿ ಈ ಪಂದ್ಯ ನಡೆಯಲಿದೆ. ವಡೋದರದ ಈ ಸ್ಟೇಡಿಯಂ ಹೈ ಸ್ಕೋರ್ ಮ್ಯಾಚ್‌ಗಳಿಗೆ ಖ್ಯಾತಿ ಪಡೆದಿದೆ.

ಇದು ಬ್ಯಾಟರ್‌ಗಳ ಪಿಚ್ ಆಗಿರುವುದರಿಂದ ಹೆಚ್ಚಿನ ರನ್‌ಗಳನ್ನು ನಿರೀಕ್ಷಿಸಬಹುದು. ವಡೋದರದಲ್ಲಿ ವಾತಾವರಣ ಕೂಡ ಉತ್ತಮವಾಗಿದೆ. ಇಲ್ಲಿ ಯಾವುದೇ ಮಳೆ ಬರುವ ಸಾಧ್ಯತೆ ಜೀರೋ ಆಗಿರುವುದರಿಂದ, ಪಂದ್ಯ ನಿಲ್ಲಬಹುದು ಎಂಬ ಭಯ ಇಲ್ಲ. ಇಲ್ಲಿನ ಹವಾಮಾನ 25 ಡಿಗ್ರೀ ಸೆಲ್ಸಿಯಸ್ ಇದೆ.

ಗುಜರಾತ್ ಜಿಯಂಟ್ಸ್ ತಂಡವನ್ನು ಆಶ್ಲೀ ಗಾರ್ಡ್ನರ್ ಅವರು ಮುನ್ನಡೆಸುತ್ತಿದ್ದಾರೆ. ಆರ್‌ಸಿಬಿಗೆ ಸ್ಮೃತಿ ಮಂಧಾನ ನಾಯಕಿ. ಕಳೆದ ವರ್ಷ ಕಪ್ ಗೆದ್ದಿರುವುದರಿಂದ ಈ ಬಾರಿ ಶುಭಾರಂಭದೊಂದಿಗೆ ಪಂದ್ಯ ಆರಂಭಿಸುವ ನಿರೀಕ್ಷೆಯಲ್ಲಿ ತಂಡ ಇದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966